ಸಂಪುಟ: 22, ಸಂಚಿಕೆ: 167, ಪುಟಗಳು: 8, ಗುರುವಾರ, 27 ಮಾರ್ಚ್ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ನೇತೃ ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3






**ಸುಭಾಷಿತ**

ಗೆಲುವಿನ ಖಚಿತತೆಲ್ಲೂ ಸೋಲಿನ ಎಚ್ಚರ ಇರಬೇಕು.
। ಪಿ.ಲಂಕೇಶ್

**ಪಂಚಾಂಗ**

(ಗುರುವಾರ 27 ಮಾರ್ಚ್-2025)

- ಶ್ರೀ ಕ್ರೋಧಿನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಫಾಲ್ಗುಣ ಮಾಸ, ಕೃಷ್ಣ ಪಕ್ಷ,
- ತ್ರಯೋದಶಿ, ಶತಭಿಷ ನಕ್ಷತ್ರ.
- ರಾಹುಕಾಲ 02:00 ರಿಂದ 03:31
- ಗುಳಿಕಕಾಲ 09:26 ರಿಂದ 10:57
- ಯಮಗಂಡಕಾಲ 06:23 ರಿಂದ 07:55

## ಸಂಕ್ಷಿಪ್ತ ಸುದ್ದಿ

### ದೇವೇಗೌಡ, ಕುಮಾರಸ್ವಾಮಿ ಬೆನ್ನಲ್ಲೇ ಇನ್ನಿಬ್ಬರು ನಾಯಕರ ಭೇಟಿಗೆ ಮುಂದಾದ ಸತೀಶ್



**ನವದೆಹಲಿ:** ಶತ್ರುವಿನ ಶತ್ರು ಮಿತ್ರ ಎಂಬುದು ಎದುರಾಳಿಗಳನ್ನು ಹಣಿಯಲು ಬಳಸುವ ರಾಜಕೀಯ ರಣತಂತ್ರ. ಈಗ ಸಚಿವ ಸತೀಶ್ ಜಾರಕಿಹೊಳಿ ಅದೇ ತಂತ್ರ ಹೆಣೆದಿದ್ದಾರಾ ಎಂಬ ಅನುಮಾನ ಸೃಷ್ಟಿಯಾಗಿದೆ. ಯಾಕೆಂದರೆ, ಹನಿಟ್ರ್ಯಾಪ್ ಪ್ರಕರಣ ಸದ್ದು ಮಾಡುತ್ತಿರುವ ಹೊತ್ತಿನಲ್ಲೇ, ಹೈಕಮಾಂಡ್ ಗೆ ದೂರು ನೀಡುತ್ತೇನೆ ಪುಟ 2

### ಐಎಎಸ್ ಅಧಿಕಾರಿ ಅಂತ ಹೇಳ್ಕೊಂಡು ದೇಶ್ಯಾದ್ಯಂತ 20ಕ್ಕೂ ಅಧಿಕ ಮಹಿಳೆಯರಿಗೆ ವಂಚನೆ



**ಬೆಂಗಳೂರು:** ಮ್ಯಾಟ್ರಿಮೋನಿಯಲ್ಲಿ ಐಎಎಸ್ ಅಧಿಕಾರಿ ಎಂದು ಹೇಳಿಕೊಂಡು ಮಹಿಳೆಯರಿಗೆ ಹಣಕ್ಕಾಗಿ ವಂಚಿಸುತ್ತಿದ್ದ ಪ್ರಕರಣವೊಂದು ಬೆಳಕಿಗೆ ಬಂದಿದೆ. ಮ್ಯಾಟ್ರಿಮೋನಿ ವೈಬ್‌ಸೈಟ್‌ನಲ್ಲಿ ಜೀವನ್ ಕುಮಾರ್ ಎಂಬ ವ್ಯಕ್ತಿ ಐಡಿ ಕ್ರಿಯೇಟ್ ಮಾಡಿ ಐಎಎಸ್ ಆಫೀಸರ್ ಎಂದು ಮಹಿಳೆಗೆ ವಂಚಿಸುತ್ತಿದ್ದ. ಐಎಎಸ್, ಐಪಿಎಸ್ ಆಗಿರುವುದಾಗಿ ಹೇಳುತ್ತಿದ್ದ. ಬಳಿಕ ಮದುವೆ ಆಗುವುದಾಗಿ ನಂಬಿಸಿ ಕ್ಲೋಸ್ ಆಗಿ ಮೆಸೇಜ್ ಮಾಡಿ, ಖಾಸಗಿ ಫೋಟೊ ಹಾಗೂ ವಿಡಿಯೋ ಪಡೆಯುತ್ತಿದ್ದ. ಪುಟ 2

## ಲೋಕಸಭೆಯಲ್ಲಿ ಶ್ರೀ ಗುರುರಾಘವೇಂದ್ರ ಬ್ಯಾಂಕ್ ಹಗರಣ ಪ್ರಸ್ತಾಪಿಸಿದ ತೇಜಸ್ವಿ ಸೂರ್ಯ



**ಸಂಜೆಮುಗಿಲು:** ಅವಕಾಶ ಸಿಕ್ಕಾಗಲೆಲ್ಲಾ ಲೋಕಸಭೆಯಲ್ಲಿ ಶ್ರೀರಾಘವೇಂದ್ರ ಕೋ-ಆಪರೇಟಿವ್ ಬ್ಯಾಂಕ್ ಠೇವಣಿದಾರರ ಹಿತಾಸಕ್ತಿಗಾಗಿ ಧ್ವನಿ ಎತ್ತುತ್ತಾ 22,282 ಠೇವಣಿದಾರರ 714 ಕೋಟಿ ರೂ, ಹಣವನ್ನು ಹಿಂತಿರುಗಿಸಿ ಕೊಡಿಸುವಲ್ಲಿ ಶ್ರಮವಹಿಸಿದ್ದರೂ ಸಹ ತಮ್ಮ ರಾಜಕೀಯ ತೆವಲಿಗೆ ಶ್ರೀಗುರುರಾಘವೇಂದ್ರ ಬ್ಯಾಂಕ್ ಹಗರಣದಲ್ಲಿ ಸಂಸದ ತೇಜಸ್ವಿ ಸೂರ್ಯ ಅವರ ಹೆಸರನ್ನು ತಳಕು ಹಾಕಲು ಕ್ಷೇತ್ರದ ಕೆಲ ಕಾಂಗ್ರೆಸ್ ಪುಢಾರಿಗಳು ಹಾಗೂ ಕೆಲವು ಅತೃಪ್ತ ಆತ್ಮಗಳು ಯೋಜನೆ ರೂಪಿಸುತ್ತಿರುವ ನಡುವಲ್ಲೇ ಮತ್ತೊಮ್ಮೆ ತೇಜಸ್ವಿಸೂರ್ಯ ಅವರು ಬ್ಯಾಂಕ್ ಠೇವಣಿದಾರರ ಪರ ಲೋಕಸಭೆಯಲ್ಲಿ ಧ್ವನಿ ಎತ್ತಿದ್ದಾರೆ.

**ಸುಧಾರಣೆಗೆ ಸಂಸದ ಒತ್ತಾಯ:** ಸಾರ್ವಜನಿಕ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಗಮನಾರ್ಹ ಸುಧಾರಣೆಗಳನ್ನು ಜಾರಿಗೆ ತಂದಿದ್ದು, ಬ್ಯಾಂಕ್ ಗಳು ದಿವಾಳಿ ಎಂದು ಘೋಷಣೆಯಾದ ಕೇವಲ 90 ದಿನಗಳ ಅವಧಿಯಲ್ಲಿ ಠೇವಣಿದಾರರ ಹಣವನ್ನು ಹಿಂತಿರುಗಿಸುವ ಮಸೂದೆಯು ಕೋಟ್ಯಂತರ ನಾಗರಿಕರಿಗೆ ನೆಮ್ಮದಿಯ ನಿಟ್ಟುಸಿರು ಬಿಡುವಂತೆ ಮಾಡಿದೆ. ಈ ಹಿಂದೆ 50,000 ರೂ, ಮಾತ್ರ ಇದ್ದ ಠೇವಣಿ ವಿಮೆ ಮೊತ್ತವನ್ನು 5 ಲಕ್ಷಕ್ಕೆ ಏರಿಸುವ ಮುಖಾಂತರ ಠೇವಣಿದಾರರ ಹಾಗೂ ಹಿರಿಯ ನಾಗರಿಕರಿಗೆ ಅನುಕೂಲ ಕಲ್ಪಿಸಿದ್ದು ಗಮನಾರ್ಹವೆಂದು ಸಂಸದ ತೇಜಸ್ವಿ ಸೂರ್ಯ ಹೇಳಿದ್ದಾರೆ.

ಹಿರಿಯ ನಾಗರಿಕರ ಠೇವಣಿ ವಿಮಾ ಮೊತ್ತವನ್ನು ಶೇ 100ರಷ್ಟು ಒದಗಿಸುವ ಮೂಲಕ ಹಿರಿಯ ನಾಗರಿಕರ ಹಿತಾಸಕ್ತಿಗೆ ಸರ್ಕಾರ ಗಮನ ಹರಿಸಬೇಕಿದೆ ಎಂದರು.

ಲೋಕಸಭೆಯ ಶೂನ್ಯವೇಳೆಯಲ್ಲಿ ಬುಧವಾರ ಈ ವಿಷಯವನ್ನು ತೇಜಸ್ವಿಸೂರ್ಯ ಪ್ರಸ್ತಾಪಿಸಿದ್ದು, ಆಖಅಉಅ ಮಸೂದೆಗೆ ಹಲವು ಸುಧಾರಣೆಗಳನ್ನು ತರುವಂತೆ ಒತ್ತಾಯ ಮಾಡಿದ್ದಾರೆ.

ಸಂಸದ ತೇಜಸ್ವಿ ಸೂರ್ಯ ಅವರು ಪ್ರತಿನಿಧಿಸುತ್ತಿರುವ ಕ್ಷೇತ್ರ ವ್ಯಾಪ್ತಿಯ ಶ್ರೀ ಗುರುರಾಘವೇಂದ್ರ ಬ್ಯಾಂಕ್ ನ 22,282 ಠೇವಣಿದಾರರ 714 ಕೋಟಿ ರೂ, ಹಣವನ್ನು ಈಗಾಗಲೇ ಮರು ಪಾವತಿ ಮಾಡಲಾಗಿದ್ದು, 5 ಲಕ್ಷಕ್ಕೂ ಅಧಿಕ ಠೇವಣಿ ಮಾಡಿರುವ ಸಾರ್ವಜನಿಕರ ಹಣ ಪಾವತಿಯಾಗುವುದು ಬಾಕಿಯಿದೆ ಎಂದಿದ್ದಾರೆ.

ಪ್ರಸ್ತುತ DICGC ಮಸೂದೆಯನ್ನು ಇನ್ನಷ್ಟು ಪರಿಷ್ಕರಣೆ ಮಾಡಲು ತೇಜಸ್ವಿ ಸೂರ್ಯ ಅವರು ಕೇಳಿಕೊಂಡಂತೆ ಆಗ್ರಹ ಮಾಡಿದ್ದಾರೆ.

ಹಿರಿಯ ನಾಗರಿಕರಿಗೆ ಪೂರ್ಣ ಪ್ರಮಾಣದ ಠೇವಣಿ ವಿಮೆ ಅನ್ವಯ ಹಾಗೂ ಎಲ್ಲ ಬ್ಯಾಂಕ್ ಗಳು ಹಾಗೂ ಸಹಕಾರಿ ಬ್ಯಾಂಕ್ ಗಳು DICGC ವ್ಯಾಪ್ತಿಯಲ್ಲಿ ಬರುವಂತೆ ಕಾನೂನು ರೂಪಿಸುವಿಕೆ ಮತ್ತು ಬ್ಯಾಂಕಿಂಗ್ ಹೊರತಾದ ಹಣಕಾಸು ಸಂಸ್ಥೆಗಳನ್ನು, ಸರ್ಕಾರದ ನಿಯಮಾವಳಿಗಳ ಅಡಿಯಲ್ಲೇ ಕಾರ್ಯನಿರ್ವಹಿಸುವಂತೆ ಮಸೂದೆ ಜಾರಿಗೆ ತರುವಂತೆ ಒತ್ತಾಯ ಮಾಡಿದ್ದಾರೆ.

ಈ ರೀತಿಯ ಕ್ರಮಗಳು ದೇಶದ ಕೋಟ್ಯಂತರ ಠೇವಣಿದಾರರಿಗೆ, ಬ್ಯಾಂಕಿಂಗ್ ಕ್ಷೇತ್ರದಲ್ಲಿ ಭರವಸೆ ಹುಟ್ಟಿಸುವ ನಿಟ್ಟಿನಲ್ಲಿ ಅನುಕೂಲ ಕಲ್ಪಿಸಬಹುದು ಎಂದು ತಿಳಿಸಿದ್ದಾರೆ.

## ಕೋವಿಡ್ ಹಗರಣದ ವಿಸ್ತೃತ ಮಾಹಿತಿಗೆ ರಚನೆಯಾಗಲಿದೆ ಮತ್ತೊಂದು ಸಮಿತಿ

# ಅಧಿಕಾರಿಗಳಿಗೆ ಢವಢವ

**ಬೆಂಗಳೂರು:** ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದೆ ಎನ್ನಲಾದ ಕೋವಿಡ್ ಅಕ್ರಮದ ಕುರಿತು ಈಗಾಗಲೇ ನ್ಯಾ. ಮೈಕಲ್ ಡಿ ಕುನ್ಹಾ ಸಮಿತಿ ಮಧ್ಯಂತರ ವರದಿ ಸಲ್ಲಿಕೆ ಮಾಡಿದೆ. ಈ ವರದಿಯ ಆಧಾರದ ಮೇಲೆ ಬುಧವಾರ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಸಂಪುಟ ಉಪಸಮಿತಿ ಸಭೆ ನಡೆಯಿತು. ಸಭೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್, ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗಿಯಾಗಿದ್ದರು. ಸುದೀರ್ಘ ಎರಡು ತಾಸುಗಳ ಕಾಲ ನಡೆದ ಸಭೆಯಲ್ಲಿ ಉಪಸಮಿತಿಯು ಹಲವು ತೀರ್ಮಾನಗಳನ್ನು ಕೈಗೊಂಡಿದೆ.



**ಸಂಪುಟ ಉಪ ಸಮಿತಿ ತೀರ್ಮಾನಗಳೇನು?:** ಪ್ರತಿ 15 ದಿನಕ್ಕೊಮ್ಮೆ ಸಭೆ ಸೇರಲು ನಿರ್ಧಾರ ಮಾಡಲಾಗಿದೆ. ಕೋವಿಡ್ ವೇಳೆ ಚಾಮರಾಜನಗರ ಆಸ್ಪತ್ರೆಯಲ್ಲಿ ಆಕ್ಸಿಜನ್ ದುರಂತ ಪ್ರಕರಣ ಸಂಬಂಧ, ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಬಿ.ಎ.ಪಾಟೀಲ್ ಏಕಸದಸ್ಯ ನ್ಯಾಯಾಂಗ ಆಯೋಗ ನೀಡಿದ್ದ ವರದಿ ತಿರಸ್ಕಾರ ಮಾಡಿ, ನ್ಯಾ.ಕುನ್ಹಾ ಅವರಿಗೆ ಸಂಪುಟ ಉಪಸಮಿತಿ ಸಭೆ ಮರು ತನಿಖೆಯ ಜವಾಬ್ದಾರಿ ನೀಡಲಾಗಿದೆ.

**ಸಾರಿಗೆ ನೌಕರರ ಮುಷ್ಕರ: ಸಿಎಂ ನೇತೃತ್ವದಲ್ಲಿ ಸಭೆ:** 15 ದಿನಗಳಿಗೊಮ್ಮೆ ಸಭೆ, ಸಮಿತಿಗೆ ಹಿರಿಯ ಅಧಿಕಾರಿಗಳ ನೇಮಕ ಮಾಡುವ ಬಗ್ಗೆ ತೀರ್ಮಾನ ಕೈಗೊಳ್ಳಲಾಗಿದೆ. ಅಧಿಕಾರಿಗಳ ಕೊರತೆ ಇರುವ ಕಾರಣಕ್ಕೆ ಹಿರಿಯ ಐಎಎಸ್, ಐಪಿಎಸ್ ಅಧಿಕಾರಿಗಳನ್ನು ಸಮಿತಿಗೆ ನೇಮಕ ಮಾಡಿ ಅವರಿಗೂ ಕೆಲವು ಜವಾಬ್ದಾರಿಗಳನ್ನು ನೀಡಬೇಕು ಎಂದು ಸಭೆಯಲ್ಲಿ ಚರ್ಚಿಸಲಾಗಿದೆ. ಪುಟ 2

### ಡಿಕೆ ಶಿವಕುಮಾರ್ ಹೇಳಿದ್ದೇನು?

**ಕೋವಿಡ್ ಅಕ್ರಮಗಳ ಬಗ್ಗೆ ಮೈಕೆಲ್ ಕುನ್ಹಾ ಅವರು ಅತ್ಯಂತ ಸಮಗ್ರವಾಗಿ ವರದಿಯನ್ನು ನೀಡಿದ್ದಾರೆ. ಅದನ್ನು ಕೂಲಂಕುಷವಾಗಿ ಅಧ್ಯಯನ ಮಾಡಬೇಕಾಗುತ್ತದೆ. ಇದರಲ್ಲಿ ಕಾನೂನು ಸಂಬಂಧಿತ, ಕ್ರಿಮಿನಲ್ ಸಂಬಂಧಿತ ವಿಚಾರಗಳನ್ನು ಗಮನಿಸಲು ಸಹಾಯ ತೆಗೆದುಕೊಳ್ಳಲಾಗುತ್ತಿದೆ. ಸುಮಾರು 29 ಜನ ಅಧಿಕಾರಿಗಳು ಸಮಿತಿ ನೀಡಿರುವ ನೋಟಿಸ್ ಗೆ ಉತ್ತರ ನೀಡಿಲ್ಲ. ಅವರ ವಿರುದ್ಧ ಶಿಸ್ತುಕ್ರಮ ತೆಗೆದುಕೊಳ್ಳಲಾಗುವುದು. ಕುನ್ಹಾ ಅವರು ವರದಿಯಲ್ಲಿ ಅನೇಕ ರಾಜಕಾರಣಿಗಳ ಹೆಸರನ್ನು ಪ್ರಸ್ತಾಪಿಸಿದ್ದಾರೆ. ಇದರ ಬಗ್ಗೆ ನಮಗೂ ಅರಿವಿದೆ, ಸೂಕ್ತ ಕಾಲದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.**



## ಹೋಟೆಲ್‌ಗಳಿಗೆ ಬರೆ

### ತಿಂಗಳಿಗೆ 30 ಸಾವಿರ ಕಸದ ಸೆಸ್!



**ಬೆಂಗಳೂರು:** ಮೆಟ್ರೋ ದರ, ಬಸ್ ದರ, ವಿದ್ಯುತ್ ದರ ಏರಿಕೆಯಾಯ್ತು. ಈಗ ಏಪ್ರಿಲ್ 1ರಿಂದ ಕಸದ ಸೆಸ್ ಬರೆ ಶುರುವಾಗಲಿದೆ. ಬೆಂಗಳೂರಿನ ಹೋಟೆಲ್‌ಗಳಿಗೆ ಕಸದ ಸೆಸ್ ಬರೆಯ ಬಿಸಿ ತಟ್ಟಿದ್ದು, ಈ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ದರ ಏರಿಕೆಯ ಹೊರೆ ಜನರ ಪಾಲಿಗೆ ಬಿಸಿ ತುಪ್ಪದಂತಾಗಿದೆ. ಇದರ ಮಧ್ಯೆ ಈಗ ಏಪ್ರಿಲ್ ನಿಂದ ಕಸದ ಸೆಸ್ ಬರೆ ಬೀಳಲಿದೆ. ಕಸದ ಸೆಸ್‌ಗೆ ಈಗ ಬೆಂಗಳೂರು ಹೋಟೆಲ್ ಅಸೋಸಿಯೇಷನ್ ಕಿಡಿಕಾರಿದೆ. ಪುಟ 2




**ದಿನೇ ದಿನೇ ಬಿಸಿಲ ಝಳ ಕಾವೇರುತ್ತಿದ್ದು ಮುಂದಿನ ಎರಡು ತಿಂಗಳು ಬಿರು ಬೇಸಿಗೆ ಇರುವ ಕಾರಣ ಚನ್ನಪಟ್ಟಣ ತಾಲೂಕಿನ ಜನತೆಗೆ ಕುಡಿಯುವ ನೀರಿನ ಸಮಸ್ಯೆ ತಲೆದೋರಬಾರದೆಂದು ಮುಂಜಾಗ್ರತ ಕ್ರಮವಾಗಿ ಬುಧವಾರ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ವಾಟರ್ ಬೋರ್ಡ್ ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಭೆ ನಡೆಸಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಶಾಸಕ ಸಿ.ಪಿ.ಯೋಗೇಶ್ವರ್ ಸೂಚಿಸಿದರು.**

### ಬೆಟ್ಟಳ್ಳಿ ಮಾರಮ್ಮ ಜಾತ್ರಾ ಮಹೋತ್ಸವ

## 18 ಅಡಿ ಉದ್ದದ ಸರಳಲ್ಲಿ ಬಾಯಿ ಬೀಗ

**ಚಾಮರಾಜನಗರ:** ಹನೂರು ಪಟ್ಟಣದ ಗ್ರಾಮ ದೇವತೆ ಬೆಟ್ಟಳ್ಳಿ ಮಾರಮ್ಮ ಜಾತ್ರಾ ಮಹೋತ್ಸವದ ಹಿನ್ನೆಲೆ ಬುಧವಾರದಂದು 3,000ಕ್ಕೂ ಹೆಚ್ಚು ಭಕ್ತಾದಿಗಳು ಸಣ್ಣ ಬಾಯಿ ಬೀಗ ಹಾಕಿಕೊಂಡು ಮಾರಮ್ಮನಿಗೆ ಹರಕೆ ತೀರಿಸಿದರು. ಜೊತೆಗೆ, 103 ಮಂದಿ 18-20 ಅಡಿ ಉದ್ದದ ಸರಳಗಳ ಬಾಯಿ ಬೀಗ ಧರಿಸಿ ಮಾರಮ್ಮನಿಗೆ ನಮಿಸಿದರು.

ದೊಡ್ಡ ಬಾಯಿಬೀಗ ಹಾಕಿಕೊಂಡ ಭಕ್ತರು ಕಳೆದ ಒಂದು ವಾರದಿಂದ ಮಾರಮ್ಮನ ದೇವಾಲಯದಲ್ಲಿ ಸೇವೆ ಸಲ್ಲಿಸಿ ಬೆಳಗ್ಗೆ ತಣ್ಣೀರು ಸ್ನಾನ ಮಾಡಿ, ಉಪವಾಸವಿದ್ದ 103 ಮಂದಿ ಭಕ್ತಾದಿಗಳು 18ರಿಂದ 20 ಅಡಿ ಸರಳನ್ನು ಬಾಯಿಗೆ ಚುಚ್ಚಿಕೊಂಡು ಭಕ್ತಿ ಪರಾಕಾಷ್ಠೆ ಮೆರೆದರು. ಪುಟ 2



### ಆಲೂಗಡ್ಡೆ ದರ ತೀವ್ರ ಕುಸಿತ

## ಕೋಲ್ಡ್ ಸ್ಟೋರೇಜ್‌ಗೆ ಭಾರಿ ಡಿಮ್ಯಾಂಡ್



**ಚಿಕ್ಕಬಳ್ಳಾಪುರ:** ಒಂದು ಕಾಲದಲ್ಲಿ ಮಾಜಿ ಪ್ರಧಾನಮಂತ್ರಿ ಹೆಚ್.ಡಿ ದೇವೇಗೌಡರು ಚಿಕ್ಕಬಳ್ಳಾಪುರದಿಂದ ಬಿತ್ತನೆ ಆಲೂಗಡ್ಡೆ ಖರೀದಿ ಮಾಡಿ ಹಾಸನದಲ್ಲಿ ಆಲೂಗಡ್ಡೆ ಬೆಳೆಯುತ್ತಿದ್ದರು. ಅಂತಹ ಐತಿಹ್ಯವಿರುವ ಜಿಲ್ಲೆಯಲ್ಲಿ ಈ ಬಾರಿಯೂ ರೈತರು ಭರ್ಜರಿ ಆಲೂಗಡ್ಡೆ ಬೆಳೆದಿದ್ದಾರೆ. ಆದರೆ ಬೆಲೆ ಮಾತ್ರ ಪಾತಾಳಕ್ಕೆ ಕುಸಿದಿದೆ. ಇದರಿಂದ ಒಂದೆರೆಡು ತಿಂಗಳು ದರ ಬರುವವರೆಗೂ ಕೋಲ್ಡ್ ಸ್ಟೋರೇಜ್‌ನಲ್ಲಿ ಆಲೂಗಡ್ಡೆ ದಾಸ್ತಾನು ಮಾಡಲು ರೈತರು ಮುಗಿಬಿದ್ದಿದ್ದು, ವಾರಗಟ್ಟಲೇ ಬಿರು ಬಿಸಲಿನಲ್ಲೇ ಕಾಯುವಂತಾಗಿದೆ. ಈ ಕುರಿತು ಒಂದು ವರದಿ ಇಲ್ಲಿದೆ.

ಚಿಕ್ಕಬಳ್ಳಾಪುರ ನಗರ ಹೊರವಲಯದ ಖಾಸಗಿ ನಂದಿ ಕೋಲ್ಡ್ ಸ್ಟೋರೇಜ್ ಕೇಂದ್ರದ ಬಳಿ ಟ್ರ್ಯಾಕ್ಟರ್, ಲಾರಿ ಸೇರಿದಂತೆ ಟೆಂಪೋಗಳಲ್ಲಿ ಮೂಟೆಗಟ್ಟಲೇ ಆಲೂಗಡ್ಡೆಗಳನ್ನ ಹೊತ್ತು ರೈತರು ಬಂದಿರುತ್ತಾರೆ. ಪುಟ 2

### ಬಿಜೆಪಿಯಿಂದ ಯತ್ನಾಳ್ ಉಚ್ಚಾಟನೆ

## ಪರಿಣಾಮಗಳೇನು?

**ಬೆಂಗಳೂರು:** ವಿಜಯಪುರದ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್‌ಗೆ ಬಿಜೆಪಿ ಗೇಟ್‌ಪಾಸ್ ನೀಡಿದೆ. ಮುಂದಿನ 6 ವರ್ಷಗಳ ಕಾಲ ಬಿಜೆಪಿಯಿಂದ ಯತ್ನಾಳ್ ರನ್ನ ಉಚ್ಚಾಟನೆ ಮಾಡಲಾಗಿದೆ. ಬಿಜೆಪಿ ಕೇಂದ್ರೀಯ ಶಿಸ್ತು ಸಮಿತಿ ಉಚ್ಚಾಟನೆ ಮಾಡಿ ಮಾರ್ಚ್ 26 ಆದೇಶ ಹೊರಡಿಸಿದೆ. ಕಳೆದ ಫೆಬ್ರವರಿ 10ರಂದು ಕೇಂದ್ರೀಯ ಶಿಸ್ತು ಸಮಿತಿ ಯತ್ನಾಳ್‌ಗೆ ನೋಟಿಸ್ ಜಾರಿ ಮಾಡಿತ್ತು. ಈ ನೋಟಿಸ್ ನೀಡಿದ ಬಳಿಕವೂ ಪಕ್ಷದ ಶಿಸ್ತನ್ನ ಉಲ್ಲಂಘಿಸಲಾಗಿದೆ ಎಂದು ಈ ತೀರ್ಮಾನ ಕೈಗೊಳ್ಳಲಾಗಿದೆ. ಈ ಮೂಲಕ ಪಕ್ಷದ ಪ್ರಾಥಮಿಕ ಸದಸ್ಯತ್ವವನ್ನೂ ರದ್ದುಗೊಳಿಸಿ ಇಲ್ಲಿವರೆಗೂ ಯತ್ನಾಳ್ ಹೊಂದಿದ್ದ ಎಲ್ಲಾ ಪಕ್ಷದ ಹುದ್ದೆಗಳಿಂದಲೂ ಗೇಟ್‌ಪಾಸ್ ನೀಡಲಾಗಿದೆ.

ಹಿಂದಿನ ಶೋಕಾಸ್ ನೋಟಿಸ್‌ಗಳಿಗೆ ಪ್ರತಿಕ್ರಿಯೆಯಾಗಿ ಉತ್ತಮ ನಡವಳಿಕೆಯ ಭರವಸೆಗಳನ್ನು ನೀಡಿದ್ದೀರಿ. ಆದರೂ ನೀವು ಪಕ್ಷದ ಶಿಸ್ತಿನ್ನ ಉಲ್ಲಂಘಿಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಹೀಗಾಗಿ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ತಕ್ಷಣದಿಂದ ಜಾರಿಗೆ ಬರುವಂತೆ ನಿಮ್ಮನ್ನು 6 ವರ್ಷಗಳ ಅವಧಿಗೆ ಉಚ್ಚಾಟಿಸಲು ನಿರ್ಧರಿಸಲಾಗಿದೆ. ನೀವು ಇಲ್ಲಿಯವರೆಗೆ ಹೊಂದಿದ್ದ ಯಾವುದೇ ಪಕ್ಷದ ಹುದ್ದೆಯಿಂದ ನಿಮ್ಮನ್ನು ತೆಗೆದುಹಾಕಲಾಗಿದೆ ಎಂದು ಉಚ್ಚಾಟನೆ ಆದೇಶದಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ.



**ಯತ್ನಾಳ್ ಇನ್ಮುಂಡ ಅನ್ ಅಟ್ಯಾಚ್ಡ್ ಮೆಂಬರ್:** ಬಸನಗೌಡ ಪಾಟೀಲ್ ಯತ್ನಾಳ್ ರನ್ನ ವಿಧಾನಸಭೆಯ ನಿಯಮದ ಪುಸ್ತಕದಲ್ಲಿ ಅನ್ ಅಟ್ಯಾಚ್ಡ್ ಮೆಂಬರ್ ಎಂದು ಪರಿಗಣಿಸಲಾಗುತ್ತೆ. ಪಕ್ಷದ ಯಾವುದೇ ವಿಪ್ ಯತ್ನಾಳ್‌ಗೆ ಅನ್ವಯಿಸುವುದಿಲ್ಲ. ಪುಟ 2




ಸಂಜೆ ಮುಗಿಲು
ಗುರುವಾರ
27.3.2025



# ಯುಗಾದಿ 2000 ಹೆಚ್ಚುವರಿ ಬಸ್ಸುಗಳ ವಿಶೇಷ ಸಾರಿಗೆ ವ್ಯವಸ್ಥೆ

**ಬೆಂಗಳೂರು:** ರಾಜ್ಯ ರಸ್ತೆ ಸಾರಿಗೆ ನಿಗಮವು, ಮಾರ್ಚ್ 30 ರಂದು ಚಂದ್ರಮಾನ ಯುಗಾದಿ, ಮಾರ್ಚ್ 31 ರಂದು ರಂಜಾನ್ ಹಬ್ಬವಿರುವುದರಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ 2025 ಮಾರ್ಚ್ 28 ರಿಂದ ಮಾರ್ಚ್ 30 ರವರೆಗೆ ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ 2000 ಹೆಚ್ಚುವರಿ ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಿದೆ.

ರಾಜ್ಯದ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ಮಾರ್ಚ್ 31 ರಂದು ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಬ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬಾದ್ ಮುಂತಾದ ಸ್ಥಳಗಳಿಗೆ ವಿಶೇಷ ಕಾರ್ಯಾಚರಣೆ ಸೇವೆ ಒದಗಿಸಲಿದೆ.

ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ ಮಾರ್ಗದ ಕಡೆ ಕಾರ್ಯಾಚರಣೆ. ತಮಿಳುನಾಡು ಮತ್ತು ಕೇರಳ ಕಡೆಗೆ ಅಂದರೆ ಮಧುರೈ, ಕುಂಭಕೋಣಂ, ಚೆನ್ನೈ, ಕೊಯಮತ್ತೂರ್, ತಿರುಚಿ, ಪಾಲಕ್ಕಾಡ್, ತ್ರಿಶೂರ್, ಏರ್ನಾಕುಲಂ, ಕೋಯಿಕೋಡ್, ಕ್ಯಾಲಿಕಟ್ ಮುಂತಾದ ಸ್ಥಳಗಳಿಗೆ ಹೋಗುವ ಪ್ರತಿಷ್ಠಿತ ಸಾರಿಗೆಗಳನ್ನು ಶಾಂತಿನಗರದಲ್ಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಾಗುವುದು.



ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ / ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸಬಹುದಾಗಿದೆ.

ಇ-ಟಿಕೇಟ್ ಬುಕಿಂಗ್‌ನ್ನು www.ksrtc.karnataka.gov.in ವೆಬ್‌ಸೈಟ್ ಮುಖಾಂತರ ಮಾಡಬಹುದಾಗಿದೆ. ಸಾರ್ವಜನಿಕ ಪ್ರಯಾಣಿಕರು ಕರ್ನಾಟಕ ಹಾಗೂ ಅಂತರರಾಜ್ಯದಲ್ಲಿ ಇರುವ ಬುಕಿಂಗ್ ಕೌಂಟರ್‌ಗಳ ಮೂಲಕ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದಾಗಿದೆ.

ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟು ಕಾಯ್ದಿರಿಸಿದಲ್ಲಿ ಶೇಕಡ 5 ರಷ್ಟು ರಿಯಾಯಿತಿ ನೀಡಲಾಗುವುದು ಹಾಗೂ ಹೋಗುವ ಮತ್ತು ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ ಶೇಕಡ 10 ರಷ್ಟು ರಿಯಾಯಿತಿ ನೀಡಲಾಗುವುದು.

ನೆರೆ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ, ಮಹಾರಾಷ್ಟ್ರ ಹಾಗೂ ಪುದುಚೆರಿಯಲ್ಲಿ ಇರುವ ಪ್ರಮುಖ ನಗರಗಳಲ್ಲಿ ನಿಗಮದ ಮುಂಗಡ ಆಸನಗಳನ್ನು ಕಾಯ್ದಿರಿಸುವ ಕೌಂಟರ್‌ಗಳು ಇದ್ದು, ಇವುಗಳ ಮೂಲಕ ಸಹ ಮುಂಗಡವಾಗಿ ಆಸನಗಳನ್ನು ನಿಗಮದ ಸಾರಿಗೆಗಳಿಗೆ ಕಾಯ್ದಿರಿಸಬಹುದಾಗಿದೆ.

ಕಾರ್ಯಾಚರಣೆ ಮಾಡಲಾಗುವ ಹೆಚ್ಚುವರಿ ಸಾರಿಗೆಗಳು, ಅವುಗಳು ಹೊರಡುವ ಸ್ಥಳ ಹಾಗೂ ವೇಳಾಪಟ್ಟಿ ವಿವರಗಳನ್ನು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅಂತರ್‌ಜಾಲ ವ್ಯವಸ್ಥೆಯಲ್ಲಿ ಹಾಗೂ ಕೆಎಸ್‌ಆರ್‌ಟಿಸಿ ನಿಗಮದ ವೆಬ್‌ಸೈಟ್ ನಲ್ಲಿ ಸಾರ್ವಜನಿಕ ಮಾಹಿತಿಗಾಗಿ ಒದಗಿಸಲಾಗಿದೆ ಹಾಗೂ ಸದರಿ ಹೆಚ್ಚುವರಿ ಸಾರಿಗೆಗಳಲ್ಲಿ ಸಂಚರಿಸುವ ಪ್ರಯಾಣಿಕರು ಕಾಯ್ದಿರಿಸುವ ಮುಂಗಡ ಚೀಟಿಗಳಲ್ಲೂ ಕೂಡ ವಾಹನ ಹೊರಡುವ ಸ್ಥಳದ ವಿವರ ನಮೂದಿಸಲಾಗಿದೆ.

ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು/ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುವುದು ಎಂದು ಮುಖ್ಯ ಸಂಚಾರ ವಿಭಾಗದ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಚ್ಚುವರಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ

**ಹುಬ್ಬಳ್ಳಿ / ಬೆಂಗಳೂರು:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಿಂದ ಯುಗಾದಿ ಮತ್ತು ರಂಜಾನ ಹಬ್ಬದ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ, ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 137 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. 2025 ಮಾರ್ಚ್ 28 ಮತ್ತು 29 ರಂದು ವಾರಾಂತ್ಯ ದಿನಗಳು ಹಾಗೂ ಮಾರ್ಚ್ 30 ರಂದು ಯುಗಾದಿ ಮತ್ತು ಮಾರ್ಚ್ 31 ರಂದು ರಂಜಾನ್ ಹಬ್ಬವಿರುವುದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು. ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಮಾರ್ಚ್ 28 ರಿಂದ 30 ವರೆಗೆ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈ ವಿಶೇಷ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.



## ಮುಖ್ಯ ಪರೀಕ್ಷೆ ಮುಂದೂಡಿಕೆ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗವು 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ 384 ಹುದ್ದೆಗಳಿಗೆ ಮುಖ್ಯ ಪರೀಕ್ಷೆಯ ಅಧಿಸೂಚನೆಯನ್ನು 2025 ಫೆಬ್ರವರಿ 13 ರಂದು ಪ್ರಕಟಿಸಿ, ಮುಖ್ಯ ಪರೀಕ್ಷೆಯನ್ನು 2025 ಮಾರ್ಚ್ 28, 29, ಏಪ್ರಿಲ್ 1 ಮತ್ತು 2 ರಂದು ನಡೆಸಲು ದಿನಾಂಕ ನಿಗದಿಪಡಿಸಲಾಗಿತ್ತು. ಕಾರಣಾಂತರಗಳಿಂದ ಈ ಪರೀಕ್ಷೆಯ ದಿನಾಂಕವನ್ನು ಮುಂದೂಡಲಾಗಿದ್ದು, ಆಯೋಗದ ಅಂತರ್ಜಾಲದಲ್ಲಿ ಶೀಘ್ರದಲ್ಲಿ ಮುಂದಿನ ಪರೀಕ್ಷಾ ದಿನಾಂಕವನ್ನು ಪ್ರಕಟಿಸಲಾಗುವುದು ಎಂದು ಆಯೋಗದ ಕಾರ್ಯದರ್ಶಿ ತಿಳಿಸಿದ್ದಾರೆ.

# ಆರ್ಥಿಕ ಪ್ರಗತಿಗೆ ಶೈಕ್ಷಣಿಕ ಜ್ಞಾನ ಪ್ರೇರಕ

### ಬೆಂ.ನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಲಿಂಗರಾಜ ಗಾಂಧಿ ಅಭಿಮತ

**ಬೆಂಗಳೂರು:** ಆರ್ಥಿಕತೆಯ ಪ್ರಗತಿಗೆ ಶೈಕ್ಷಣಿಕ ಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯ ಅತಿಮುಖ್ಯ ಸಾಧನವಾಗಿದೆ ಎಂದು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ.ಲಿಂಗರಾಜ ಗಾಂಧಿ ಅವರು ಪ್ರತಿಪಾದಿಸಿದ್ದಾರೆ.

ಸೆಂಟ್ರಲ್ ಕಾಲೇಜಿನ ಆವರಣದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸ್ಕೂಲ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಮತ್ತು ಇಂಟರ್ ನ್ಯಾಷನಲ್ ಇನ್ ಸ್ಟಿಟ್ಯೂಟ್ ಆಫ್ ಬ್ಯುಸಿನೆಸ್ ಸ್ಟಡೀಸ್ (ಐಐಬಿಎಸ್) ಜಂಟಿ ಆಶ್ರಯದಲ್ಲಿ ಏರ್ಪಡಿಸಿದ್ದ 'ನೆಕ್ಸಸ್ ಎಡ್ಜ್ 2025' ವಿಚಾರಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶೈಕ್ಷಣಿಕ ವಲಯ ಮತ್ತು ಉದ್ಯಮ ರಂಗದ ನಡುವೆ ನಿಕಟ ಸಂಬಂಧ ಬೆಸೆಯುವ ಅಗತ್ಯವನ್ನು ಒತ್ತಿ ಹೇಳಿದ ಕುಲಪತಿಗಳು ಈ ನಿಟ್ಟಿನಲ್ಲಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯವು ಗಂಭೀರ ಪ್ರಯತ್ನದಲ್ಲಿ ತೊಡಗಿದೆ ಎಂದು ತಿಳಿಸಿದರು.

ವಿದೇಶಿ ವಿಶ್ವವಿದ್ಯಾಲಯಗಳು ಮತ್ತು ಮುಂಚೂಣಿ ಉದ್ಯಮ ಸಂಸ್ಥೆಗಳ ಸಹಭಾಗಿತ್ವದಲ್ಲಿ ಪರಿಸರ, ಆರೋಗ್ಯ, ಸ್ಮಾರ್ಟ್ ಸಿಟಿ ಯೋಜನೆ ಮುಂತಾದ ಮಹತ್ವದ ವಿಷಯಗಳ ಕುರಿತಂತೆ ಚಿಂತನ ಮಂಥನ ನಡೆಸಲಾಗಿದೆ ಎಂದು ಅವರು ವಿವರಿಸಿದರು.

ದೇಶದ ಮಾಹಿತಿ ತಂತ್ರಜ್ಞಾನ ರಾಜಧಾನಿ ಎಂಬ ಖ್ಯಾತಿಯ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಲಭ್ಯವಿರುವ ವಿಪುಲ ಉದ್ಯೋಗ ಅವಕಾಶಗಳನ್ನು ಬಾಚಿಕೊಳ್ಳಲು ಅಗತ್ಯ ತರಬೇತಿಯೊಂದಿಗೆ ಸನ್ನದ್ಧರಾಗುವಂತೆ ವಿದ್ಯಾರ್ಥಿ ಸಮೂಹವನ್ನು ಪ್ರೊ.ಗಾಂಧಿ ಉತ್ತೇಜಿಸಿದರು.

ಪ್ರಧಾನ ಭಾಷಣ ಮಾಡಿದ ಇನ್ಫೋಸಿಸ್ ಸಹ ಉಪಾಧ್ಯಕ್ಷರಾದ ವಿಕ್ಟರ್ ಸುಂದರರಾಜ್ ಆಧುನಿಕ ಮನುಷ್ಯನ ಬದುಕಿನಲ್ಲಿ ತಂತ್ರಜ್ಞಾನದ ಪ್ರಭಾವ ಹಾಸುಹೊಕ್ಕಾಗಿದ್ದು ಸಕಲ ಕ್ಷೇತ್ರಗಳಲ್ಲೂ ವ್ಯಾಪಿಸಿದೆ ಎಂದು ವಿವರಿಸಿದರು. ಐಟಿ ಉದ್ಯಮ ವಲಯದಲ್ಲಿ ಸದ್ಯ ಕೆಲಸ ಮಾಡುತ್ತಿರುವ ಶೇ.70ರಷ್ಟು ನೌಕರರು ಭವಿಷ್ಯದ ತಂತ್ರಜ್ಞಾನ ಕೌಶಲ್ಯ ಸವಾಲುಗಳನ್ನು ನಿಭಾಯಿಸಲು ಅಸಮರ್ಥರಾಗಿದ್ದಾರೆಂದು ಅವರು ವಿಶ್ಲೇಷಿಸಿದರು.



ತಂತ್ರಜ್ಞಾನ ಬೆಳವಣಿಗೆಯ ವೇಗದೊಂದಿಗೆ ಹೆಜ್ಜೆ ಹಾಕಲು ನೆರವಾಗುವ ಉದ್ದೇಶದಿಂದ ಇನ್ಫೋಸಿಸ್ ಸಂಸ್ಥೆ ಸುಮಾರು 22 ಸಾವಿರ ಆನ್‌ಲೈನ್ ಕೋರ್ಸ್‌ಗಳನ್ನು ಉಚಿತವಾಗಿ ಒದಗಿಸುತ್ತಿದೆ ಎಂದು ಸುಂದರರಾಜ್ ತಿಳಿಸಿದರು.

ಯಶಸ್ಸಿನಲ್ಲಿ ಕೌಶಲ್ಯದ ಜೊತೆಗೆ ಸಕಾರಾತ್ಮಕ ಮನೋಭಾವ ಅತಿಮುಖ್ಯ ಪಾತ್ರ ವಹಿಸುತ್ತದೆ ಎಂದು ಪ್ರತಿಪಾದಿಸಿದ ಯುವ ಉದ್ಯಮಿ ಸ್ಮಾರ್ಟೆಡ್ ಇನ್ನೋವೇಷನ್ಸ್ ಸಂಸ್ಥಾಪಕ ಸಾಯಿ ಶ್ರೀಕರ್ ತಮ್ಮ ವೃತ್ತಿ ಜೀವನದ ಅನುಭವಗಳನ್ನು ಹಂಚಿಕೊಂಡರು.

ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಎಸ್‌ಎಂಎಸ್ ಮುಖ್ಯಸ್ಥರಾದ ಡಾ. ನಿರ್ಮಲ ಉದ್ಯಮ ವಲಯದ ಅಗತ್ಯಗಳಿಗೆ ತಕ್ಕಂತೆ ಪಠ್ಯಕ್ರಮ ಹೊಂದಾಣಿಕೆಯ ಪ್ರಯತ್ನ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಪ್ರಾಧ್ಯಾಪಕರಾದ ಡಾ.ರಿತಿಕಾ ಸಿನ್ಹಾ ಸ್ವಾಗತಿಸಿದರು. ಐಐಬಿಎಸ್ ಪ್ರಿನ್ಸಿಪಾಲ್ ಡಾ. ಟಿ. ಜಗ್ಗಯ್ಯ ವಂದಿಸಿದರು.

ಹಣಕಾಸು, ಮಾರ್ಕೆಟಿಂಗ್, ಕೃತಕ ಬುದ್ಧಿಮತ್ತೆ ಮತ್ತು ಮಾನವ ಸಂಪನ್ಮೂಲ ಹಾಗೂ ಉದ್ಯಮಶೀಲತೆ ವಿಷಯಗಳ ಕುರಿತು ಸಂವಾದ ಗೋಷ್ಠಿಗಳನ್ನು ಆಯೋಜಿಸಲಾಗಿತ್ತು.

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸಂಯೋಜಿತ ಮ್ಯಾನೇಜ್‌ಮೆಂಟ್ ಕಾಲೇಜುಗಳ ಪ್ರಾಂಶುಪಾಲರು, ನಿರ್ದೇಶಕರು ಮತ್ತು ಬೋಧಕ ಸಿಬ್ಬಂದಿ ಹಾಗೂ ಅಪಾರ ಸಂಖ್ಯೆಯ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



ಭಾರತಕ್ಕೆ ಎಸ್ಟೋನಿಯಾದ ರಾಯಭಾರಿ ಶ್ರೀಮತಿ ಮಾರ್ಜೆ ಲುಪ್ ನೇತೃತ್ವದ ನಿಯೋಗವು ಬೆಂಗಳೂರಿನ ರಾಜಭವನದಲ್ಲಿ ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿತು.

## ಮಲೆ ಮಹದೇಶ್ವರ ಬೆಟ್ಟ: ಅಭಿವೃದ್ಧಿ ಪ್ರಾಧಿಕಾರದ ಮಾಸ್ಟರ್ ಪ್ಲ್ಯಾನ್ ಕುರಿತು ಸಭೆ

**ಚಾಮರಾಜನಗರ:** ಜಿಲ್ಲೆಯ ಮಲೆ ಮಾದೇಶ್ವರ ಬೆಟ್ಟದಲ್ಲಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಮಾಸ್ಟರ್ ಪ್ಲಾನ್ ಕುರಿತು ಶಾಸಕ ಎಂ ಆರ್ ಮಂಜುನಾಥ್ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ರವರ ಅಧ್ಯಕ್ಷತೆಯಲ್ಲಿ ಸಭೆ ಜರುಗಿತು .

ಚಾಮರಾಜನಗರ ಜಿಲ್ಲೆಯ ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಮಾಸ್ಟರ್ ಪ್ಲಾನ್ ಆವರಣದಲ್ಲಿ ಒತ್ತುವರಿ ಕುರಿತು ಮಲೆ ಮಾದೇಶ್ವರ ನಾಗಮಲೆ ಭವನದಲ್ಲಿ ನಡೆದ ಸಭೆಯಲ್ಲಿ ಚರ್ಚಿಸಲಾಯಿತು

ಮಲೆ ಮಹದೇಶ್ವರ ಬೆಟ್ಟ ಮಾಸ್ಟರ್ ಪ್ಲಾನ್ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿಗಳನ್ನು ನಡೆಸುವ ಸಂಬಂಧ ಅಧಿಕಾರಿಗಳ ಸಭೆಯನ್ನು ಕರೆಯಲಾಗಿದೆ. ಅಂತೇಯೇ ಸರ್ವೆ ಕಾರ್ಯ ನಡೆಸಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ಮಾದರಿ ಧಾರ್ಮಿಕ ಕ್ಷೇತ್ರವನ್ನಾಗಿಸಲು ಕ್ರಮವಹಿಸಲಾಗುವುದು. ಹನೂರಿನಿಂದ ಮಲೆ ಮಹದೇಶ್ವರ ಬೆಟ್ಟಕ್ಕೆ ಕೆ ಶಿಫ್ ರಸ್ತೆ ಕಾಮಗಾರಿ ಕೈಗೊಳ್ಳುವುದು ಸೇರಿದಂತೆ ಇನ್ನಿತರೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದರು.ಅಲ್ಲದೆ ಮಾದೇಶ್ವರ ಬೆಟ್ಟದ ಮಾಸ್ಟರ್ ಪ್ಲಾನ್ ಆವರಣದ ಅರಣ್ಯದಂಚಿನಲ್ಲಿ ಬರುವ ವಿವಿಧ ಭಾಗಗಳಲ್ಲಿ ಇರುವ ಜಮೀನನ್ನು ತುರ್ತಾಗಿ ಸರ್ವೆ ನಡೆಸಿ ವರದಿ ನೀಡುವಂತೆ ಸೂಚನೆ ನೀಡಲಾಯಿತು. ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಬೇಟಿ ಪ್ರಯಾಣಿಕರಿಗೆ ಅನುಕೂಲ ವಾಗುವ ನಿಟ್ಟಿನಲಿ ಸೌಚಾಲಯ ನಿರ್ಮಿಸುವಂತೆ ಕೆಎಸ್‌ಆರ್‌ಟಿಸಿ ಡಿಸಿ ಅವರಿಗೆ ತಿಳಿಸಿದೆ. ಇದಲ್ಲದೆ ಡಾರ್ಮೆಟ್ರಿ ಹತ್ತಿರ ನೂತನವಾಗಿ ಲೋಕೋಪಯೋಗಿ ಇಲಾಖೆಯ ವತಿಯಿಂದ 95 ಲಕ್ಷ ರೂ ನಿರ್ಮಿಸಲಾಗುತ್ತಿರುವ ಸೌಚಾಲಯ ಹಾಗೂ ಸ್ನಾನದ ಗೃಹ ಕಾಮಗಾರಿಯನ್ನು ವೀಕ್ಷಣೆ ಮಾಡಿ ತುರ್ತಾಗಿ ಕೆಲಸವನ್ನು ಮುಗಿಸುವಂತೆ ಸಂಬಂಧ ಪಟ್ಟ ಇಂಜಿನೀಯರ್ ಗಳಿಗೆ ಸೂಚನೆಯನ್ನು ನೀಡಲಾಯಿತು. ಇದೇ ಸಂದರ್ಭದಲ್ಲಿ ಪ್ರಾಧಿಕಾರದ ಕಾರ್ಯದರ್ಶಿ ರಘು, ಉಪ ಕಾರ್ಯದರ್ಶಿ ಚಂದ್ರಶೇಖರ್ ,ಕೊಳ್ಳೇಗಾಲ ಉಪವಿಭಾಗ ಅಧಿಕಾರಿ ಮಹೇಶ್,ತಹಸೀಲ್ದಾರ್ ಗುರುಪ್ರಸಾದ್, ವಲಯ ಅರಣ್ಯಾಧಿಕಾರಿ ಅಮಿತ್, ಕೆಎಸ್‌ಆರ್ಟಿಸಿ ಡಿಸಿ ಅಶೋಕ್,ಮಲ್ಲೆ ಮಹದೇಶ್ವರ ಬೆಟ್ಟದ ಪೊಲೀಸ್ ಇನ್ಸ್ಪೆಕ್ಟರ್ ಜಗದೀಶ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕಿರಣ್ ಕುಮಾರ್,ಆರ್.ಐ ಶಿವಕುಮಾರ್,ಲೋಕೋಪಯೋಗಿ ಇಲಾಖೆಯ ಎ.ಇ ಮಹದೇವ್ ಸ್ವಾಮಿ,ಮಹೇಶ್, ಎಡಿ, ಎಲ್,ಆರ್ ನಟರಾಜು, ಹಾಗೂ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಆರೋಗ್ಯ ತಪಾಸಣೆ ಶಿಬಿರ

**ಆನೇಕಲ್:** ದೊಡ್ಡಯ್ಯ ರವರ ಮಾಲೀಕತ್ವದ ವೈಟ್ ಅಕಾಡೆಮಿ (ಅ೬ಖಇ) ಶಾಲೆಯಲ್ಲಿ ಉಚಿತ ಬೃಹತ್ ಆರೋಗ್ಯ ತಪಾಸಣಾ ಶಿಬಿರ ಎಲೆಕ್ಟ್ರಾನಿಕ್ ಸಿಟಿ ನಿಸರ್ಗ ಸೇವಾ ಸಂಸ್ಥೆ ರವರ ಸಂಯುಕ್ತ ಆಶ್ರಯದಲ್ಲಿ ಉಚಿತ ನೇತ್ರ ಮತ್ತು ಆರೋಗ್ಯ ತಪಾಸಣೆ ಶಿಬಿರ ನಡೆಯಿತು. ಉಚಿತ ಹೆಲ್ತ್ ಕೇರ್ ಸೇವೆಯಲ್ಲಿ ನಮ್ಮ ಜೊತೆ ನಿಸರ್ಗ ದೃಷ್ಟಿಧಾಮ ಕಣ್ಣಿನ ಆರೈಕೆ ಕೇಂದ್ರ, ಚಂದಾಪುರ.ಆಕ್ಸ್ಫರ್ಡ್ ಆಸ್ಪತ್ರೆ, ಯಡವನಹಳ್ಳಿ.ಕಾವೇರಿ ಹಾಸ್ಪಿಟಲ್, ಶ್ರೀ ವೆಂಕಟೇಶ್ವರ ದಂತ ವೈದ್ಯಕೀಯ ಆಸ್ಪತ್ರೆ ಪಾಲ್ಗೊಂಡಿದ್ದವು. ಈ ಶಿಬಿರದಲ್ಲಿ ಎಲ್ಲರಿಗೂ ಉಚಿತವಾಗಿ ಬಿ. ಪಿ, ಶುಗರ್, ಇಅಉ ಪರೀಕ್ಷೆ, ನೇತ್ರ ತಪಾಸಣೆ, ಉಚಿತ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ, ಉಚಿತ ಕನ್ನಡಕ, ಕೀಲು ಮೂಳೆ ತಜ್ಞರು, ಎಂತ, ತಜ್ಞರು, ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು, ಸಾಮಾನ್ಯ ರೋಗಗಳ ತಪಾಸಣೆ ಮಾಡಿ ಉಚಿತವಾಗಿ ಔಷಧಿ ನೀಡಲಾಯಿತು ವೈಟ್ ಅಕಾಡೆಮಿ ಶಾಲೆಯ ಅಧ್ಯಕ್ಷರಾದ ಆನೇಕಲ್ ದೊಡ್ಡಯ್ಯ ರವರು ಮಾತನಾಡಿ ನಾನು ಹಳ್ಳಿಯಿಂದ ಬಂದವನು ನನಗೆ ಹಳ್ಳಿಯ ಕಷ್ಟ ಏನು ಅಂತ ನನಗೆ ಗೊತ್ತು ಹಳ್ಳಿಯ ಜನರು ಸದಾವಕಾಶವನ್ನು ಉಪಯೋಗಿಸಕೊಳ್ಳಬೇಕೆಂದು ಮನವಿ ಮಾಡಿಕೊಂಡರು. ವೈಟ್ ಅಕಾಡೆಮಿ ಸಂಸ್ಥಾಪಕ ಅಧ್ಯಕ್ಷ ಆನೇಕಲ್ ದೊಡ್ಡಯ್ಯ ರವರು ಸಮಾಜಮುಖಿ ಕೆಲಸ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ರೀತಿ, ಶಿಬಿರ ಹಾಗೂ ಆರೋಗ್ಯ ಮಹತ್ವದ ಬಗ್ಗೆ ಅರಿವು ಮೂಡಿಸುವ ಕೆಲಸ ಆಗಬೇಕು ಎಂದರು, ವೈಟ್ ಅಕಾಡೆಮಿ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಶ್ರೀ ಪೂರ್ಣಿಮಾ ಹೆಗಡೆ, ಹಾಗೂ ಶಾಲೆಯ ಎಲ್ಲಾ ಶಿಕ್ಷಕ ಶಿಕ್ಷಕಿಯರು ಹಾಗೂ ಸಿಬ್ಬಂದಿ ವರ್ಗ ನಮ್ಮೊಂದಿಗೆ ನಿಸರ್ಗ ಸೇವಾ ಸಂಸ್ಥೆಯ ನಿಸರ್ಗ ದೇವರಾಜ್ ನಾಯಕ್ ರವರು ಮಾತನಾಡಿ ಹಳ್ಳಿ ಹಳ್ಳಿ, ಮನೆ ಮನೆ ಬಾಗಿಲಿಗೆ ಆರೋಗ್ಯ ಶಿಕ್ಷಣ ಸೇವೆ ಪ್ರತಿಯೊಬ್ಬರೂ ಸಿಗಬೇಕು ಎಂದರು. ಶಿಬಿರದಲ್ಲಿ ದಂತ ವೈದ್ಯ ಡಾ.ಶಿಬು, ಆಕ್ಸ್ಫರ್ಡ್ ನ ಶಂಕರ್, ಕಾವೇರಿ ಆಸ್ಪತ್ರೆ ಯೋಗೀಶ್, ನಿಸರ್ಗ ದೃಷ್ಟಿಧಾಮದ ಶ್ವೇತಾ, ಪ್ರಾಂಶುಪಾಲರಾದ ಶ್ರೀಮತಿ ಪೂರ್ಣಿಮಾ ಹೆಗಡೆ, ಶಿಕ್ಷಕಿಯರು, ಆಡಳಿತ ಮಂಡಳಿ ಮುಖ್ಯಸ್ಥರು, ವಿದ್ಯಾರ್ಥಿಗಳು ಪೋಷಕರು ಭಾಗವಹಿಸಿದ್ದರು, ಶಾಲಾ ಮಕ್ಕಳಿಗೆ 2025-26 ನೇ ಸಾಲಿನ ನೋಂದಣಿ ಬಗ್ಗೆ ಮಾಹಿತಿ ಕೂಡ ನೀಡಲಾಯಿತು. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ. 9483782999/ 8951189536/ 9901015014.

## ನೀರಿನ ಅದಾಲತ್

**ಬೆಂಗಳೂರು:** ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ಆಗ್ನೇಯ - 3, ಆಗ್ನೇಯ 6, ಪಶ್ಚಿಮ 1-3, ವಾಯುವ್ಯ - 5, ಉತ್ತರ 2-3, ದಕ್ಷಿಣ 1-3, ನೈರುತ್ಯ ? 3, ನೈರುತ್ಯ - 6, ಮತ್ತು ಪೂರ್ವ 2-4, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಮಾರ್ಚ್ 27 ರಂದು ಬೆಳಿಗ್ಗೆ 9.30 ಗಂಟೆಯಿಂದ 11 ಗಂಟೆಯವರೆಗೆ ನೀರಿನ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ. ಅದಾಲತ್ ಸೇವಾ ಠಾಣೆಗಳಾದ ಅರಳೂರು, ದೊಡ್ಡ ಕಣ್ಣನಹಳ್ಳಿ, ಕಸವನಹಳ್ಳಿ, ಬಿ.ಟಿ.ಎಂ ಲೇಔಟ್ 1, 2 ಮತ್ತು 3, ವೆಸ್ಟ್ ಆಫ್ ಕಾರ್ಡ್ ರಸ್ತೆ, 1 ಮತ್ತು 2, ಕಾಮಾಕ್ಷಿಪಾಳ್ಯ, ಕಮಲಾನಗರ, ಮಹಾಲಕ್ಷ್ಮೀ ಲೇಔಟ್, ಅಗ್ರಹಾರ ದಾಸರಹಳ್ಳಿ, ಶೆಟ್ಟಿಹಳ್ಳಿ, ಅಬ್ಬಿಗೆರೆ, ಚಿಕ್ಕಸಂದ್ರ, ಸಿಡೇದಹಳ್ಳಿ, ದೊಡ್ಡಬಿದರಕಲ್ಲು, ಜೆ.ಕೆ.ವಿ.ಕೆ, ಮಾನ್ಯತಾ ಟೆಕ್‌ಪಾರ್ಕ್, ಅಂಜನಾಪುರ, ಬ್ಯಾಂಕ್ ಆಫೀಸರ್ಸ್ ಲೇಔಟ್, ಗೊಟ್ಟಿಗೆರೆ, ಎಂ.ಎಸ್, ಪಾರ್ಕ್, ಬಿ.ಟಿ.ಆರ್, ಮೌಂಟ್‌ಜಾಯ್, ನಾಗೇಂದ್ರ ಬ್ಲಾಕ್, ಗಿರಿನಗರ, ಅಂಗಧೀರನಹಳ್ಳಿ, ಹೆಮ್ಮಿಗೆಪುರ, ಬನಶಂಕರಿ 6ನೇ ಹಂತ, ಕೆ.ಆರ್. ಪುರಂ, ಬಸವನಪುರ, ದೇವಸಂದ್ರ, ರಾಮಮೂರ್ತಿ ನಗರ, ವಿಜಿನಾಪುರ, ದೂರವಾಣಿನಗರ ಇಲ್ಲಿ ನೀರಿನ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸ್‌ಆಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸಲು 31 ಅಂತಿಮ ದಿನ

**ಬೆಂಗಳೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು 2024-25ರ ಜನವರಿ ಆವೃತ್ತಿಗೆ ಯುಜಿಸಿ ಅನುಮೋದಿತ ಶಿಕ್ಷಣ ಕ್ರಮಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಸ್ನಾತಕ/ ಸ್ನಾತಕೋತ್ತರ ಪದವಿ ಕೋರ್ಸ್‌ಗಳಾದ ಬಿ.ಎ., ಬಿ.ಕಾಂ., ಬಿ.ಎಸ್ಸಿ., ಬಿ.ಬಿ.ಎ., ಬಿ.ಸಿ.ಎ., ಬಿ.ಎಸ್. ಡಬ್ಲ್ಯು., ಬಿ.ಲಿಬ್.ಐ.ಎಸ್ಸಿ., ಎಂ.ಎ., ಎಂ.ಕಾಂ., ಎಂ.ಎಸ್ಸಿ., ಎಂ.ಬಿ.ಎ., ಎಂ.ಲಿಬ್. ಐ.ಎಸ್ಸಿ., ಎಂ.ಸಿ.ಎ., ಎಂ.ಎಸ್. ಡಬ್ಲ್ಯು., ಡಿಪ್ಲೊಮಾ ಹಾಗೂ ಯುಜಿ/ ಪಿಜಿ ಸರ್ಟಿಫಿಕೇಟ್ ಶಿಕ್ಷಣ ಕ್ರಮಗಳಿಗೆ 2025 ಜನವರಿ 10 ರಿಂದ ಬೆಂಗಳೂರಿನ ಬಾಪೂಜಿನಗರ ಪ್ರಾದೇಶಿಕ ಕೇಂದ್ರ-01 ರಲ್ಲಿ ಆನ್‌ಲೈನ್ ಮೂಲಕ ಪ್ರವೇಶಾತಿಯನ್ನು ಪ್ರಾರಂಭಿಸಲಾಗಿದೆ. ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ www.ksoumysuru.ac.inನಲ್ಲಿ ಮಾಹಿತಿಯನ್ನು ಒದಗಿಸಲಾಗಿದ್ದು, ಕೋರ್ಸ್‌ಗಳ ಪ್ರವೇಶಾತಿಗೆ ಮಾರ್ಚ್ 31 ಕೊನೆಯ ದಿನಾಂಕವಾಗಿದೆ. ಈಗಾಗಲೇ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಹಾಗೂ ಇನ್ನೂ ಅರ್ಜಿ ಸಲ್ಲಿಸದೇ ಇರುವಂತಹ ಆಸಕ್ತ ವಿದ್ಯಾರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಕೆ.ಎಸ್.ಆರ್.ಟಿ.ಸಿ. ಸ್ಯಾಟಲೈಟ್ ಬಸ್ ನಿಲ್ದಾಣ, ಮೈಸೂರು ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರ ಕಛೇರಿಗೆ ಭೇಟಿ ನೀಡಿ ಮಾರ್ಚ್ 31ರ ಒಳಗೆ ಪ್ರವೇಶಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ ಪ್ರಾದೇಶಿಕ ನಿರ್ದೇಶಕರು, ಬೆಂಗಳೂರು ಪ್ರಾದೇಶಿಕ ಕೇಂದ್ರ-01, ಮೊದಲನೇ ಮಹಡಿ, ಸ್ಯಾಟಲೈಟ್ ಬಸ್ ನಿಲ್ದಾಣ, ಮೈಸೂರು ರಸ್ತೆ, ಬಾಪೂಜಿನಗರ, ಬೆಂಗಳೂರು-26, ಕಛೇರಿ ದೂರವಾಣಿ ಸಂಖ್ಯೆ: 080-26603664 ಹಾಗೂ 9880526439/ 9019526439 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರಾದ ರೋಹಿತ್ ಹೆಚ್.ಎಸ್. ತಿಳಿಸಿದ್ದಾರೆ.

### ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪಾವತಿ

# 5.16 ಕೋಟಿ ಡಿಬಿಟಿ ವರ್ಗಾವಣೆ

**ಬೆಂಗಳೂರು:** ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ 3351 ವಿದ್ಯಾಥಿಗಳಿಗೆ ರೂ.5.16 ಕೋಟಿಗಳ ವೆಚ್ಚದಲ್ಲಿ ವಿದ್ಯಾರ್ಥಿ ವೇತನ ಬಿಡುಗಡೆಗೊಳಿಸಿ ಡಿಬಿಟಿ ಮೂಲಕ ಪಾವತಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಸಗೋಡು ಜಯಸಿಂಹ ತಿಳಿಸಿದರು.

ಕರ್ನಾಟಕ ರಾಜ್ಯ ಬ್ರಾಹ್ಮಣರ ಅಭಿವೃದ್ಧಿ ಮಂಡಳಿಯಲ್ಲಿ ಮಾರ್ಚ್ 25ರಂದು ವಿವಿಧ ಫಲಾನುಭವಿಗಳಿಗೆ ಸವಲತ್ತು ವಿತರಿಸಿ ಮಾತನಾಡಿದ ಅವರು, ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ 4123 ವಿದ್ಯಾರ್ಥಿಗಳು ಶಿಷ್ಯ ವೇತನಕ್ಕಾಗಿ ಅರ್ಜಿ ಸಲ್ಲಿಸಲಾಗಿದ್ದು, 3351 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪಾವತಿಸಲಾಗಿದೆ. ಅವರಲ್ಲಿ ಪದವಿ ಪೂರ್ವ (ಪಿಯು), ಸಾಮಾನ್ಯ ಪದವಿ ವ್ಯಾಸಂಗಮಾಡುತ್ತಿರುವ 1511 ವಿದ್ಯಾರ್ಥಿಗಳಿಗೆ ರೂ. 2.26 ಕೋಟಿ, ವೃತ್ತಿಪರ ಕೋರ್ಸ್ (ಮೆಡಿಕಲ್, ಇಂಜಿನಿಯರಿಂಗ್) ವ್ಯಾಸಂಗ ಮಾಡುತ್ತಿರುವ 1840 ವಿದ್ಯಾರ್ಥಿಗಳಿಗೆ ರೂ. 2.90 ಕೋಟಿಗಳನ್ನು ನೇರ ನಗದು ವರ್ಗಾವಣೆ ಮೂಲಕ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಹಣ ಜಮಾಮಾಡಲಾಗಿದೆ ಎಂದರು.

ಆರ್ಥಿಕವಾಗಿ ಹಿಂದುಳಿದಿರುವ ವಿಪ್ರ ಸಮುದಾಯದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಬ್ರಾಹ್ಮಣ ಮಂಡಳಿ ವತಿಯಿಂದ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳುವುದರೊಂದಿಗೆ ಸಮಾಜಕ್ಕೆ ಬೆಳಕಾಗಬೇಕು ಎಂದು ವಿದ್ಯಾರ್ಥಿಗಳನ್ನು ಹಾರೈಸಿದರು.

2025-26 ನೇ ಸಾಲಿನ ಆಯವ್ಯಯದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ರೂ.10 ಕೋಟಿಗಳ ಅನುದಾನವನ್ನು ಹಂಚಿಕೆ ಮಾಡಿದ್ದಾರೆ. ಇದಕ್ಕಾಗಿ ಸನ್ಮಾನ್ಯ ಮುಖ್ಯಮಂತ್ರಿಗಳಿಗೆ ಅಭಿನಂದನೆಯನ್ನು ಸಲ್ಲಿಸಿದರು.

ಮಂಡಳಿ ವತಿಯಿಂದ ಪ್ರತಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಮೊದಲ 3 ಸ್ಥಾನ ಪಡೆದ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ಕ್ರಮವಾಗಿ ರೂ. 15 ಸಾವಿರ, ರೂ. 10 ಸಾವಿರ ಹಾಗೂ ರೂ.5 ಸಾವಿರಗಳನ್ನು ಪುರಸ್ಕಾರವಾಗಿ ನೀಡಲಾಗುತ್ತಿದೆ. ರಾಜ್ಯದ 32 ಜಿಲ್ಲೆಗಳ ಒಟ್ಟು 694 ಪದವಿ ಪೂರ್ವ ವಿದ್ಯಾರ್ಥಿಗಳಿಗೆ ಪುರಸ್ಕಾರವಾಗಿ ಒಟ್ಟು ರೂ 80 ಲಕ್ಷ 35 ಸಾವಿರಗಳನ್ನು ನೀಡಲಾಗಿರುತ್ತದೆ.

ಸ್ವಯಂ ಉದ್ಯೋಗದಡಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಲಾಭದಾಯಕ ಉದ್ಯಮ ಸ್ಥಾಪಿಸಲು ಸಾಲದ ಮೇಲೆ ಶೇಕಡ 20 ರಷ್ಟು ಸಹಾಯಧನ ವಿತರಿಸಲಾಗುತ್ತದೆ. ಸದರಿ ಯೋಜನೆಗೆ 192 ಫಲಾನುಭವಿಗಳು ಅನುಕೂಲ ಪಡೆದುಕೊಂಡಿದ್ದು, ಯೋಜನೆಯ ಒಟ್ಟು ವೆಚ್ಚ ರೂ.36,78,671 ಗಳಗಿರುತ್ತದೆ.

ಸರ್ಕಾರದ ಎಲ್ಲಾ ನಿಗಮ ಮಂಡಳಿಗಳಲ್ಲಿ ಯಶಸ್ವಿಯಾಗಿ ನಿರ್ವಹಿಸುತ್ತಿರುವ ನೇರ ಸಾಲ ಯೋಜನೆಯನ್ನು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದಲೂ ಸಹ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ವ್ಯಾಪಾರಿಗಳಿಗೆ ಸ್ವಯಂ ಉದ್ಯೋಗ ನಡೆಸಲು ನೇರ ಸಾಲ ನೀಡುವ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ ಎಂದು ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವ್ಯವಸ್ಥಾಪಕಿ ನಿರ್ದೇಶಕರಾದ ಶ್ರೀಮತಿ ದೀಪಶ್ರೀ ಕೆ. ಅವರು ಮಾತನಾಡಿ, ಮುಂದಿನ ದಿನಗಳಲ್ಲಿ ಮಂಡಳಿಗೆ ಹೆಚ್ಚಿನ ಅನುದಾನವು ದೊರಕಿದ್ದಲ್ಲಿ ಸಮುದಾಯದ ಅಭಿವೃದ್ಧಿಗೆ ಇನ್ನೂ ಹೆಚ್ಚಿನ ಯೋಜನೆಗಳನ್ನು ರೂಪಿಸಲಾಗುವುದು ಎಂದು ತಿಳಿಸಿದರು.

## ಎನ್‌ಆರ್‌ಐ ಫೋರಂ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ ಅವರನ್ನು ಭೇಟಿ ಮಾಡಿದ ಅಮೆರಿಕ ಅಧ್ಯಕ್ಷರ ಆಧ್ಯಾತ್ಮಿಕ ಸಲಹೆಗಾರರು

**ಬೆಂಗಳೂರು:** ಅಮೆರಿಕ ಅಧ್ಯಕ್ಷರಾದ ಡೊನಾಲ್ಡ್ ಟ್ರಂಪ್ ಅವರ ಆಧ್ಯಾತ್ಮಿಕ ಸಲಹೆಗಾರರಾದ ಜಾನ್ ಮಾರ್ಕ್ ಬರ್ನ್, ಮಾರ್ಕ್ ಬರ್ನ್ಸ್ ಕಚೇರಿಯ (ಯುಎಸ್‌ಎ) ಮುಖ್ಯಸ್ಥೆ ಶ್ರೀಮತಿ ಏಪ್ರಿಲ್ ಡೆನಿಸ್ ಫೆಲ್ಪ್ಸ್ ಮತ್ತು ಮಾರ್ಕ್ ಬರ್ನ್ಸ್ ಅವರ ಕಾರ್ಯದರ್ಶಿ ವೆರೋನಿಕಾ ಲಿನ್ ಓಶೀಲ್ಡ್ ಅವರು ಬೆಂಗಳೂರಿನಲ್ಲಿ ಕರ್ನಾಟಕ ಅನಿವಾಸಿ ಭಾರತೀಯ ವೇದಿಕೆಯ ಉಪಾಧ್ಯಕ್ಷರಾದ ಡಾ. ಆರತಿ ಕೃಷ್ಣ ಅವರನ್ನು ಇಂದು ಭೇಟಿ ಮಾಡಿ ಮಾತುಕತೆ ನಡೆಸಿದರು. ಆಧ್ಯಾತ್ಮಿಕ ಸಲಹೆಗಾರರೊಂದಿಗೆ ನಡೆದ ಈ ಭೇಟಿಯಲ್ಲಿ ಆಧ್ಯಾತ್ಮಿಕತೆ, ಭಾರತ ಮತ್ತು ಅಮೇರಿಕ ನಡುವಿನ ಸಂಬಂಧಗಳು, ಭಾರತೀಯ ವಲಸೆಗಾರರು ಮತ್ತು ಕರ್ನಾಟಕದ ಹೂಡಿಕೆ ಸಾಮರ್ಥ್ಯ ಸೇರಿದಂತೆ ಹಲವಾರು ವಿಷಯಗಳನ್ನು ಚರ್ಚಿಸಲಾಯಿತು. ಜಾಗತಿಕ ಸಾಮರಸ್ಯವನ್ನು ಬೆಳೆಸುವಲ್ಲಿ ನಂಬಿಕೆ ಮತ್ತು ಮೌಲ್ಯಗಳ ಪಾತ್ರವನ್ನು ಒತ್ತಿ ಹೇಳುವುದರ ಮೂಲಕ ಇಬ್ಬರೂ ತಮ್ಮ ತಮ್ಮ ರಾಷ್ಟ್ರಗಳ ಆಧ್ಯಾತ್ಮಿಕ ಸಂಪ್ರದಾಯಗಳ ಕುರಿತು ಮಾಹಿತಿ ವಿನಿಮಯ ಮಾಡಿಕೊಂಡರು. ಇದೇ ವೇಳೆ ನಿಯೋಗವು ವ್ಯಾಪಾರ ಅವಕಾಶಗಳಿಗೆ ದಾರಿ ಮಾಡಿಕೊಡಲು ತೀವ್ರ ಆಸಕ್ತಿಯನ್ನು ವ್ಯಕ್ತಪಡಿಸಿತು. ಮುಂದಿನ ದಿನಗಳಲ್ಲಿ ಇದೊಂದು ಉತ್ತಮ ಅವಕಾಶಗಳನ್ನು ಕಲ್ಪಿಸುವ ಭೇಟಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಫೌಂಡೇಶನ್ ಫಾರ್ ಲೀಡರ್‌ಶಿಪ್ ಅಂಡ್ ಗವರ್ನೆನ್ಸ್‌ನ ಸಿಇಒ ಜಯಕರ್ ರಾವ್ ಮತ್ತು ಕರ್ನಾಟಕದ ಮಾಜಿ ಶಾಸಕಿ ಹಾಗೂ ಕ್ರಿಶ್ಚಿಯನ್ ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ವಿನಿಶಾ ನೀರೊ ಉಪಸ್ಥಿತರಿದ್ದರು.

## 8.500 ಗಿಡ ನೆಡುವ ಅಭಿಯಾನ

**ಬೆಂಗಳೂರು ಗ್ರಾಮಾಂತರ:** ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕಾರಹಳ್ಳಿ ಗ್ರಾಮದ ಬಳಿಯ ಬಿ ಎಸ್ ಎಫ್ ಕ್ಯಾಂಪಸ್ ನಲ್ಲಿ ಹೊಸದಾಗಿ 8.500 ಗಿಡಗಳನ್ನು ನೆಡುವುದರ ಜೊತೆಗೆ ಆ ಪ್ರದೇಶಕ್ಕೆ ಸಾಲುಮರದ ತಿಮ್ಮಕ್ಕ ವನ ಎಂದು ನಾಮಕರಣ ಮಾಡಲಾಗಿದೆ. ಬಿ ಎಸ್ ಎಫ್, ಗೋಕುಲ್ ದಾಸ್ ಎಕ್ಸ್ ಪೋರ್ಟ್ ಫೌಂಡೇಶನ್ ಮತ್ತು ಕ್ಯಾಚ್ ಫೌಂಡೇಶನ್ ಸಂಯುಕ್ತಾಶ್ರಯದಲ್ಲಿ ಕಾರಹಳ್ಳಿಯ ಬಿ ಎಸ್ ಎಫ್ ಅಧೀನದಲ್ಲಿರುವ ಗುಡ್ಡ ಪ್ರದೇಶದಲ್ಲಿ ಹಮ್ಮಿಕೊಂಡಿದ್ದ ಗಿಡ ನೆಡುವ ಕಾರ್ಯಕ್ರಮದಲ್ಲಿ 8.500 ವಿವಿಧ ಜಾತಿಯ ಗಿಡಗಳನ್ನು ನೆಡಲಾಗುವುದು. ಅಭಿಯಾನಕ್ಕೆ ಕರ್ನಾಟಕ ರತ್ನ, ಶತಾಯುಷಿ ಸಾಲುಮರದ ತಿಮ್ಮಕ್ಕ ಚಾಲನೆ ನೀಡಿದರು. ಇತ್ತೀಚೆಗೆ ಸಾರ್ವಜನಿಕರಲ್ಲಿ ಪ್ರಕೃತಿ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಲಾಗುತ್ತಿದ್ದು, ಪರಿಸರ ಉಳಿಸುವ ನಿಟ್ಟಿನಲ್ಲಿ ವಿವಿಧ ರೀತಿಯ ಕಾರ್ಯಕ್ರಮಗಳನ್ನು ರೂಪಿಸುತ್ತಿರುತ್ತಾರೆ ಎಂದು ಬಿಎಸ್ ಎಫ್ ಅಧಿಕಾರಿ ಡಿ ಕೆ ಯಾದವ್ ಶ್ಲಾಘಿಸಿದರು. ಬಿ ಎಸ್ ಎಫ್ ಕ್ಯಾಂಪಸ್ ನಲ್ಲೀಗ 8.500 ಗಿಡಗಳನ್ನು ನೆಟ್ಟು ಬೆಳೆಸುವ ಅಭಿಯಾನಕ್ಕೆ ಚಾಲನೆ ದೊರೆತಿದ್ದು ಸಮಾಜ ಮುಖಿ ಸಂಸ್ಥೆಗಳ ಸಹಯೋಗ ಅತ್ಯಗತ್ಯ ಎಂದು ಅವರು ಹೇಳಿದರು. ಇದೇ ವೇಳೆ ವೃಕ್ಷ ಮಾತೆ ಸಾಲುಮರದ ತಿಮ್ಮಕ್ಕ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಬಿ ಎಸ್ ಎಫ್ ಅಧಿಕಾರಿ ಡಿ ಕೆ ಯಾದವ್ ,ಗೋಕುಲ್ ದಾಸ್ ಅಧಿಕಾರಿಗಳಾದ ಅಮಿತ್ ಶರ್ಮ,ಮಹಾಂತೇಶ್ ಬಂಗಾರಿ,ಪ್ರಣಾಲ್ ಗೋಸ್ವಾಮಿ ಸೇರಿದಂತೆ ಗೋಕುಲ್ ದಾಸ್ ಕಂಪೆನಿ ಹಾಗೂ ಕ್ಯಾಚ್ ಫೌಂಡೇಶನ್ ಸಿಬ್ಬಂದಿ ಭಾಗವಹಿಸಿದ್ದರು.

## ಅಂಗನವಾಡಿ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳ ಸಮಗ್ರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ/ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರ ಗೌರವಸೇವೆಯ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. 19 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ ಹೆಣ್ಣುಮಕ್ಕಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳು (ದೈಹಿಕ ವಿಕಲಚೇತನರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ ನೀಡಿದೆ) ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಏಪ್ರಿಲ್ 23 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್ಸೈಟ್ ಅಥವಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ 206, ಜಿಲ್ಲಾಡಳಿತ ಭವನ, ಬೀರಸಂದ್ರ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಅಥವಾ ಸಂಬಂಧಪಟ್ಟ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ.

# ಗ್ರಾಹಕರು ಮಾಲೀಕರಿಂದ ಕಡ್ಡಾಯವಾಗಿ ರಶೀದಿ ಪಡೆಯಿರಿ

**ರಾಮನಗರ:** ಯಾವುದೇ ವಸ್ತುವನ್ನು ಗ್ರಾಹಕ ಹಣ ಕೊಟ್ಟು ಕೊಂಡುಕೊಂಡಾಗ ಅದಕ್ಕೆ ಮುಖ್ಯವಾಗಿ ಮಾಲೀಕರಿಂದ ರಶೀದಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ಒಂದು ವೇಳೆ ಮಾಲೀಕರು ಗ್ರಾಹಕನಿಗೆ ಕಳಪೆ ಪ್ರಮಾಣದ ವಸ್ತುಗಳನ್ನು ಕೊಟ್ಟಿದ್ದರೆ ಅವರ ಮೇಲೆ ಜಿಲ್ಲಾ ಗ್ರಾಹಕರ ಆಯೋಗದಲ್ಲಿ ಪ್ರಕರಣ ದಾಖಲು ಮಾಡಬಹುದು ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಎಚ್. ಚನ್ನೇಗೌಡ ಅವರು ತಿಳಿಸಿದರು.

ಅವರು ಮಾ. 26ರ ಬುಧವಾರ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಹಾಗೂ ಕನಕಪುರದ ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಹಕರ ರಕ್ಷಣಾ ಅಧಿನಿಯಮ 2019 ರಲ್ಲಿ ಈ ಹೊಸ ಕಾನೂನು ಜಾರಿಗೆ ಬಂದಿದ್ದು. ಇದನ್ನು 2020ರ ಜುಲೈ 20ರಂದು ಆಚರಣೆ ಮಾಡಲಾಯಿತು. ಈ ಕಾನೂನು ಪ್ರತಿಯೊಬ್ಬ ನಾಗರೀಕನಿಗೂ ಹಕ್ಕುಗಳನ್ನು ಕೊಟ್ಟಿದೆ. ಅದನ್ನು ಗ್ರಾಹಕರ ಸಂರಕ್ಷಣಾ ಕಾಯಿದೆ ಅಡಿಯಲ್ಲಿಯೇ ಈ ಹಕ್ಕನ್ನು ಜಾರಿ ಮಾಡಲಾಗಿದೆ. ಗ್ರಾಹಕರು ಹಕ್ಕು ಮತ್ತು ಅಧಿಕಾರವನ್ನು



ಚಲಾಯಿಸಬಹುದು ಎಂದರು. ಗ್ರಾಹಕರು ಪ್ರಕರಣ ದಾಖಲಿಸಲು ತಾವು ಕೊಂಡುಕೊಂಡಿರುವ ವಸ್ತುವಿನ ಬೆಲೆ 5 ಲಕ್ಷಕ್ಕಿಂತ ಕಡಿಮೆ ಇದ್ದರೆ ಸರ್ಕಾರಕ್ಕೆ ಯಾವುದೇ ರೀತಿಯ ಶುಲ್ಕವನ್ನು ಪಾವತಿಸುವ ಅವಶ್ಯಕತೆ ಇರುವುದಿಲ್ಲ. 5 ರಿಂದ 10 ಲಕ್ಷ ಇದ್ದರೆ 200 ರೂ.ಗಳ ಶುಲ್ಕವನ್ನು ಪಾವತಿಸಬೇಕಾಗುತ್ತದೆ ಎಂದು ತಿಳಿಸಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತಾ ಪಿ. ಆರ್ ಅವರು ಮಾತನಾಡಿ, ವಿಶ್ವ ಗ್ರಾಹಕರ ದಿನಾಚರಣೆಯ ಹಕ್ಕುಗಳನ್ನು ಮನವರಿಗೆ ಮಾಡಿಕೊಳ್ಳುವುದಕ್ಕೆ ಈ ದಿನಾಚರಣೆಯನ್ನು ಆಚರಿಸುತ್ತೇವೆ.

ಮೊದಲ ಬಾರಿ ಈ ದಿನಾಚರಣೆಯನ್ನು 1983 ರಲ್ಲಿ ಆಚರಿಸಲಾಗಿತ್ತು. ಅಮೇರಿಕಾದ ಪ್ರೆಸಿಡೆಂಟ್ ಜಾನೆಟ್ ಕೆನ್ನೆಡ್ಸ್ ಅವರು 1962ರಲ್ಲಿ ಗ್ರಾಹಕರಾಗಿ ಭಾಷಣ ಮಾಡುತ್ತಾರೆ. ಅವರ ಮಾತುಗಳಿಂದ ಪ್ರೇರಿತರಾಗಿ, ಪ್ರಥಮವಾಗಿ ಈ ವಿಶ್ವ ಗ್ರಾಹಕರ ದಿನಾಚರಣೆಯನ್ನು ಆಚರಿಸಲಾಯಿತು ಎಂದರು.

ವಕೀಲರು ಹಾಗೂ ಗ್ರಾಹಕ ಸಂಪನ್ಮೂಲ ವ್ಯಕ್ತಿಗಳಾದ ಗೋಪಾಲಗೌಡ ಅವರು ಮಾತನಾಡಿ, ವಿಶ್ವ ಗ್ರಾಹಕರ ದಿನಾಚರಣೆ ಎನ್ನುವುದು ಕೇವಲ ಒಂದು ದಿನದ ವಿಷಯವಲ್ಲ ವರ್ಷ ಪೂರ್ತಿ ಎಷ್ಟು ಸಾಧ್ಯವೊ ಅಷ್ಟು ಈ ವಿಷಯದ ಬಗ್ಗೆ ಸಮಾಜಕ್ಕೆ ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸುವಂತಹ ವಿಷಯ ಎಂದರು.

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರ ಇಲಾಖೆಯ ಉಪನಿರ್ದೇಶಕರಾದ ರಮ್ಯಾ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ರಾಮನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ರಾಜಶೇಖರನ್, ಜಿಲ್ಲಾ ಗ್ರಾಹಕರ ರಕ್ಷಣಾ ಪರಿಷತ್ತಿನ ಸದಸ್ಯರಾದ ಕಲಾವತಿಬಾಯಿ, ಚಂದ್ರಯ್ಯ, ಎಚ್. ಗೋವಿಂದಯ್ಯ, ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರದ ಅಧ್ಯಕ್ಷರು ಹಾಗೂ ಜಿಲ್ಲಾ ಗ್ರಾಹಕ ರಕ್ಷಣಾ ಪರಿಷತ್ತಿನ ಸದಸ್ಯರಾದ ಡಾ. ಕೆ.ಎಸ್. ಮಂಜುನಾಥ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿದ್ಯುತ್ ವ್ಯತ್ಯಯ

**ಮೈಸೂರು:** ಮಾರ್ಚ್ 27 ಬೆಳಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿ.ವಿ. ಮೊಹಲ್ಲಾ ವಿಭಾಗ ವ್ಯಾಪ್ತಿಯ 66/11 ಕೆ.ವಿ ಕೆ.ಹೆಚ್.ಬಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 4ನೇ ತ್ರೈಮಾಸಿಕ ನಿರ್ವಹಣಾ ಕೆಲಸದ ನಿಮಿತ್ತ ವಿದ್ಯುತ್ ವ್ಯತ್ಯಯಾಗಲಿದೆ. ವಿದ್ಯುತ್‌ವ್ಯತ್ಯಯವಾಗುವ ಪ್ರದೇಶಗಳು: ವಿಜಯನಗರ 4ನೇ ಹಂತ, ಕೆ.ಹೆಚ್.ಬಿ ಕಾಲೋನಿ, ಹೂಟಗಳ್ಳಿ ಗ್ರಾಮ, ಬೆಳವಾಡಿ ಗ್ರಾಮ, ಬಸವನಪುರ, ಮರಟಿಕ್ಯಾತನಹಳ್ಳಿ, ಪಂಚಚಾರ್ಯ್ಯ ಲೇಔಟ್, ಕೆ. ಹೆಮ್ಮನಹಳ್ಳಿ, ಲಿಂಗದೇವರ ಕೊಪ್ಪಲು, ಇಲವಾಲ, ಹೂಟಗಳ್ಳಿ ಕೆ.ಆರ್.ಎಸ್.ರೋಡ್, ಆದಿತ್ಯಾ ಬಡಾವಣೆ, ಎಸ್.ಆರ್.ಎಸ್. ಕಾಲೋನಿ, ಕೂರ್ಗಳ್ಳಿ ಗ್ರಾಮ, ಎನ್.ಹೆಚ್.ಬಿ ಕಾಲೋನಿ, ಬೆಳವಾಡಿ ಕೈಗಾರಿಕಾ ಪ್ರದೇಶ, ಶಾಹಿ ಗಾರ್ಮೆಂಟ್ಸ್, ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶ, ಗ್ರ್ಯಾಂಡ್ ಮೌರ್ಯ್ಯ ಹೋಟೆಲ್, ರಿಲಾಯನ್ಸ್, ಮಾಸ್ ಫರ್ನಿಚರ್ಸ್, ಯಶಸ್ವಿನಿ ಕಲ್ಯಾಣ ಮಂಟಪ, ಸೌಪರ್ಣಿಕ ಅಪಾರ್ಟ್‌ಮೆಂಟ್ ಹಿನಕಲ್, ಎಸ್.ವಿ.ಇ.ಐ ಕಾಲೇಜು ಸುತ್ತಮುತ್ತ, ಜಟ್ಟಿಹುಂಡಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯಾಗುವುದರಿಂದ ಸಾರ್ವಜನಿಕರು ಸಹಕರಿಸಬೇಕೆಂದು ವಿ.ವಿ.ಮೊಹಲ್ಲಾ ವಿಭಾಗದ, ಚಾ.ವಿ.ಸ.ನಿ.ನಿ., ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಮೂಹಿಕ ಪ್ರಾರ್ಥನೆ ಇಫ್ತಿಯಾರ್

**ಚಿಕ್ಕಬಳ್ಳಾಪುರ:** ನಗರದ ಬಿಬಿ ರಸ್ತೆಯಲ್ಲಿರುವ ಹುಸೇನಿಯಾ ಮಸೀದಿಯಲ್ಲಿ ರಂಜಾನ್ ತಿಂಗಳ ಅಂಗವಾಗಿ ವಿಶೇಷ ಪ್ರಾರ್ಥನೆ,ಸಾಮೂಹಿಕ ಇಫ್ತಿಯಾರ್,ನಡೆಯುತ್ತಿದೆ ಮಸೀದಿಯ ಮುಖಂಡರು ಮಸೀದಿಯಲ್ಲಿ ನಡೆಯುವ ಪ್ರಾರ್ಥನೆ,ಸಾಮೂಹಿಕಇಫ್ತಿಯಾರ್ ಧಾರ್ಮಿಕ ಕಾರ್ಯಕ್ರಮಗಳನ್ನು ವೀಕ್ಷಿಸಲು ದಿನಕ್ಕೆ ಒಬ್ಬರನ್ನು ಮಸೀದಿಗೆ ಅಹ್ವಾನಿಸುತ್ತಿದ್ದಾರೆ,23ನೇ ಉಪವಾಸದಂದು ಮಸೀದಿಗೆ ವಿಶೇಷ ಅಹ್ವಾನಿತರಾಗಿ ನಗರದ ಎಪಿಎಂಸಿ ತರಕಾರಿ ಮಾರುಕಟ್ಟೆಯ ಹಿರಿಯ ವರ್ತಕರಾದ ಕಣಜೇನಹಳ್ಳಿ ಕೆ ವಿ ಸುರೇಶ್ ಆಗಮಿಸಿದ್ದು ಸಾಮೂಹಿಕ ಪ್ರಾರ್ಥನೆ ಇಫ್ತಿಯಾರ್ ಕಂಡು ಸಂತಸ ವ್ಯಕ್ತಪಡಿಸಿದರು. ಇದೇ ವೇಳೆ ಮಾತನಾಡಿದ ಕೆ ವಿ ಸುರೇಶ್ ಮಸೀದಿಯಲ್ಲಿ ಪರಸ್ಪರ ಪ್ರೀತಿ ಹಂಚಿಕೆ ಒಗ್ಗಟ್ಟು ಸಾಮೂಹಿಕ ಪ್ರಾರ್ಥನೆ ಶಿಸ್ತು ನಿಜಕ್ಕೂ ಮನಸ್ಸಿಗೆ ಸಂತೋಷ ತಂದಿದೆ ದೊಡ್ಡ,ಚಿಕ್ಕವರು ಸಾಹುಕಾರ ಬಡ ಎನ್ನದೇ ಒಂದೇ ಸಾಲಿನಲ್ಲಿ ನಿಂತು ನಾವೆಲ್ಲರೂ ಒಂದೇ ಎಂಬ ಭಾವನೆಯಿಂದ ದೇವರಲ್ಲಿ ಪ್ರಾರ್ಥಿಸುತ್ತಿರುವ ದೃಶ್ಯಗಳು ಖುಷಿ ನೀಡಿದೆ ಪವಿತ್ರ ರಂಜಾನ್ ತಿಂಗಳಲ್ಲಿ ಮುಸ್ಲಿಂ ಬಾಂಧವರು ಉಪವಾಸ ಆಚರಿಸುತ್ತಿದ್ದು ದೇವರು ಎಲ್ಲರಿಗೆ ಆರೋಗ್ಯ ಆಯಸ್ಸು ನೀಡಲಿ ಇನ್ನು ಉಗಾದಿ ಹಾಗೂ ರಂಜ್ಹಾನ್ ಒಂದೇ ಸಮನೆ ಬರುತ್ತಿದ್ದು ಎಲ್ಲ ಹಿಂದು ಮುಸ್ಲಿಂ ಬಾಂಧವರು ಹಬ್ಬಗಳನ್ನು ಒಟ್ಟಾಗಿ ಆಚರಿಸಿ ಪ್ರೀತಿ ಹಂಚಿಕೊಳ್ಳಬೇಕೆಂದರು.ಈ ಸಂದರ್ಭದಲ್ಲಿ ನಯಾಜ್,ಖಲೀಲ್,ಮೌಲಾ,ಜ಼ಬಿಉಲ್ಲಾ,ನಿಸಾರ್ ,ಇಮ್ದಾದ್,ಮಕ್ಸೂದ್,ಜವಾದ್ ಯುವಕರು ಹಾಜರಿದ್ದರು.ಇದೇ ಸಂದರ್ಭದಲ್ಲಿ ಕೆ ವಿ ಸುರೇಶ್ ಅವರಿಗೆ ಮಸೀದಿಯ ಯುವಕರು ಸನ್ಮಾನಿಸಿ ಗೌರವಿಸಿದರು.

## ಗುಣಮಟ್ಟ ಪರಿಶೀಲನೆ

ಮಡಿವಾಳ : ತೊರ್ನಹಳ್ಳಿ ಗ್ರಾ.ಪಂ.ನ ಬೆಳ್ಳಾವಿ ದಿನ್ನೂರು ಗ್ರಾಮದಿಂದ ತೊರ್ನಹಳ್ಳಿ ವರೆಗೆ ಓಆರ್‌ಎಫ್ ಅನುದಾನದಲ್ಲಿ 5 ಕಿ.ಮಿ ರಸ್ತೆ ಡಾಂಬರೀಕರಣವು 5 ಕೋಟಿ ರೂಗಳ ಅನುದಾನದಲ್ಲಿ ಕಾಮಗಾರಿಯು ನಡೆಯುತ್ತಿದ್ದು ಕಾಮಗಾರಿಯ ಗುಣಮಟ್ಟವನ್ನು ಲೋಕೋಪಯೋಗಿ ಇಲಾಖೆ ಅಭಿಯಂತರ ಇಇ ರಾಜು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಾಮಗಾರಿಯನ್ನು ವೀಕ್ಷಿಸಿ ಮಾತನಾಡಿ ಅವರು ಗುತ್ತಿಗೆದಾರರು ರಸ್ತೆಯ ಗುಣಮಟ್ಟವನ್ನು ಕಾಪಾಡಿಕೊಳ್ಳಬೇಕು, ರಸ್ತೆಯು ಹದಗೆಟ್ಟಲ್ಲಿ ಗುತ್ತಿಗೆ ಪಡೆದವರು ಮರು ಡಾಂಬರೀಕರಣವನ್ನು ಮಾಡಿಕೊಡಬೇಕು ಎಂದರು ಈ ಸಂದರ್ಭದಲ್ಲಿ ಎಇ ರಾಜಗೋಪಾಲ್, ದಾಕ್ಷಾಯಿಣಿ, ಗೇರುಪುರ ಜಿ.ಕೆ. ಆಂಜಿನಪ್ಪ, ಮಧು, ಗುತ್ತಿಗೆದಾರ ಚಂಬೆ ನಾರಾಯಣಸ್ವಾಮಿ ಹಾಜರಿದ್ದರು.



## ತರಬೇತಿಗೆ ಅರ್ಜಿ ಅಹ್ವಾನ

**ಮೈಸೂರು:** ಶ್ರೀರಾಂಪುರ ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ 2024-25 ನೇ ಸಾಲಿನ ಆಯವ್ಯಯದಲ್ಲಿ "The prime minister intership scheme in top companies", , ಯೋಜನೆಯಡಿಯಲ್ಲಿ ಉನ್ನತ ಮಟ್ಟದ 500 ಕಂಪನಿಗಳ ಮೂಲಕ ಯುವಕ ಯುವತಿಯರಿಗೆ ಪಡೆಯುವ ಅವಕಾಶವನ್ನು ಕಲ್ಪಿಸಲಾಗಿದೆ. ಅವಧಿ 12 ತಿಂಗಳು ಆಗಿರುತ್ತದೆ. 21 ರಿಂದ 24 ವಯಸ್ಸಿನ ಯುವಕ ಯುವತಿಯರು ಅಂದರೆ SSLC, PUC, ITI, DIPLOMA ಹಾಗೂ ತಾಂತ್ರಿಕ ಹಾಗೂ ತಾಂತ್ರಿಕೇತರ ಎಲ್ಲಾ ಪದವಿಧರರು ಮಾರ್ಚ್ 31 ರೊಳಗೆ INTERNSHIP https://pminternship.mca.gov.in/login/ ವೆಬ್ ಸೈಟ್ ಮೂಲಕ ನೊಂದಾಯಿಸಿಕೊಂಡು ಯೋಜನೆಯ ಸದುಪಯೋಗವನ್ನು ಪಡೆಯಬಹುದು ಎಂದು ಶ್ರೀರಾಂಪುರ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತಿರುಗಿ ಬಿದ್ದ ಆಡಳಿತ ಪಕ್ಷದ ಸದಸ್ಯರು

# ನಗರಸಭೆ ಬಜೆಟ್ ಮುಂದೂಡಿಕೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ನಗರಸಭೆ ಬಜೆಟ್ ಮಂಡನೆಗೆ ಯಾಕೋ ಟೈಮೆ ಕೂಡಿ ಬರುತ್ತಿಲ್ಲ. ಮೂರು ದಿನಗಳ ಹಿಂದೆ ಅನರ್ಹಗೊಂಡ ಆರು ಸದಸ್ಯರ ಗೊಂದಲದ ಹಿನ್ನಲೆಯಲ್ಲಿ ಬಜೆಟ್‌ನಡೆಯುತ್ತೋ ಇಲ್ಲವೋ ಅನ್ನೋ ಅನುಮಾನಗಳು ಕಂಡು ಬರುತ್ತಿದೆ ಇಂದು ನಡೆಯಬೇಕಿದ್ದ ಬಜೆಟ್‌ಮುಂದೂಡಲಾಗಿದೆ ಬಜೆಟ್‌ಮಂಡನೆಗೆ ಏಳು ದಿನ ಮೊದಲೇ ನೋಟಿಸ್ ಕೊಡಬೇಕಿತ್ತು ಅದರ ಜತೆಗೆ ಬಜೆಟ್‌ಪ್ರತಿಯನ್ನೂ ಸದಸ್ಯರಿಗೆ ಕೊಡಬೇಕಿತ್ತೆ ಇದೆಲ್ಲವನ್ನೂ ಪಾಲಿಸದ ಕಮೀಷನರ್ ವಿರುದ್ದ ಆಡಳಿತ ಪಕ್ಷದ ಸದಸ್ಯರೇ ತಿರುಗಿ ಬಿದ್ದದ್ದೆ ಸಭೆ ಮುಂದೂಡಲು ಕಾರಣವೆನ್ನಲಾಗಿದ್ದು ಮುಂದಿನ ವಾರ ಬಜೆಟ್‌ನಡೆಸಲಾಗುವುದಾಗಿ ಅಧ್ಯಕ್ಷರು ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ನಗರಸಭೆಗೆ ಯಾಕೋ ಗ್ರಹಚಾರವೇ ಸರಿಯಿಲ್ಲ ಎನ್ನಿಸುತ್ತದೆ ಚುನಾವಣೆ ನಡೆದು ಆರು ತಿಂಗಳಿಗೆ ಅಧ್ಯಜ್ಷ ಉಪಾಧ್ಯಕ್ಷರಾಗಿದ್ದರು ಅವರು ರಾಜೀನಾಮೆ ನೀಡಿದ ಮೇಲೆ ಒಂದು ವರ್ಷ ಕಾಲ ಆಡಳಿತಾದಿಕಾರಿಗಳೆ ಅಧಿಕಾರ ನಡೆಸುವಂತಾಗಿತ್ತು ಈಗಿರುವ ಅಧ್ಯಕ್ಷ ಉಪಾಧ್ಯಕ್ಷರಿಗೆ ಅಡ್ಡಮತದಾನ ಮಾಡಿದ ಪರಿಣಾಮ ಆರು ಜನ ಸದಸ್ಯರು ಈಗ ಅನರ್ಹಗೊಂಡಿದ್ದಾರೆ ಈ ಗೊಂದಲದ ಮದ್ಯೆ ಅಧ್ಯಕ್ಷ ಎ ಗಜೇಂದ್ರ ಮತ್ತು ಕಮೀಷನರ್ ಏಳು ದಿನಗಳ ಮೊದಲೆ ಸದಸ್ಯರಿಗೆ ನೋಟೀಸ್ ಕೊಡದೆ ಇಂದು 2025-26 ನೇ ಸಾಲಿನ ಬಜೆಟ್‌ಸಭೆ ನಿಗದಿಗೊಳಿಸಿದ್ದರು ಏಳು ದಿನ ಮೊದಲೆ ನೋಟಿಸ್ ಕೊಟ್ಟಿಲ್ಲ ಅದರ ಜತೆಗೆ ಸದಸ್ಯರಿಗೆ ಬಜೆಟ್‌ಪ್ರತಿಯನ್ನೂ ಕೊಟ್ಟಿಲ್ಲ ಹಾಗಾಗಿ ಈ ಸಭೆ ನಡೆಯಲು ಅವಕಾಶಕೊಡುವುದಿಲ್ಲ ಎಂದು ಆಡಳಿತ ಪಕ್ಷದಸದಸ್ಯರು ಮಾಜಿ ಅಧ್ಯಕ್ಷರಾದ ಆನಂದಬಾಬುರೆಡ್ಡಿ ಮತ್ತು ಕೆಲವು ಸದಸ್ಯರು ಕಮೀಷನರ್ ಗೆ ಒತ್ತಡ ಹಾಕಿದ್ದರು ಎನ್ನಲಾಗಿದ್ದು ಆ ಕಾರಣದಿಂದಲೇ ಇಂದು ಬಜೆಟ್‌ಸಭೆಯನ್ನ ಮುಂದೂಡಲಾಗಿತ್ತು ಎನ್ನಲಾಗಿದೆ ಇಂದಿನ ಬಜೆಟ್‌ಸಭೆ ಮುಂದೂಡಿದ ಕಾರಣವನ್ನ ಅಧ್ಯಕ್ಷ ಎ ಗಜೇಂದ್ರ, ಬಜೆಟ್‌ಕಾಫಿಯನ್ನ ಕೊಟ್ಟಿರಲಿಲ್ಲ ಆದ್ದರಿಂದ ಇಂದಿನ ಸಭೆ ಮುಂದೂಡಲಾಗಿದ್ದು ಮುಂದಿನ ವಾರ ನಡೆಸಲಾಗುವುದು ಎಂದು ಸಮರ್ಥನೆ ಮಾಡಿಕೊಂಡಿದ್ದಾರೆ.




ಇನ್ನೂ ವಿರೋದ ಪಕ್ಷದ ಸದಸ್ಯ ಅಂಬರೀಶ್ ಆಡಳಿತ ಪಕ್ಷದ ವಿರುದ್ದ ಚಾಟಿ ಬೀಸಿದ್ದು ಪ್ರಸ್ತುತ ಅಧ್ಯಕ್ಷ ಉಪಾಧ್ಯಕ್ಷರು ಜನರ ಸಮಸ್ಯೆ ಬಗೆಹರಿಸಲು ಅಧಿಕಾರಕ್ಕೆ ಬಂದಿಲ್ಲ ಬದಲಿಗೆ ತಮ್ಮ ವೈಯುಕ್ತಿಕ ಕೆಲಸಗಳನ್ನಷ್ಟೆ ಮಾಡಿಕೊಳ್ಳವುದು ಇವರ ಉದ್ದೇಶ ಇವರಲ್ಲೆ ಗೊಂದಲವಿದೆ ಅಧ್ಯಕ್ಷರನ್ನ ನೋಡಿದರೆ ಮಾಜಿ ಅಧ್ಯಕ್ಷರಿಗೆ ಆಗೋಲ್ಲ ಅವರ ವಿರುದ್ದ ಸಮರ ಸಾರಿದ್ದಾರೆ ಅದೇನಾದ್ರು ಮಾಡಿಕೊಳ್ಳಲಿ ನಮಗೆ ಬೇಕಿಲ್ಲ ಒಂದು ಕಡೆ ಆರು ಜನ ಸದಸ್ಯರು ಅನರ್ಹಗೊಂಡಿದ್ದಾರೆ ಮತ್ತೊಂದು ಕಡೆ ಬಣರಾಜಕೀಯದ ನಡುವೆ ನಗರಸಭೆ ಕೊರಗುತ್ತಿದೆ ಮಾರ್ಚ್ ತಿಂಗಳ ಒಳಗಾಗಿ ಬಜೆಟ್‌ಮಂಡಿಸಿ ಸರ್ಕಾರದಿಂದ ಅನುಮತಿ ಪಡೆದರೆ ಮಾತ್ರ ಈ ವರ್ಷದ ಹಣಕಾಸು ವ್ಯವಹಾರ ನಡೆಸಲು ಸಾದ್ಯ ಈಗ ಬಿ ಖಾತಾ ಆಂದೋಲನ ನಡೆಯುತ್ತಿದೆ ಮನೆಕಂದಾಯ ನೀರಿನ ಸಮಸ್ಯೆ ಬಗೆಹರಿಸಲು ಹಣಕಾಸಿನ ಅವಶ್ಯಕತೆ ಇದೆ ಆದ್ದರಿಂದಲಾದ್ರೂ ಇವರು ಸಮಯಕ್ಕೆ ಸರಿಯಾಗಿ ಬಜೆಟ್‌ಮಂಡಿಸಬೇಕಿತ್ತು ಈಗ ಒಂದು ವಾರ ಮುಂದೂಡಿ ಸಭೆ ನಡೆಸಿ ಆನಂತರ ಒಂದುವಾರಕ್ಕೆ ಆ ಪ್ರೋಸೀಡಿಂಗ್ಸ್ ಅಪಲೋಡ್ ಮಾಡಿ ಸರ್ಕಾರದಿಂದ ಅನುಮತಿ ಪಡಿತಾರ ಇಲ್ಲಾ ದೇವರೆ ಗತಿ ಅಂತ ಕೈಲಾಗದವ ಮೈ ಪರಚಿಕೊಂಡ ಅಂತ ಇವರಿವರ ಕಿತ್ತಾಟಕ್ಕೆ ನಾಗರೀಕರಿಗೆ ಪಂಗಾನಾಮ ಎಳಿತಾರ ಅನ್ನೋದೆ ಗೊತ್ತಾಗುತ್ತಿಲ್ಲ ಎಂದು ಹಿಗ್ಗಾ ಮುಗ್ಗಾ ತರಾಟೆಗೆ ತೆಗೆದುಕೊಂಡರು.

ಇನ್ನೂ ಬಜೆಟ್‌ಮಂಡನೆಯಾಗದಿದ್ದರೆ ಈವರ್ಷ ನಗರದ ಅಭಿವೃದ್ದಿ ಕೆಲಸಗಳು ತುರ್ತಾಗಿ ನಡೆಯಬೇಕಿರುವ ಕೆಲಸಗಳಿಗೆ ಹಣಕಾಸಿನ ತೊಂದರೆಯಾಗುವುದು ಗ್ಯಾರಂಟಿಯಾಗಿದ್ದು ಈ ಸಮಸ್ಯೆಯನ್ನ ಯಾವ ರೀತಿ ನಿಬಾಯಿಸುತ್ತಾರೆ ಎಂಬುದೆ ಯಕ್ಷ ಪ್ರಶ್ನೆಯಾಗಿದೆ.

# ಅಂಬೇಡ್ಕರ್ ಜನ್ಮ ದಿನಾಚರಣೆ ಆಚರಣೆ

**ಮೈಸೂರು:** ಅರ್ಥ ಪೂರ್ಣವಾಗಿ ಡಾ. ಬಾಬು ಜಗಜೀವನ್ ರಾಂ ಹಾಗೂ ಡಾ. ಬಿ.ಅರ್. ಅಂಬೇಡ್ಕರ್ ಜಯಂತಿಯನ್ನು ಆಚರಣೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ಜಿ. ಲಕ್ಷ್ಮೀಕಾಂತ ರೆಡ್ಡಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಾ. ಬಾಬು ಜಗಜೀವನ್ ರಾಂ ಜನ್ಮ ದಿನಾಚರಣೆ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಜನ್ಮ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಡಾ. ಬಾಬು ಜಗಜೀವನ್ ರಾಂ ಜಯಂತಿಯನ್ನು ಏಪ್ರಿಲ್ 05 ರಂದು ಹಾಗೂ ಏಪ್ರಿಲ್ 14 ರಂದು ಡಾ. ಬಿ.ಆರ್ ಅಂಬೇಡ್ಕರ್ ಅವರ ಜಯಂತಿಯನ್ನು ಕರ್ನಾಟಕ ಕಲಾ ಮಂದಿರದಲ್ಲಿ ಆಚರಣೆ ಮಾಡಲಾಗುವುದು.

ಡಾ. ಬಿ.ಆರ್. ಅಂಬೇಡ್ಕರ್ ಭವನದ ಕಾಮಗಾರಿಗೆ 23 ಕೋಟಿ ಗೆ ನಾಳೆ ನಡೆಯುವ ಕ್ಯಾಬಿನೆಟ್ ಸಭೆಯಲ್ಲಿ ಅನುಮೋದನೆ ಆಗುತ್ತದೆ. ನಂತರ ಟೆಂಡರ್ ಕರೆದು ಕಾಮಗಾರಿ ಪ್ರಾರಂಭಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು. ಸ್ಥಳೀಯ ಸಂಸ್ಥೆಗಳು ಹಾಗೂ ತಾಲ್ಲೂಕು ಪಂಚಾಯತ್ ವತಿಯಿಂದ ಎಸ್ ಎಸ್ ಎಲ್ ಸಿ ಯಲ್ಲಿ ಉತ್ತಮ ಅಂಕ ಗಳಿಸಿದ ಮಕ್ಕಳಿಗೆ ಪ್ರೋತ್ಸಾಹಕ್ಕೆ ಬಹುಮಾನ ನೀಡುವಂತೆ ಸೂಚಿಸಲಾಗುವುದು ಎಂದು ತಿಳಿಸಿದರು.

ಇಬ್ಬರು ಮಹನೀಯರ ಜಯಂತಿಗಳ ಆಚರಣೆಯ ಸಂಬಂಧ ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆ ಮಾಡಲು ಅಗತ್ಯ ಕ್ರಮವಹಿಸಬೇಕು ಹಾಗೂ ಜಯಂತಿ ಕಾರ್ಯಕ್ರಮದಲ್ಲಿ ವೇದಿಕೆ ವ್ಯವಸ್ಥೆ ಹಾಗೂ ಸಾರ್ವಜನಿಕರಿಗೆ ಉಪಹಾರ ಹಾಗೂ ನೀರಿನ ವ್ಯವಸ್ಥೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ರಂಗೇಗೌಡ ಅವರು ಮಾತನಾಡಿ ಶಿಷ್ಟಾಚಾರದ ಅನ್ವಯ ಆಹ್ವಾನ ಪತ್ರಿಕೆಗಳನ್ನು ಮುದ್ರಣ ಮಾಡಿ ಜನಪ್ರತಿನಿಧಿಗಳು ಹಾಗೂ ಮುಖಂಡರಿಗೆ ನೀಡಲಾಗುವುದು. ಜಯಂತಿಗಳ ಬಗ್ಗೆ ಕರಪತ್ರ, ಪೋಸ್ಟರ್, ಬ್ಯಾನರ್ ಹಾಗೂ ಫ್ಲೆಕ್ಸ್ ಗಳನ್ನು ಮುದ್ರಿಸಲಾಗುವುದು. ಜಯಂತಿಗೆ ಭಾಗವಹಿಸುವವರಿಗೆ ಉಪಹಾರ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದು.

ಸಮುದಾಯದ ಮುಖಂಡರು ಮಾತನಾಡಿ ನಗರದಲ್ಲಿ ನೆನೆಗುದಿಗೆ ಬಿದ್ದಿರುವ ಅಂಬೇಡ್ಕರ್ ಭವನ ಕಾಮಗಾರಿಯನ್ನು ಬೇಗ ಮುಗಿಸಿ ಬಳಕೆಗೆ ನೀಡಬೇಕು. ಎಸ್ .ಸಿ.ಪಿ ಹಾಗೂ ಟಿ.ಎಸ್.ಪಿ ಅನುದಾನ ಪೂರ್ಣ ಪ್ರಮಾಣದಲ್ಲಿ ಬಳಕೆ ಆಗಬೇಕು. ಸರ್ಕಾರಿ ಶಾಲೆ, ಖಾಸಗಿ ಶಾಲೆಗಳಲ್ಲಿ ಕಡ್ಡಾಯವಾಗಿ ಅಂಬೇಡ್ಕರ್ ಜಯಂತಿ ಆಚರಣೆ ಮಾಡಬೇಕು. ಎಲ್ಲಾ ಇಲಾಖೆಗಳ ಅಧಿಕಾರಿಗಳು ಜಯಂತಿಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಯುಕೇಶ್ ಕುಮಾರ್ ಅವರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಡಿ.31 ರೊಳಗೆ ನವೀಕರಿಸಿ

**ಮೈಸೂರು:** ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರಡಿ ನೋಂದಣಿಯಾದ ಪ್ರತಿಯೊಂದು ಸಂಘವು ಪ್ರತಿ ವರ್ಷ ಲೆಕ್ಕಪತ್ರಗಳ ಫೈಲಿಂಗ್ ಮಾಡಬೇಕಾಗುತ್ತದೆ. ಆದರೆ ಕಲಂ 13 ರಂತೆ ಅನೇಕ ಸಂಘ ಸಂಸ್ಥೆಗಳು 05 ವರ್ಷಗಳಿಗೂ ಮೇಲ್ಪಟ್ಟು ಫೈಲಿಂಗ್ ಮಾಡದೆ ಇರುವ ಸಂಘ ಸಂಸ್ಥೆಗಳನ್ನು ಸಂಘದ ಮತ್ತು ಸದಸ್ಯರ ಹಿತದೃಷ್ಟಿಯಿಂದ ಒಂದು ಬಾರಿ ದಂಡ ವಿಧಿಸಿ ಕೆಳಕಂಡ ಶರತ್ತುಗಳಿಗೆ ಒಳಪಟ್ಟು ಡಿಸೆಂಬರ್ 31.2025 ರ ಅಂತ್ಯದೊಳಗೆ ನವೀಕರಿಸಲು (ಫೈಲಿಂಗ್) ಕರ್ನಾಟಕ ರಾಜ್ಯದ ಬೆಂಗಳೂರಿನ ಸಹಕಾರ ಸಂಘಗಳ ನಿಬಂಧಕರು ಮಾರ್ಚ್ 14.2025 ರ ಸುತ್ತೋಲೆಯಲ್ಲಿ ಅನುಮತಿಸಿರುತ್ತಾರೆ.

ಷರತ್ತುಗಳು: 05 ವರ್ಷಗಳಿಗೂ ಮೇಲ್ಪಟ್ಟು ಫೈಲಿಂಗ್ ಮಾಡಿಕೊಳ್ಳದೇ ಬಾಕಿ ಇರುವ ಸಂಘ ಸಂಸ್ಥೆಗಳು ಪ್ರತಿ ವರ್ಷಕ್ಕೆ ರೂ.3000/-ದಂತೆ ಹೆಚ್ಚುವರಿ ದಂಡ ಪಾವತಿಸಿ ಫೈಲಿಂಗ್ ಮಾಡಿಸಿಕೊಳ್ಳಬೇಕು. ಈ ಅವಕಾಶ ಡಿಸೆಂಬರ್ 31 ರ ಅಂತ್ಯದ ವರೆಗೆ ಜಾರಿಯಲ್ಲಿ ಇರುತ್ತದೆ. ಸಂಘದ ಎಲ್ಲಾ ಆಡಳಿತ/ಆಡಿಟ್ ವರದಿಗಳನ್ನು ಮುದ್ದಾಂ/ ಆನ್ ಲೈನ್ ನಲ್ಲಿ ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ.

ನವೀಕರಣಕ್ಕೆ ಸಂಬಂಧಿಸಿದಂತೆ ಸಂಘದ ಅಗತ್ಯ ದಾಖಲೆಗಳಾದ ಬೈಲಾ ಪ್ರತಿ, ಆಡಿಟ್ ವರದಿಗಳು, ಕಾರ್ಯಕಾರ ಸಮಿತಿ ನಡವಳಿಕೆಗಳು, ಸಾಮಾನ್ಯ ಸಭೆಗೆ ಹಾಜರಾದ ಸದಸ್ಯರ ವಿವರ ಮತ್ತು ಅವರ ಸಹಿಯೊಂದಿಗೆ, ಒಟ್ಟು ಸದಸ್ಯರ ಪಟ್ಟಿ, ನೋಂದಣಿ ಪ್ರಮಾಣ ಪತ್ರ, ಹಾಗೂ ಇನ್ನಿತರೆ ಅಗತ್ಯ ದಾಖಲೆಗಳೊಂದಿಗೆ ಸಂಘಗಳ ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರರು, ಸಾರ್ವಜನಿಕ ಸೇವೆಗಳು ಕಟ್ಟಡ, ನ್ಯೂ ಸಯಾಜೀರಾವ್ ರಸ್ತೆ, ದೂರವಾಣಿ ಸಂಖ್ಯೆ 0521-2521956 ನ್ನು ಸಂಪರ್ಕಿಸಬಹುದು.

ಮೈಸೂರು ನಗರ, ಮೈಸೂರು ತಾಲ್ಲೂಕು, ನಂಜನಗೂಡು ತಾಲ್ಲೂಕು, ಟಿ.ನರಸೀಪುರ ತಾಲ್ಲೂಕು, ಹುಣಸೂರು ತಾಲ್ಲೂಕು, ಪಿರಿಯಾಪಟ್ಟಣ ತಾಲ್ಲೂಕು, ಹೆಚ್.ಡಿ.ಕೋಟೆ ತಾಲ್ಲೂಕು, ಸರಗೂರು ತಾಲ್ಲೂಕು, ಕೆ.ಆರ್ .ನಗರ ತಾಲ್ಲೂಕು, ಸಾಲಿಗ್ರಾಮ ತಾಲ್ಲೂಕು, ಈ ಕಚೇರಿಯ ವ್ಯಾಪ್ತಿಗೆ ಒಳಪಡುತ್ತದೆ ಎಂದು ಮೈಸೂರು ಜಿಲ್ಲೆಯ ಸಂಘದ ಜಿಲ್ಲಾ ನೋಂದಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ಣಕುಂಡಲ ಮಹೋತ್ಸವ



**ಮಡಿವಾಳ :** ತೊರ್ನಹಳ್ಳಿ ಸಮೀಪದ ಮುಗಬಾಳ ಗ್ರಾಮದ ಸೋಮೇಶ್ವರಸ್ವಾಮಿ ಹಾಗೂ ಭದ್ರಕಾಳಿ ಸಮೇತ ಶ್ರೀ ವೀರಭದ್ರಸ್ವಾಮಿಗೆ ಸಾಮೂಹಿಕ ಆರತಿ ಹಾಗೂ ಕರ್ಣಕುಂಡಲ ಮಹೋತ್ಸವ ಕಾರ್ಯಕ್ರಮ ನಡೆಯಿತು.

ಆರತಿ ಹಾಗೂ ಕರ್ಣಕುಂಡಲ ಮಹೋತ್ಸವ ಅಂಗವಾಗಿ ಮುಂಜಾನೆಯಿಂದಲೇ ದೇವಾಲಯಲ್ಲಿ ಹೋಮ, ಹವನ, ಅಭಿಷೇಕ, ವೇದ ಮಂತ್ರ ಪಾರಾಯಣ, ಗಣಪತಿ ಪೂಜೆ, ನವಗ್ರಹ ಪೂಜೆ, ಗಂಗೇ ಪೂಜೆ ವಿಶೇಷ ಹೂವಿನ ಹಾಗೂ ಆಭರಣ ಅಲಂಕಾರವನ್ನು ಮಾಡಲಾಗಿತ್ತು. ಸಮುದಾಯ ಸುಮಂಗಲಿಯರಿಂದ ಆರತಿ ನಡೆಯಿತು,

ಸುತ್ತ ಮುತ್ತಲಿನ ಸಾರ್ವಜನಿಕರು ದೇವಾಲಯಕ್ಕೆ ಆಗಮಿಸಿ ಪೂಜೆಯನ್ನು ಸಲ್ಲಿಸಿದರು. ಬೈರ್ನಹಳ್ಳಿ ಗ್ರಾಮದ ವೀರಗಾಸೆ ಬಿ.ಎಸ್.ನಾಗರಾಜ್ ತಂಡದವರಿಂದ ವೀರಗಾಸೆ ಕುಣಿತ ಹಾಗೂ ಅಗ್ನಕುಂಡ ಪ್ರವೇಶ ನಡೆಯಿತು. ಆರತಿ ಹಾಗೂ ಕರ್ಣಕುಂಡಲ ಮಹೋತ್ಸವ ಕಾರ್ಯಕ್ರಮದಲ್ಲಿ ಹುಣಸಮಾರನಹಳ್ಳಿ ಸಂಸ್ಥಾನ ಮಠದ ನಂಜೇಶ್ವರ ಶಿವಾಚಾರ್ಯಸ್ವಾಮಿ, ನಿವೃತ್ತ ಐಎಎಸ್ ಅಧಿಕಾರಿ ಹಾಗೂ ವೀರಭದ್ರಸ್ವಾಮಿ ಟ್ರಸ್ಟ್‌ನ ಗೌರವಾಧ್ಯಕ್ಷ ಸಿ.ಸೋಮಶೇಖರ್, ಅಧ್ಯಕ್ಷ ಮಂಜುನಾಥ್ ಶ್ರಾಫ್, ಕಾರ್ಯದರ್ಶಿ ವೀರಸ್ವಾಮಿ ಗೌಡ, ಖಜಾಂಚಿ ಜ್ಞಾನಮೂರ್ತಿ, ನಿರ್ದೇಶಕ ಎಂ.ಎಸ್. ಕೃಷ್ಣಮೂರ್ತಿ, ಜಗದೀಶ್, ಸುರೇಶ್ ಬಾಬು, ಸುಬ್ರಮಣಿ, ಬಸವರಾಜು, ನಟರಾಜ್, ಚಂದ್ರೇಗೌಡ, ಅರ್ಚಕರಾದ ಸಿದ್ದಲಿಂಗದೇವರು, ಇನ್ನಿತರರು ಹಾಜರಿದ್ದರು.

# ಜಂಕ್ ಫುಡ್, ದುಶ್ಚಟಗಳಿಂದ ರೋಗನಿರೋಧಕ ಶಕ್ತಿ ಕ್ಷೀಣ

**ಚಿತ್ರದುರ್ಗ:** ಮನುಷ್ಯನ ಆಹಾರ ಪದ್ಧತಿಯಲ್ಲಿ ಬದಲಾವಣೆಗಳಾಗಿದ್ದು ಜನರು ಹೆಚ್ಚು ಹೆಚ್ಚಾಗಿ ಜಂಕ್ ಫುಡ್ ಗಳನ್ನು, ಕಡಿಮೆ ಪೌಷ್ಠಿಕಾಂಶವುಳ್ಳ ಆಹಾರ, ಪೌಷ್ಟಿಕಾಂಶಗಳಿಲ್ಲದಂತಹ ಆಹಾರ ಸೇವನೆ ಮಾಡುತ್ತಿರುವುದರಿಂದ, ಯುವಜನರಲ್ಲಿ ದುಶ್ಚಟಗಳು ಹೆಚ್ಚಾಗುತ್ತಿರುವುದರಿಂದ ದೇಹದಲ್ಲಿ ರೋಗನಿರೋಧಕ ಶಕ್ತಿ ಕ್ಷೀಣಿಸುತ್ತಾ ಬರುತ್ತಿದ್ದು, ಹೆಚ್ಚು ರೋಗಗಳು ಮನುಷ್ಯನ ಮೇಲೆ ಅಕ್ರಮಣ ಮಾಡುತ್ತಿವೆ, ಹಾಗಾಗಿ ಜನರು ಆರೋಗ್ಯಪೂರ್ಣವಾದಂತ, ಪೌಷ್ಟಿಕಾಂಶ ಇರುವಂತಹ, ವಿಟಮಿನ್ಸ್ ಗಳಿರುವಂತಹ ಸಮತೋಲನವಾದ ಆಹಾರವನ್ನು ಸೇವನೆ ಮಾಡಿ, ದುಶ್ಚಟಗಳಿಂದ ದೂರವಿದ್ದು ತಮ್ಮ ಆರೋಗ್ಯವನ್ನು ರಕ್ಷಿಸಿಕೊಳ್ಳಬೇಕು ಎಂದು ಶ್ರೀ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ. ರಮೇಶ್ ಐನಳ್ಳಿಯವರು ಉಪನ್ಯಾಸ ನೀಡುತ್ತಾ ಮಾತನಾಡಿದರು.

ಅವರು ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಆಯೋಜಿಸಿದ್ದ ಪ್ರಾಣಿ ಶಾಸ್ತ್ರ ವಿಭಾಗದ ಅತಿಥಿ ಉಪನ್ಯಾಸದಲ್ಲಿ ಮಾನವನ ರೋಗನಿರೋಧಕ ಶಕ್ತಿಯ ಬಗ್ಗೆ ವಿಶೇಷ ಉಪನ್ಯಾಸ ನೀಡುತ್ತಾ ಮಾತನಾಡುತ್ತಿದ್ದರು.

ಜಂಕ್ ಫುಡ್ ಸೇವನೆಯಿಂದ ಜೀರ್ಣಕ್ರಿಯೆಯ ಆರೋಗ್ಯ ಹಾಳಾಗುತ್ತದೆ. ಸಂಸ್ಕರಿಸಿದ ಆಹಾರಗಳು, ಹೆಚ್ಚಾಗಿ



ಸ್ಯಾಚುರೇಟೆಡ್ ಕೊಬ್ಬುಗಳಲ್ಲಿ ಮತ್ತು ಕಡಿಮೆ ಫೈಬರ್ನಲ್ಲಿ, ಕಳಪೆ ಜೀರ್ಣಕ್ರಿಯೆಗೆ ಕಾರಣವಾಗಬಹುದು. ಅಗತ್ಯ ಪೋಷಕಾಂಶಗಳ ಕೊರತೆಯು ಜೀರ್ಣಕ್ರಿಯೆಯ ಪ್ರಕ್ರಿಯೆಯನ್ನು ಅಡ್ಡಿಪಡಿಸುತ್ತದೆ, ಚಯಾಪಚಯವನ್ನು ನಿಧಾನಗೊಳಿಸುತ್ತದೆ ಮತ್ತು ಅನಾರೋಗ್ಯಕರ ತೂಕವನ್ನು ಹೆಚ್ಚಿಸಿ ಬೊಜ್ಜು ನಿರ್ಮಾಣವಾಗುತ್ತದೆ ಎಂದರು.

ಪೌಷ್ಟಿಕ ಆಹಾರಗಳನ್ನು ಸೇವಿಸುವ ಮೂಲಕ, ವ್ಯಾಯಾಮ ಮಾಡುವ ಮೂಲಕ ಮತ್ತು ಸಾಕಷ್ಟು ನಿದ್ರೆ ಮಾಡುವ ಮೂಲಕ ನಮ್ಮ ರೋಗನಿರೋಧಕ ಶಕ್ತಿಯನ್ನು ಬಲಪಡಿಸಬಹುದು. ರೋಗನಿರೋಧಕ ವ್ಯವಸ್ಥೆಯು ನಮ್ಮ ದೇಹವನ್ನು ಸೋಂಕುಗಳು ಮತ್ತು ಗಾಯಗಳಿಂದ ಗುಣಪಡಿಸಲು ಸಹಾಯ ಮಾಡುತ್ತದೆ ಎಂದರು.

ಮನುಷ್ಯನಲ್ಲಿ ಪ್ರತಿರಕ್ಷಣಾ ವ್ಯವಸ್ಥೆಯು ಅಂಗಗಳು, ಬಿಳಿ ರಕ್ತ ಕಣಗಳು, ಪ್ರೋಟೀನ್ಗಳು ಮತ್ತು ರಾಸಾಯನಿಕಗಳ ದೊಡ್ಡ ಜಾಲವಾಗಿದೆ. ಸೂಕ್ಷ್ಮಜೀವಿಗಳು ಮತ್ತು ಇತರ ಆಕ್ರಮಣಕಾರರಿಂದ ನಮ್ಮನ್ನು ರಕ್ಷಿಸಲು ಈ ಎಲ್ಲಾ ಭಾಗಗಳು ಒಟ್ಟಾಗಿ ಕೆಲಸ ಮಾಡಿ ಬ್ಯಾಕ್ಟೀರಿಯಾ .ವೈರಸ್ಗಳು. ಸೋಂಕುಗಳಿಗೆ ಕಾರಣವಾಗುವ ಶಿಲೀಂಧ್ರಗಳು, ಪರಾವಲಂಬಿಗಳು .ಕ್ಯಾನ್ಸರ್ ಕೋಶಗಳನ್ನ ನಾಶಗೊಳಿಸುತ್ತವೆ ಎಂದರು.

ಪ್ರಾಂಶುಪಾಲರಾದ ಶ್ರೀ ಸಿದ್ದರಾಮ ಚನಗೊಂಡನವರು ಅಧ್ಯಕ್ಷೀಯ ಭಾಷಣ ಮಾಡುತ್ತಾ ಹೆಚ್ಚುತ್ತಿರುವ ಕಾಯಿಲೆಗಳನ್ನು ನೈಸರ್ಗಿಕವಾಗಿನಿಯಂತ್ರಿಸುವಂತಹಶಕ್ತಿಯನ್ನು ಉಳಿಸಿಕೊಳ್ಳಬೇಕು, ದಿನನಿತ್ಯ ಸೇವನೆ ಮಾಡುವ ಆಹಾರದಲ್ಲಿ ಪೌಷ್ಟಿಕಾಂಶಗಳು ಇರುವಂತೆ ನೋಡಿಕೊಳ್ಳಬೇಕು, ಜನಸಾಮಾನ್ಯರಿಗೂ ಸಹ ರೋಗನಿರೋಧಕ ಶಕ್ತಿಯ ಬಗ್ಗೆ ಮಾಹಿತಿ ನೀಡಿ ಜಾಗೃತಗೊಳಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಡಾ ಸತೀಶ್ ಗೌಡರು ಸ್ವಾಗತಿಸಿದರು, ಅತಿಥಿ ಉಪನ್ಯಾಸಕರುಗಳಾದ ಗುರುದೇವ ಮಾಲಿ ವಂದಿಸಿದರು, ಡಾ. ಅಕ್ಷಯ್ ವಿ ದೇಶಪಾಂಡೆ ನಿರೂಪಿಸಿದರು, ಬಿ. ಎಸ್ಸಿ. ವಿದ್ಯಾರ್ಥಿನಿ ಎಚ್. ಎಸ್. ಪ್ರೇರಣ ಪ್ರಾರ್ಥಿಸಿದರು.

ಕಾರ್ಯಕ್ರಮದಲ್ಲಿ ಡಾ ನಂದ ಬಿ.ಎಲ್. ಐಕ್ಯೂಎಸಿ ಸಂಯೋಜಕರು. ಪ್ರಾಧ್ಯಾಪಕರಾದ ಡಾ. ಎಂ ಜಾಫರ್ ಇಕ್ಬಾಲ್ ನವಲಗುಂದ, ಶ್ರೀಮತಿ ಸೀಮಾ ಕೌಸರ್, ಉಪನ್ಯಾಸಕರಾದ ಮಂಜುನಾಥ್ ವೈ ಸಿ. ಚಂದ್ರಶೇಖರ್ ಬಿ. ಎಂ. ಹಾಜರಿದ್ದರು.

# ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ



**ಕೋಲಾರ:** ನಗರದ ಕೆಎಸ್‌ಆರ್ಟಿಸಿ ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ಮತ್ತು ಜಿಲ್ಲಾ ಮುಖಂಡರ ನೇತೃತ್ವದಲ್ಲಿ ಮಾನವಸರಪಳಿ ನಿರ್ಮಿಸಿ ಸುಮಾರು ಎರಡು ಗಂಟೆಗೂ ಹೆಚ್ಚು ಕಾಲ ಸರ್ಕಲ್ ಬಂದ್ ಮಾಡಿ ರಾಜ್ಯಸರ್ಕಾರದ ಹಿಡೋ ವಿರೋಧಿ ನೀತಿ ಅಲ್ಪಸಂಖ್ಯಾತರಿಗೆ ,ಗುತ್ತಿಗೆಯಲ್ಲಿ ಮೀಸಲಾತಿ ಮತ್ತು ಸಂವಿಧಾನ ವಿರೋಧಿ ಹೇಳಿಕೆಗಳನ್ನು ಖಂಡಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶವನ್ನು ಹೊರಹಾಕಿದರು.

ಒಂದುಹಂತದಲ್ಲಿ ಕಾರ್ಯಕರ್ತರು ಮತ್ತು ಪೊಲೀಸರ ನಡುವೆ ವಾಕ್ಸಮರ ,ತೊಳ್ಳಾಟ- ನೂಕಾಟ ನಡೆಯಿತು ಅಲ್ಪಸಮಯ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು ನಂತರದಲ್ಲಿ ಪ್ರತಿಭಟನೆ ಮುಂದುವರೆಯಿತು

ಜಿಲ್ಲಾ ಮುಖಂಡರು ಮಾತನಾಡಿ ಸಿದ್ದರಾಮಯ್ಯ ನವರೆ ನಿಮಗೆ ಹಿಂದೂಗಳು ವೋಟ್ ಹಾಕಿಲ್ಲವೇ ಅಥವಾ ಕಾಂಗ್ರೆಸ್ಗೆ ಹಿಂದೂಮತಗಳು ಬೇಡವೇ ಎಂದು ಪ್ರಶ್ನಿಸಿದರು . ರಾಜ್ಯಸರ್ಕಾರದ ಹಲವು ನಿರ್ಣಯಗಳು ,ಮುಖಂಡರ ಹೇಳಿಕೆಗಳು, ಒಳಜಗಳಗಳು ,ಮೀಸಲಾತಿಯವರ ಹಣ ಗುಳುಮ್ ,ಸಂವಿಧಾನ ಭದಲಾವಣೆಯ ಮಾತುಗಳು ,ಅಲ್ಪಸಂಖ್ಯಾತರಿಗೆ ವಿಶೇಷ ಪ್ಯಾಕೇಜ್ ಮತ್ತು ಹಿಂದೂ ವಿರೋಧಿ ನೀತಿಗಳನ್ನು ಖಂಡಿಸಿ ರಾಜ್ಯಾದ್ಯಂತ ಪ್ರತಿಭಟನೆಗಳು ನಡೆಯುತ್ತಿದ್ದು ರಾಜ್ಯ ಸರ್ಕಾರ ಎಚ್ಚೆತ್ತುಕೊಳ್ಳದೆಹೋದ ಪಕ್ಷದಲ್ಲಿ ಮುಂದಿನದಿನಗಳಲ್ಲಿ ಉಗ್ರಹೋರಾಟಗಳನ್ನು ಎದುರಿಸಬೇಕಾದೀತು ಎಂದು ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷರಾದ ಓಂ ಶಕ್ತಿ ಚಲಪತಿ ,ಮಾಜಿಸಂಸದರಾದ ಮುನಿಸ್ವಾಮಿ ,ಮಾಜಿಶಾಸಕರಾದ ವೈ ಸಂಪಂಗಿ , ಬಿ ಪಿ ವೆಂಕಟಮುನಿಯಪ್ಪ, ಮಂಜುನಾಥ್ ,ಪ್ರಧಾನ ಕಾರ್ಯದರ್ಶಿ ಮಹೇಶ್, ವಾಸುದೇವ್ ,ವಿಜಯಕುಮಾರ್ ,ಕೋಳಿ ನಾಗರಾಜ್ ,ಬಾಲಾಜಿ, ರಾಮಚಂದ್ರೇಗೌಡ ,ತಿಮ್ಮರಾಯಪ್ಪ ಶೀಗೆಹಳ್ಳಿ ಸುಂದರ್ ,ಅಪ್ಪಿನಾರಾಯಣಸ್ವಾಮಿ ,ಕೆಂಬೋಡಿ ನಾರಾಯಣಸ್ವಾಮಿ ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.

ಸಂಜೆ ಮುಗಿಲು
ಗುರುವಾರ
27.3.2025


# ಹುಳಿಯಾರು ನಫೆಡ್ ಕೇಂದ್ರದಲ್ಲಿ ದುಡ್ಡು ಕೊಟ್ಟರೆ ರಾಗಿ ಖರೀದಿ!

**ಹುಳಿಯಾರು** : ಬೆಂಬಲ ಬೆಲೆಯಲ್ಲಿ ರಾಗಿ ಖರೀದಿಸುವ ಸಲುವಾಗಿ ಸರ್ಕಾರ ಹುಳಿಯಾರು ಎಪಿಎಂಸಿಯಲ್ಲಿ ನಫೆಡ್ ಕೇಂದ್ರ ಆರಂಭಿಸಿದೆ. ಈ ನಫೆಡ್ ಕೇಂದ್ರದಲ್ಲಿ ಎಲ್ಲದಕ್ಕೂ ದುಡ್ಡು ಕೇಳುತ್ತಿದ್ದು ದುಡ್ಡು ಕೊಟ್ಟರೆ ಮಾತ್ರ ರಾಗಿ ಖರೀದಿಸುವ ವಾತಾವರಣ ನಿರ್ಮಾಣವಾಗಿದೆ ಎಂದು ರೈತರು ದೂರಿದ್ದಾರೆ. ಈ ಬಗ್ಗೆ ಮೇಲಧಿಕಾರಿಗಳಿಗೆ ದೂರವಾಣಿ ಮೂಲಕ ದೂರು ನೀಡಿದರೂ ಕ್ರಮ ಕೈಗೊಳ್ಳುತ್ತಿಲ್ಲ ಎಂದು ರೈತರು ಆರೋಪಿಸುತ್ತಿದ್ದಾರೆ.

ಮಾರುಕಟ್ಟೆಯಲ್ಲಿ ರಾಗಿ ಬೆಲೆ 3 ಸಾವಿರ ರೂಪಾಯಿಗೂ ಕಡಿಮೆ ಇರುವುದರಿಂದ ಸರ್ಕಾರ 4290 ರೂ. ಬೆಂಬಲ ಬೆಲೆ ಘೋಷಿಸಿ ರೈತನ ನೆರವಿಗೆ ಧಾವಿಸಿತು. ರೈತ ರಾಗಿ ಕೊಯ್ಲು ಮುಗಿಸಿ ಚೀಲದಲ್ಲಿ ತುಂಬಿ ರಾಗಿ ಮಾರಲು ಕಾಯುತ್ತಿದ್ದರೂ ಸಹ ತಿಂಗಳಾನುಗಟ್ಟಲೆ ನೊಂದಣಿ ಪ್ರಕ್ರಿಯೆಯಲ್ಲೇ ದಿನ ದೂಡುತ್ತಿತ್ತು. ರೈತ ಸಂಘ ಸೇರಿದಂತೆ ಜನಪ್ರತಿನಿಧಿಗಳು ಒತ್ತಡ ಏರಿದ ಪರಿಣಾಮ ಮಾರ್ಚ್ ಮೊದಲ ವಾರದಲ್ಲಿ ಖರೀದಿ ಆರಂಭಿಸಲಾಯಿತು. ಆರಂಭದಲ್ಲೇ ಖರೀದಿ ಕೇಂದ್ರದಲ್ಲಿ ಕುರುಡು ಕಾಂಚಾಣ ಕುಣಿಯುತಲಿತ್ತು. ಇದನ್ನು ಗಮನಿಸಿದ ರೈತ ಸಂಘ ರೈತರಿಂದ ಹಣ ವಸೂಲಿ ಮಾಡದಂತೆ ಖುದ್ದು ಖರೀದಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿ ಬಂದಿತ್ತು.

ಆದರೂ ಸಹ ಇಲ್ಲಿ ದುಡ್ಡಿನ ದಂದೆಗೆ ಕಡಿವಾಣ ಬಿದ್ದಿಲ್ಲ ಎಂದು ರೈತರೇ ಆರೋಪಿಸುತ್ತಿದ್ದಾರೆ. ಪ್ರತಿಯೊಂದಕ್ಕೂ ಇಲ್ಲಿ ದುಡ್ಡು ಕೊಡಬೇಕಿದೆ. ದುಡ್ಡು ಕೊಟ್ಟರೆ ಕಳಪೆ ರಾಗಿಯೂ ಸಹ ಇಲ್ಲಿ ಖರೀದಿ ಆಗುತ್ತಿದೆ. ದುಡ್ಡು ಕೊಡದಿದ್ದರೆ ಗುಣಮಟ್ಟದ ರಾಗಿಗೂ ಸಹ ಸಬೂಬು ಹೇಳಿ ರಿಜೆಕ್ಟ್ ಮಾಡುತ್ತಾರೆ. ಈ ಬಗ್ಗೆ ಮೇಲಧಿಕಾರಿಗಳಿಗೆ ದೂರು ನೀಡಿದರೂ ಪ್ರಯೋಜನ ಆಗಿಲ್ಲ. ಅಲ್ಲದೆ ಕೆಲ ಅಧಿಕಾರಿಗಳು ಫೋನ್ ಪಿಕ್ ಮಾಡೋದೇ ಇಲ್ಲ. ಈ ಬೆಳವಣಿಗೆ ಈ ದಂದೆಯಲ್ಲಿ ಅಧಿಕಾರಿಗಳೂ ಶಾಮಿಲ್ ಆಗಿರುವ ಅನುಮಾನ ಕಾಡುತ್ತಿದೆ ಎನ್ನುತ್ತಾರೆ ಕೆಂಕೆರೆ ರೈತ ಉದಯಕುಮಾರ್ ಆರೋಪಿಸುತ್ತಾರೆ.



## ರಾಗಿ ಜೊತೆ ಅಕ್ಕಿ ಇದೆ, ಇದು ಸೊಸೈಟಿ ರಾಗಿನೇ!

ಹುಳಿಯಾರು ರಾಗಿ ಖರೀದಿ ಕೇಂದ್ರದಲ್ಲಿ ಬುಧವಾರ ರೈತ ಉದಯಕುಮಾರ್ ಅವರು ದುಡ್ಡು ಪಡೆದು ಕಳಪೆ ರಾಗಿ ಖರೀದಿಸುತ್ತಿದ್ದಾರೆ ಬೇಕಿದ್ದರೆ ನೋಡಿ ಎಂದು ಅಲ್ಲಿ ಬಿದ್ದಿದ್ದ ಒಂದಿಡಿ ರಾಗಿ ತೆಗೆದು ಪ್ರದರ್ಶಿಸಿದ. ರಾಗಿ ಒಳಗೆ ಅಕ್ಕಿ ಹೇಗೆ ಬರುತ್ತೆ ಸಾರ್ ರಾಗಿ ಅಕ್ಕಿ ಒಟ್ಟಿಗೆ ಬೆಳೆಯುತ್ತಾರೆಯೇ ಎಂದು ಪ್ರಶ್ನಿಸಿ ನೂರಕ್ಕೆ ನೂರು ಇದು ಸೊಸೈಟಿ ರಾಗಿ ಸಾರ್. ಕಾರ್ಡ್‌ದಾರರಿಂದ ಕಡಿಮೆ ಬೆಲೆಗೆ ಖರೀದಿಸಿ ನಫೆಡ್‌ಗೆ ಹೆಚ್ಚು ಬೆಲೆಗೆ ಬಿಡುತ್ತಾರೆ. ಪುನಃ ಇದೇ ರಾಗಿ ಸೊಸೈಟಿ ಮೂಲಕ ಪುಕ್ಕಟ್ಟೆಯಾಗಿ ಕಾರ್ಡ್‌ದಾರರಿಗೆ ನೀಡುತ್ತಾರೆ. ಮತ್ತೆ ನಫೆಡ್ ಮೂಲಕ ಸೊಸೈಟಿಗೆ ಹೋಗುತ್ತದೆ. ಇದೊಂದು ದುಡ್ಡು ಮಾಡುವ ದಂದೆ ಸಾರ್ ಎನ್ನುತ್ತಾರೆ ಉದಯಕುಮಾರ್.



ನಾನು ರಾಗಿ ಬಿಡಲು ನಫೆಡ್‌ಗೆ ಬಂದಾಗಲೂ ನನಗೆ ದುಡ್ಡು ಕೇಳಿದರು. ನಾನು ಕೊಡೋದಿಲ್ಲ. ಸರ್ಕಾರ ನಿಮಗೆ ಸಂಬಳ ಕೊಡುತ್ತಿರುವಾಗ ನಮ್ಮಿಂದ ಹೇಕೆ ದುಡ್ಡು ಕೇಳುತ್ತೀರಿ ಎಂದು ದಬಾಯಿಸಿದಾಗ ಖರೀದಿ ಮಾಡಿದರು. ಇವತ್ತು ಕಳೆದ 2 ಗಂಟೆಗಳ ಕಾಲ ಇಲ್ಲೇ ಇದ್ದು ಎಲ್ಲವನ್ನೂ ಗಮನಿಸಿ ಮಾಧ್ಯಮಕ್ಕೆ ಮಾಹಿತಿ ನೀಡುತ್ತಿದ್ದು ಇಲ್ಲಿ ದುಡ್ಡು ಕೊಟ್ಟರೆ ಮಾತ್ರ ರಾಗಿ ಖರೀದಿ ಎನ್ನುವ ವಾತಾವರಣ ನಿರ್ಮಾಣವಾಗಿದೆ. ಅನುಮಾನವಿದ್ದರೆ ಸಿಸಿ ಕ್ಯಾಮರ ಹಾಕಲಿ. ಈ ಹಿಂದೆ ತೂಗಿರುವ ರಾಗಿಯ ಗುಣಮಟ್ಟ ಪರಿಶೀಲಿಸಲಿ.

**ಉದಯಕುಮಾರ್** ರೈತ, ಕೆಂಕೆರೆ



ತಾಹಸೀಲ್ದಾರ್ ಖುದ್ದು ಬಂದು ಪರಿಶೀಲಿಸಿದ್ದಾರೆ ಹುಳಿಯಾರು ರಾಗಿ ಖರೀದಿ ಕೇಂದ್ರದಲ್ಲಿ ಯಾರೊಬ್ಬರೂ ದುಡ್ಡು ಕೇಳುವುದಿಲ್ಲ. ಅಲ್ಲದೆ ರಾಗಿ ಎಂದ ಮೇಲೆ ಇಷ್ಟು ಪರ್ಸೆಂಟ್ ಕಸಕಡ್ಡಿ ಇದ್ದೇ ಇರುತ್ತದೆ. ಗುಣಮಟ್ಟ ಪರಿಶೀಲಿಸುವವರು ಇದನ್ನು ನೋಡಿಯೇ ಖರೀದಿಸುತ್ತಾರೆ. ಮಂಗಳವಾರ ತಹಸೀಲ್ದಾರ್ ಅವರೇ ಖುದ್ದು ಭೇಟಿ ನೀಡಿ ಪರಿಶೀಲಿಸಿದ್ದಾರೆ. ಯಾವ ದೋಷಾರೋಪವೂ ಕಂಡು ಬಂದಿಲ್ಲ.

**ಕೃಷ್ಣಪ್ಪ** ಪ್ರಭಾರ ಖರೀದಿ ಅಧಿಕಾರಿ

# ಲಾರಿ ಪಲ್ಟಿ ಓರ್ವ ಸಾವು

**ಹುಳಿಯಾರು:** ರಾಗಿ ತುಂಬಿದ್ದ ಲಾರಿಯೊಂದು ಆಯ ತಪ್ಪಿ ಟಿವಿಎಸ್ ಮೇಲೆ ಪಲ್ಟಿಯಾದ ಪರಿಣಾಮ ಟಿವಿಎಸ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿದ್ದು ಈ ಘಟನೆಯಿಂದ ಆಕ್ರೋಶಗೊಂಡ ಜನರು ಹಂಪ್ಸ್ ಹಾಕುವಂತೆ ಒತ್ತಾಯಿಸಿ ರಾಷ್ಟ್ರೀಯ ಹೆದ್ದಾರಿ ಮಧ್ಯದಲ್ಲೇ ರಸ್ತೆಗೆ ಅಡ್ಡಲಾಗಿ ಶಾಮಿಯಾನ ಹಾಕಿ ಪ್ರತಿಭಟನೆ ಮಾಡಿದ ಘಟನೆ ಹುಳಿಯಾರು ಹೋಬಳಿಯ ಯಗಚೀಹಳ್ಳಿಯಲ್ಲಿ ಬುಧವಾರ ಜರುಗಿದೆ.

ಹುಳಿಯಾರು ನಫೆಡ್ ಕೇಂದ್ರದಿಂದ ರಾಗಿ ತುಂಬಿಕೊಂಡು ಶಿರಾ ಗೋಡನ್‌ಗೆ ಹೋಗುತ್ತಿದ್ದ ಲಾರಿ ಯಗಚೀಹಳ್ಳಿ ಬಳಿ ಗಾಣದಾಳು ಸೊಸೈಟಿಯಿಂದ ರೇಷನ್ ತೆಗೆದುಕೊಂಡು ತನ್ನೂರಾದ ಕೆ.ಎಸ್.ಪಾಳ್ಯಕ್ಕೆ ಟಿವಿಎಸ್‌ನಲ್ಲಿ ಹೋಗುತ್ತಿದ್ದ ಅಮೀರ್ (72) ಅವರ ಮೇಲೆ ಬಿದ್ದಿದೆ. ಪರಿಣಾಮ ಅಮೀರ್ ದೇಹ ಸೇರಿದಂತೆ ಟಿವಿಎಸ್ ಸಹ ಗುರುತೇ ಸಿಗದಂತೆ ನಜ್ಜುಗುಜ್ಜಾಗಿದೆ. ಅಲ್ಲದೆ ಲಾರಿಯಲ್ಲಿ ತುಂಬಿದ್ದ ನೂರಾರು ರಾಗಿ ಚೀಲಗಳು ರಸ್ತೆಯ ತುಂಬೆಲ್ಲ ಚೆಲ್ಲಾಪಿಲ್ಲಿಯಾಗಿ ಬಿದ್ದಿದೆ. ಅದೃಷ್ಟವಶತ್ ಈ ರಾಗಿ ಚೀಲಗಳು ಮತ್ತಾರ ಪ್ರಾಣಾಪಾಯ ಮಾಡಿಲ್ಲ ಎನ್ನುವುದು ಸಮಾಧನಕ ಸಂಗತಿಯಾಗಿದ್ದರೂ ಜನರು ಭಯಬೀತರಾಗುವಷ್ಟು ಭೀಕರವಾದ ಅಪಘಾತವಾಗಿದೆ.

ಇದರಿಂದ ಸಹಜವಾಗಿ ಆಕ್ರೋಶಗೊಂಡ ಮಾರುಹೊಳೆ, ಗಾಣಧಾಳು, ಕೆ.ಎಸ್.ಪಾಳ್ಯ, ಹೇಮಾನಾಯ್ಕತಾಂಡ್ಯ, ಬಾಳೆಗೊಂದಿಹಳ್ಳಿ, ಯಗಚೀಹಳ್ಳಿ ಕಾರೇಹಳ್ಳಿಯ ನೂರಾರು ಜನರು ರಸ್ತೆಗೆ ಅಡ್ಡಲಾಗಿ ಹಂಪ್ಸ್ ಹಾಕುವಂತೆ ಒತ್ತಾಯಿಸಿ ದಿಡೀರ್ ಪ್ರತಿಭಟನೆಗೆ ಇಳಿದರು. ರಸ್ತೆಗೆ ಅಡ್ಡಲಾಗಿ ಜೆಜೆಎಂ ಕಾಮಗಾರಿಗೆ ತಂದಿದ್ದ ಪೈಪ್‌ಗಳನ್ನು ಎಳೆದರು. ನೋಡನೋಡುತ್ತಿದ್ದಂತೆ ರಸ್ತೆಗೆ ಅಡ್ಡಲಾಗಿ ಶಾಮಿಯಾನ ಹಾಕಿ ಸೈಕಲ್ ಸಹ ಓಡಾಡದಂತೆ ರಸ್ತೆ ತಡೆ ಮಾಡಿದರು. ವಿಷಯ ತಿಳಿದ ಹುಳಿಯಾರು ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಹಂಪ್ಸ್ ಹಾಕಿಸುವ ಭರವಸೆ ನೀಡಿ ಧರಣಿ ಹಿಂಪಡೆಯುವಂತೆ ಮನವಿ ಸಹ ಮಾಡಿದರು.

ಆದರೆ ಪ್ರತಿಭಟನಾಕಾರರು ರಸ್ತೆ ಚೆನ್ನಾಗಿರುವುದಿಂದ ವಾಹನಗಳು ಅತೀ ವೇಗದಲ್ಲಿ ಓಡಾಡುತ್ತಿವೆ. ಮೊದಲೇ ನ್ಯಾಷನಲ್ ಹೈವೆ ಆಗಿರುವುದರಿಂದ ನಿತ್ಯ ನೂರಾರು ವಾಹನಗಳು ಓಡಾಡುತ್ತಿದ್ದು ಆಗಾಗ ಅಪಘಾತಗಳು ಸಂಭವಿಸುತ್ತಿರುತ್ತವೆ. ಈ ಹಿಂದೆಯೇ ಹಂಪ್ಸ್ ಹಾಕುವಂತೆ ಮನವಿ ಸಹ ಮಾಡಲಾಗಿತ್ತಾದರೂ ಇಲ್ಲಿಯವರೆವಿಗೆ ಹಂಪ್ಸ್ ಹಾಕಿಲ್ಲ. ಪರಿಣಾಮ ಅಮಾಯಕ ವೃದ್ದನೊಬ್ಬ ಸಾವನ್ನಪ್ಪುವಂತಾಯಿತು. ಹಾಗಾಗಿ ಹಂಪ್ಸ್ ಹಾಕದ ವಿನಃ ಧರಣಿ ಹಿಂಪಡೆಯುವುದಿಲ್ಲ ಎಂದು ಬಿಗಿ ಪಟ್ಟು ಹಿಡಿದರು. ಹೀಗೆ ಒಂದು ಗಂಟೆಗೂ ಹೆಚ್ಚು ಕಾಲ ರಸ್ತೆ ತಡೆದಿರುವುದರಿಂದ ವಿವಿಧ ಕೆಲಸ ಕಾರ್ಯಗಳಿಗೆ ಹೋಗುತ್ತಿದ್ದವರಿಗೆ ವಿವಿಧ ಊರುಗಳಿಗೆ ಪ್ರಯಾಣಿಸಲು ಬಸ್ಸಿನಲ್ಲಿ ಕುಳಿತವರಿಗೆ ಭಾರಿ ತೊಂದರೆಯಾಗಿತ್ತು.

ಚಿಕ್ಕನಾಯಕನಹಳ್ಳಿ ಸರ್ಕಲ್ ಇನ್ಸ್‌ಪೆಕ್ಟರ್ ನದಾಫ್ ಹಾಗೂ ಹುಳಿಯಾರು ಪಿಎಸ್‌ಐ ಧರ್ಮಾಂಜಿ ಹಾಗೂ ಜಗದೀಶ್ ಅವರು ಸ್ಥಳಕ್ಕೆ ಆಗಮಿಸಿ ಧರಣಿ ಸ್ಥಳದಿಂದಲೇ ಹೈವೆ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಪರಿಸ್ಥಿತಿ ಮತ್ತು ಜನರ ಒತ್ತಾಯವನ್ನು ವಿವರಿಸಿದರು. ಅದಕ್ಕೆ ಗುರುವಾರ ಬೆಳಗ್ಗೆಯೇ ಹಂಪ್ಸ್ ಹಾಕುವ ಭರವಸೆ ನೀಡಿದರು. ಇದಕ್ಕೆ ಪ್ರತಿಯಾಯಿ ಜನರು ನಾಳೆ 11 ಗಂಟೆಯೊಳಗೆ ಹಂಪ್ಸ್ ಹಾಕಲು ಮುಂದಾಗದಿದ್ದರೆ ಮತ್ತೆ ರಸ್ತೆ ತಡೆ ಮಾಡಬೇಕಾಗುತ್ತದೆಂದು ಎಚ್ಚರಿಸಿ ಧರಣಿ ಹಿಂಪಡೆದರು.

### ಮಣ್ಣಿನ ಮಕ್ಕಳಾಗಲಿ: ಕೆ.ವಿ. ಪ್ರಭಾಕರ್ ಕರೆ

# ಮೊಬೈಲ್ ಮಕ್ಕಳಾಗೋದು ಬೇಡ

**ತಾಂಡವಾಪುರ:** ಮಕ್ಕಳು ಕೈಗೆ ಮೈಗೆ ಮಣ್ಣು ಮೆತ್ತಿಕೊಂಡು ಬಂದರೆ ಖುಷಿ ಪಡಿ, ಅದೇ ಮಕ್ಕಳ ಕೈಗೆ ಮೊಬೈಲ್ ಅಂಟಿಸಿಕೊಂಡರೆ ಭಯ ಪಡಿ ಎಂದು ಮುಖ್ಯಮಂತ್ರಿಗಳ ಮಾಧ್ಯಮಸಲಹೆಗಾರರಾದ ಕೆ.ವಿ.ಪ್ರಭಾಕರ್ ಪೋಷಕರಿಗೆ ತಿಳಿ ಹೇಳಿದರು.

ಬಾಲಭವನ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಿ ಕೆ ವಿ ಪ್ರಭಾಕರ್ ಮಾತನಾಡುತ್ತಾ

ನಮ್ಮ ಹಿರಿಯರು ಆಡಿ ಕಲಿ–ಬರೆದು ಕಲಿ ಎಂದು ಯಾವಾಗ್ಲೂ ಹೇಳುತ್ತಿದ್ದರು. ಇದರ ಗುಟ್ಟು ಏನು ಗೊತ್ತಾ ?

ನಮ್ಮ ಬೆರಳಿನ ತುದಿಗಳಿಗೂ ನಮ್ಮ ಮೆದುಳಿಗೂ ನೇರ ನೇರ ಕನೆಕ್ಷನ್ (ಸಂಪರ್ಕ) ಇದೆ. ನಮ್ಮ ದೇಹದ ನರಮಂಡಲ ಮೆದುಳಿನಿಂದ ಶುರುವಾಗಿ ಬೆರಳ ತುದಿಯಲ್ಲಿ ಕೊನೆಗೊಳ್ಳುತ್ತದೆ. ಹೀಗಾಗಿ ಬೆರಳ ತುದಿಗಳು ಹೆಚ್ಚು ಚಟುವಟಿಕೆಯಾಗಿದ್ದಷ್ಟೂ ಮೆದುಳು ಹೆಚ್ಚೆಚ್ಚು ಚುರುಕಾಗುತ್ತದೆ.

ಮಕ್ಕಳ ಬೆರಳುಗಳು ಹೆಚ್ಚು ಚುರುಕಾಗುವುದು ಆಟದಲ್ಲಿ ಮತ್ತು ಬರೆಯುವುದರಲ್ಲಿ, ಶಾಲೆಗಳಲ್ಲೂ ಟೀಚರ್ ಗಳು ಮಕ್ಕಳಿಗೆ ಹೆಚ್ಚೆಚ್ಚು ಬರೆಸುತ್ತಾರೆ ಏಕೆಂದರೆ, ಬಾಯಿಪಾಠ ಮಾಡಿದ್ದು ಮರೆತು ಹೋಗುತ್ತದೆ. ಬರೆದು ಕಲಿತದ್ದು ನೇರ ಮೆದುಳಲ್ಲಿ ದಾಖಲಾಗಿ ಮರೆಯುವುದಿಲ್ಲ. ಹಾಗೆಯೇ ಮಕ್ಕಳು ಆಟ ಆಡುವಾಗಲೂ ಕೈ ಬೆರಳುಗಳು ಪೂರ್ತಿಯಾಗಿ ಚುರುಕಾಗುತ್ತಿರುತ್ತವೆ. ಇದರಿಂದ ಮೆದುಳು ಕೂಡ ಹೆಚ್ಚೆಚ್ಚು ಚುರುಕಾಗುತ್ತದೆ.

15 ವರ್ಷದ ಒಳಗೆ ಮಕ್ಕಳ ಮೆದುಳಿನ ಬೆಳವಣಿಗೆ ಬಹುತೇಕ ಮುಗಿದಿರುತ್ತದೆ. ಆದ್ದರಿಂದ 15 ವರ್ಷದ ಒಳಗೆ ಮಕ್ಕಳು ಏನನ್ನಾದರೂ ಕಲಿತು ಬಿಡುತ್ತಾರೆ. ಸಂಗೀತ, ನೃತ್ಯ, ಹಲವು ಭಾಷೆಗಳನ್ನು ಕಲಿಯಲು 15 ವರ್ಷದ ಒಳಗಿನ ಮಕ್ಕಳಲ್ಲಿ ಹೆಚ್ಚು ಸಾಮರ್ಥ್ಯ ಇರುತ್ತದೆ ಎಂದರು.

ಈಗಿನ ತಾಯಂದಿರು ಮಕ್ಕಳು ಕೈಗೆ ಮಣ್ಣು ಮೆತ್ತಿಕೊಂಡರೆ ರಟ್ಟೆ ಹಿಡಿದು ದರ ದರನೆ ಎಳೆದುಕೊಂಡು ಹೋಗಿ ಎರಡು ಬಾರಿಸಿ ರೂಮಲ್ಲಿ ಕೂಡಿ ಹಾಕ್ತಾರೆ. ಇದೇ ತಾಯಂದಿರು ಮಕ್ಕಳು ಮೊಬೈಲ್ ಹಿಡಿದು ಸೋಫಾದಲ್ಲಿ ಕುಳಿತಿದ್ದರೆ ಏನೂ ಹೇಳುವುದಿಲ್ಲ. ಇದು ತಪ್ಪು.



ಮಣ್ಣಿನ ಮಕ್ಕಳಾದಷ್ಟೂ ಅವರಲ್ಲಿ ಕ್ರಿಯಾಶೀಲತೆ ಬೆಳೆಯುತ್ತದೆ. ಮೊಬೈಲ್ ಮಕ್ಕಳಾದಷ್ಟೂ ವ್ಯಕ್ತಿತ್ವ ಕುಬ್ಜಗೊಳ್ಳುತ್ತದೆ.

ಸಿಟಿಯ ಮೊಬೈಲ್ ಮಕ್ಕಳಿಗೆ ಹಾಲು ಎಲ್ಲಿಂದ ಬರುತ್ತೆ ಅಂತ ಕೇಳಿದರೆ ಮಿಲ್ಕ್ ಡೈರಿಯಿಂದ ಎನ್ನುತ್ತಾರೆ. ಹಳ್ಳಿ ಮಕ್ಕಳಿಗೆ ಕೇಳಿದರೆ ಎಮ್ಮೆ, ಹಸು, ಕುರಿ ಎನ್ನುತ್ತಾರೆ. ಬೆಂಗಳೂರಿನಲ್ಲಿ ನಡೆಯುವ ಎಲ್ಲಾ ಓಿಡಿಣ ಗಳಲ್ಲೇ ಇರಬಹುದು, ಎಲ್ಲಾ ಕಾಂಪಿಟೀಟೀವ್ ಪರೀಕ್ಷೆಗಳಲ್ಲೂ ಹಳ್ಳಿಗಳಿಂದ ಬರುವ ಮಣ್ಣಿನ ಮಕ್ಕಳೇ ಗೋಲ್ಡ್ ಮೆಡಲ್ ಪಡೆಯುತ್ತಿದ್ದಾರೆ. ಸಿಟಿಗಳ ಮೊಬೈಲ್ ಮಕ್ಕಳು ವಿಡಿಯೊ ಗೇಮ್ ಗಳ ಚಟ, ಡ್ರಗ್ಸ್ ಚಟ ಹತ್ತಿಸಿಕೊಳ್ಳುತ್ತಿದ್ದಾರೆ.

ಮೊಬೈಲ್ ಚಟ ಮಕ್ಕಳಲ್ಲಿ ಐಷಾರಾಮಿ ವಸ್ತುಗಳ ಬಗ್ಗೆ ಮೋಹ ಹುಟ್ಟಿಸುತ್ತದೆ. ಮೊಬೈಲ್ ಮಕ್ಕಳ ಕೈಗೆ ಹೋದ ಕೂಡಲೇ ಮಕ್ಕಳು ನೋಡುವ ಎಲ್ಲಾ ವಿಡಿಯೊಗಳ ಹಿಂದಿಂದೆ ಮಕ್ಕಳ ಶೂ, ಬಟ್ಟೆ, ವಾಚು, ವಿಡಿಯೊ ಗೇಮ್ ಗಳ ಜಾಹಿರಾತುಗಳ ಪ್ರವಾಹವೇ ಬರುತ್ತದೆ. ಹೀಗಾಗಿ ಮಕ್ಕಳಿಗೆ ಬ್ರಾಂಡೆಡ್ ಕಂಪನಿಗಳ ಹೆಸರು ಗೊತ್ತಿರುತ್ತವೆ. ರಾಜ್ಯದ ಮುಖ್ಯಮಂತ್ರಿ ಯಾರು, ದೇಶದ ಪ್ರಧಾನ ಮಂತ್ರಿ ಯಾರು ಅಂತ ಕೇಳಿದರೆ ಗೊತ್ತಿರುವುದಿಲ್ಲ. ಇವೆಲ್ಲಾ ಮಣ್ಣಿನ ಮಕ್ಕಳಿಗೂ, ಮೊಬೈಲ್ ಮಕ್ಕಳಿಗೂ ಇರುವ ವ್ಯತ್ಯಾಸ ಎಂದು ವಿವರಿಸಿದರು.

ಬಾಲ ಭವನದ ಅಧ್ಯಕ್ಷರಿಗೆ ಮತ್ತು ಸಿಬ್ಬಂದಿಗೆ ನಾನು ಅಭಿನಂದಿಸುತ್ತೇನೆ. ಆಟಗಳು ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ಮಕ್ಕಳನ್ನು ಹೆಚ್ಚೆಚ್ಚು ಕ್ರಿಯಾಶೀಲರನ್ನಾಗಿ ಮಾಡುವಲ್ಲಿ ಬಾಲ ಭವನ ಹೆಚ್ಚೆಚ್ಚು ಕೆಲಸ ಮಾಡುತ್ತಿದೆ.

ಆಟ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ಮಕ್ಕಳು ಕೂಡಿ ಬಾಳುವುದನ್ನು, ಜೊತೆಯಲ್ಲಿ ಬೆಳೆಯುವುದನ್ನು ಕಲಿತು ಹೆಚ್ಚೆಚ್ಚು ಸಮಾಜಮುಖಿ ಆಗುತ್ತಾರೆ. ಇಂತಹ ಚಟುವಟಿಕೆಗಳು ಹೆಚ್ಚೆಚ್ಚು ನಡೆಯಲಿ ಎಂದು ಆಶಿಸುತ್ತೇನೆ ಎಂದರು.

ರಾಜ್ಯ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್, ಬಾಲ ಭವನದ ಅಧ್ಯಕ್ಷರಾದ ಬಿ.ಆರ್.ನಾಯ್ಡು, ತೆಂಗಿನ ನಾರು ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ನಟರಾಜ್ ಸೇರಿ ಹಲವು ಪ್ರಮುಖರು ವೇದಿಕೆಯಲ್ಲಿದ್ದರು.

ಅಂಗನವಾಡಿ ಮಕ್ಕಳಿಗೆ ಸಮವಸ್ತ್ರ ವಿತರಣೆ: ಇದೇ ಸಂದರ್ಭದಲ್ಲಿ ಮಂಗಳೂರಿನ ಬಿಜೈ ಕಾಪಿಕ್ಕಾಡು ಅಂಗನವಾಡಿಯ ಮಕ್ಕಳಿಗೆ ಕೆ.ವಿ.ಪ್ರಭಾಕರ್ ಅವರು ಸಮವಸ್ತ್ರ ವಿತರಿಸಿದರು. ಕಳೆದ ವರ್ಷ ಇದೇ ಅಂಗನವಾಡಿಗೆ ಉಚಿತವಾಗಿ ವಾಟರ್ ಫಿಲ್ಟರ್ ನೀಡಿದ್ದನ್ನು ಸ್ಮರಿಸಬಹುದು.

ಪತ್ರಕರ್ತರ ಸಂಘದ ಗೌರವ ಸ್ವೀಕಾರ: ಬಾಲ ಭವನ ಕಾರ್ಯಕ್ರಮಕ್ಕೂ ಮುನ್ನ ದ.ಕ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಕೆ.ವಿ.ಪ್ರಭಾಕರ್ ಅವರಿಗೆ ಪ್ರೆಸ್ ಕ್ಲಬ್ ನಲ್ಲಿ ಗೌರವಿಸಿ, ಸನ್ಮಾನಿಸಿತು.

# ಚಾ.ನಗರ ನಗರಸಭೆಯಲ್ಲಿ 1.84 ಕೋಟಿ ರೂ ಉಳಿತಾಯ ಬಜೆಟ್ ಮಂಡನೆ

**ಚಾಮರಾಜನಗರ :** ಇಲ್ಲಿನ ನಗರಸಭೆಯಲ್ಲಿ 2025–26ನೇ ಸಾಲಿನ ಆಯವ್ಯಯ ಸಭೆಯಲ್ಲಿ ನಗರಸಭಾ ಅಧ್ಯಕ್ಷ ಸುರೇಶ್ ಅವರು 1.84 ಕೋಟಿ ಉಳಿತಾಯ ಬಜೆಟ್ ಮಂಡಿಸಿದರು.

ಚಾಮರಾಜನಗರದ ನಗರಸಭಾ ಕಚೇರಿ ಸಭಾಂಗಣದಲ್ಲಿ ಬಜೆಟ್ ಮಂಡಿಸಿದ ಅವರು, ಪ್ರಾರಂಭಿಕ ಶಿಲ್ಕು 1553.45 ಲಕ್ಷ, ಜಮೆಗಳು 4,388.95 ಲಕ್ಷ ಸೇರಿ ಒಟ್ಟು ಮೊತ್ತ 5,942.40 ಲಕ್ಷ ರೂ., 5758.38 ಲಕ್ಷ ರೂ.ಗಳ ಖರ್ಚುಗಳ ಆಯವ್ಯಯವನ್ನು ಮಂಡಿಸಿದರು.

ನಗರಸಭೆಯ ಸ್ವಂತ ಮೂಲದಿಂದ 1,515.60 ಲಕ್ಷ ರೂ. ಹಾಗೂ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಅನುದಾನಗಳಿಂದ 2,873.35 ಲಕ್ಷ ರೂ.ಗಳು ಸೇರಿ ಒಟ್ಟು 4,388.95 ಲಕ್ಷ ರೂ.ಗಳ ಆದಾಯ ನಿರೀಕ್ಷಿಸಲಾಗಿದ್ದು ಇದರಲ್ಲಿ 5758.38 ಲಕ್ಷ ರೂ.ಗಳನ್ನು ವೆಚ್ಚ ಮಾಡಲಾಗಿದೆ ಎಂದರು. ಚಾಮರಾಜನಗರದ ಉತ್ತವಳ್ಳಿಯ ಮೆಡಿಕಲ್ ಕಾಲೇಜು ಹತ್ತಿರ ಎಸ್‌ಎಫ್ಸಿ ವಿಶೇಷ ಅನುದಾನದಿಂದ ವಿದ್ಯುತ್ ಚಿತಾಗಾರ ನಿರ್ಮಾಣ ಮಾಡಲು ಟೆಂಡರ್ ಆಹ್ವಾನ ಮಾಡಲಾಗಿದ್ದು 2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು 4 ಕೋಟಿಗಳನ್ನು ಕಾಯ್ದಿರಿಸಲಾಗಿದೆ. ಚಾಮರಾಜನಗರ ನಗರಸಭಾ ವ್ಯಾಪ್ತಿಯ ಸಂತೆಮರಹಳ್ಳಿ ಸರ್ಕಲ್, ಪಚ್ಚಪ್ಪ ಸರ್ಕಲ್ಗಳಲ್ಲಿ ಫ್ಲೆಕ್ಸ್ ಮತ್ತು ಬ್ಯಾನರ್ ಅಳವಡಿಸುವುದನ್ನು ತಡೆಯಲು ಎಲ್‌ಇಡಿ ಡಿಸ್ಪ್ಲೇ ಅಳವಡಿಸಲು 20 ಲಕ್ಷ ರೂಗಳನ್ನು ಕಾಯ್ದಿರಿಸಲಾಗಿದೆ. ಐಡಿಎಸ್‌ಎಂಟಿ ಯೋಜನೆಯಡಿ ಪ್ರಸ್ತುತ ಇರುವ ತರಕಾರಿ ಮಾರುಕಟ್ಟೆಯನ್ನು ತೆರವು ಮಾಡಿ ಆ ಜಾಗದಲ್ಲಿ 180 ಲಕ್ಷ ವೆಚ್ಚದಲ್ಲಿ ಒಳಾಂಗಣದಲ್ಲಿ ಆಧುನಿಕ ತರಕಾರಿ ಮಾರುಕಟ್ಟೆ ನಿರ್ಮಾಣಕ್ಕೆ ಕ್ರಮವಹಿಸಲಾಗಿದೆ. ಎಂದರು



ಆಹಾರ ಸುರಕ್ಷತಾ ವಲಯಗಳನ್ನು ಸ್ಥಾಪನೆ ಮಾಡಲು 25 ಲಕ್ಷ ಕಾಯ್ದಿರಿಸಲಾಗಿದೆ. ಕಾರ್ಯನಿರತ ಪತ್ರಕರ್ತರ ವೈದ್ಯಕೀಯ ವೆಚ್ಚಕ್ಕಾಗಿ ಸಹಾಯಧನ ರೂಪದಲ್ಲಿ ಮರುಪಾವತಿಸಲು 6.50 ಲಕ್ಷ ಕಾಯ್ದಿರಿಸಲಾಗಿದೆ. ನಗರಸಭಾ ವ್ಯಾಪ್ತಿಯಲ್ಲಿ ಅಮೃತ್ 2.0 ಯೋಜನೆಯಡಿ 108 ಕೋಟಿ ವೆಚ್ಚದಲ್ಲಿ 16 ಸಾವಿರ ಮನೆಗಳಿಗೆ ಕುಡಿಯುವ ನೀರು ಪೂರೈಸಲು ಕ್ರಮವಹಿಸಲಾಗಿದೆ. ಇದೇ ಯೋಜನೆಯಡಿ 80 ಲಕ್ಷ ವೆಚ್ಚದಲ್ಲಿ ಚಾಮರಾಜೇಶ್ವರ ಪಾರ್ಕ್, ಅಂಬೇಡ್ಕರ್ ಉದ್ಯಾನವನ ಅಭಿವೃದ್ಧಿಪಡಿಸಲಾಗುವುದು. ಅಲ್ಲದೇ 320 ಲಕ್ಷ ವೆಚ್ಚದಲ್ಲಿ ತಿಬ್ಬಳ್ಳಿಕಟ್ಟೆ, ಸುಬೇದಾರ್ ಕಟ್ಟೆ, ದೊಡ್ಡರಸನಕೊಳ ಅಭಿವೃದ್ಧಿ ಮಾಡಲು ಯೋಜಿಸಲಾಗಿದೆ. ಎಸ್ಸಿ, ಎಸ್ಟಿ ಕಲ್ಯಾಣಕ್ಕಾಗಿ ಎಸ್‌ಎಫ್ಸಿ ಮುಕ್ತ ನಿಧಿ ಅನುದಾನದಿಂದ ಎಸ್ಟಿ ಕಲ್ಯಾಣಕ್ಕಾಗಿ ಎಸ್‌ಎಫ್ಸಿ ಮುಕ್ತ ನಿಧಿ ಅನುದಾನದಿಂದ 44 ಲಕ್ಷ ಮತ್ತು ನಗರಸಭಾ ನಿಧಿಯಿಂದ 31 ಲಕ್ಷ ಸೇರಿ ಒಟ್ಟು 75 ಲಕ್ಷಗಳನ್ನು ಕಾಯ್ದಿರಿಸಲಾಗಿದೆ.ಈ ಸಂದರ್ಭದಲ್ಲಿ ನಗರಸಭಾ ಉಪಾಧ್ಯಕ್ಷೆ ಮಮತಾ, ಪೌರಾಯುಕ್ತ ರಾಮದಾಸ್ ಸೇರಿದಂತೆ ಸದಸ್ಯರು, ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

# ನಾಗತಿಹಳ್ಳಿಯ ಸಾಂಸ್ಕೃತಿಕ ಹಬ್ಬ ಶತಮಾನದ ಶಾಲಾ ಸಂಭ್ರಮ

ಎ. ನಾಗತಿಹಳ್ಳಿ ನಾಗಮಂಗಲ ತಾಲೂಕು, ಮಂಡ್ಯ ಜಿಲ್ಲೆಯ ಗಡಿ ಭಾಗದಲ್ಲಿದ್ದು ಮಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಗ್ರಾಮವಿದೆ. ಈ ಗ್ರಾಮದಲ್ಲಿ 1925ರಲ್ಲಿ ನಾಗತಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಪ್ರಾರಂಭವಾಗಿ ಇಲ್ಲಿಗೆ ನೂರು ವರ್ಷಗಳ ಪೂರೈಸಿ ಶತಮಾನದ ಶಾಲೆ ಎಂಬ ಹೆಸರಿನಲ್ಲಿ ಸಂಭ್ರಮದ ಗುರುತಾಗಿದೆ. ಈ ಶಾಲೆಯಲ್ಲಿ ಓದಿದ ವಿದ್ಯಾರ್ಥಿಗಳು ಉತ್ತಮ ಕೆಲಸದಲ್ಲಿದ್ದು ಶಿಕ್ಷಕರಾಗಿ ಸೇವಿಸಲ್ಲಿಸಿದ್ದು ಇದೇ ಗ್ರಾಮದವರು ದೊಡ್ಡ ದೊಡ್ಡ ಹುದ್ದೆಗಳಲ್ಲಿ ಸೇವೆ ಸಲ್ಲಿಸಿ, ರಾಜ್ಯ ರಾಷ್ಟ್ರಮಟ್ಟದವರಿಗೂ ಹೆಸರುಗಳಿಸಿದ್ದಾರೆ ಅಂತಹ ಗ್ರಾಮ ಶಾಲೆಯ ಸಂಸ್ಕೃತಿ ಉಳಿಯುವಂತೆ ಮಾಡಿದೆ. ಈ ಶಾಲೆಗೆ ನೂರು ವರ್ಷ ತುಂಬುತ್ತಿರುವ ಸಂದರ್ಭದಲ್ಲಿ ಸುಮಾರು 20 ವರ್ಷಗಳಿಂದಲೂ ಆಚರಿಸಿಕೊಂಡು ಬರುತ್ತಿರುವ ನಾಗತಿಹಳ್ಳಿ ಸಂಸ್ಕೃತಿ ಹಬ್ಬ ಕ್ರಿಯಾಶೀಲ ಚಟುವಟಿಕೆಗಳು 21ನೇ ಸಂಸ್ಕೃತಿ ಹಬ್ಬದ ಸಂದರ್ಭದಲ್ಲಿ ಮಾರ್ಚ್ 26 ರಿಂದ 30ರವರೆಗೆ ವಿವಿಧ ಕಾರ್ಯಕ್ರಮಗಳು ನಡೆಯಲಿದೆ. ಶಾಲೆಯ ಶತಮಾನ ಸಂಭ್ರಮ ಆಚರಣೆ ಮಾಡಿಕೊಳ್ಳುತ್ತಿರುವ ಸಂದರ್ಭದಲ್ಲಿ ನಾಡಿನ ಹಿರಿಯ ಸಾಹಿತಿಗಳು ಸಚಿವರು ಕಲಾವಿದರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

# ತಮ್ಮಡಹಳ್ಳಿಯಲ್ಲಿ ಜಾತ್ರೆ ಸ್ಥಗಿತ : ಮೂರು ದಿನದಲ್ಲಿ ಮೂರು ಹೆಣ ಬೀಳುತ್ತೆ, ವಿಡಿಯೋ ವೈರಲ್

**ಚಾಮರಾಜನಗರ:** ತಾಲೂಕಿನ ತಮ್ಮಡಹಳ್ಳಿ ಗ್ರಾಮದಲ್ಲಿ ಶ್ರೀ ೀಗುಜ್ಜಮ್ಮತಾಯಿ ಕೊಂಡ ಹಾಗೂ ರಥೋತ್ಸವ ಸ್ಥಗಿತಗೊಂಡ ಹಿನ್ನೆಲೆಯಲ್ಲಿ ಗ್ರಾಮದ ಮಹಿಳೆ ಮೇಲೆ ದೇವರು ಬಂದು ಇದಕ್ಕೆ ಕಾರಣರಾದವರು ಮೂರು ದಿನದಲ್ಲಿ ಮೂರು ಹೆಣವಾಗಲಿದ್ದಾರೆ ಎಂದು ಹೇಳಿರುವ ವೀಡಿಯೋ ಎಲ್ಲೆಡೆ ವೈರಲ್ ಆಗುತ್ತಿದೆ. ಚಾಮರಾಜನಗರ ತಾಲ್ಲೂಕಿನ ತಮ್ಮಡಹಳ್ಳಿ ಗ್ರಾಮದಲ್ಲಿ ಮಾರ್ಚ್ 24 ರಂದು ಸೋಮವಾರ ನಡೆಯಬೇಕಿದ್ದ ಶ್ರೀ ಗುಜ್ಜಮ್ಮತಾಯಿ ಕೊಂಡ ಹಾಗೂ ರಥೋತ್ಸವವು ಬಂಡಿ ಓಡಿಸುವ ವಿಚಾರವಾಗಿ ನಡೆದ ಗಲಾಟೆಯಲ್ಲಿ ಸ್ಥಗಿತಗೊಂಡಿತ್ತು. ಈ ಹಿನ್ನೆಲೆಯಲ್ಲಿ ಅದ್ದೂರಿಯಾಗಿ ನಡೆಯಬೇಕಿದ್ದ ಜಾತ್ರೆಯು ನಿಂತು ಹೋಯಿತು. ಪರಿಣಾಮ ದೇವಸ್ಥಾನದ ಮುಂಭಾಗ ಕೊಂಡೋತ್ಸವ ನಡೆಸಲು ಇಟ್ಟಿದ್ದ ಸೌದೆ ಹಾಗೆ ಬಿದ್ದಿದ್ದು, ರಥೋತ್ಸವವು ಸಿದ್ಧವಾಗಿ ನಿಂತಿದೆ. ಇದರಿಂದಾಗಿ ಕೊಂಡ ಹಾಯಲು ಮೂರು ದಿನದಿಂದ ಉಪವಾಸ ಇದ್ದ ಮಹಿಳೆ ಮೇಲೆ ಮಂಗಳವಾರ ರಾತ್ರಿ ದೇವರು ಬಂದು ನಾನೆ ಗುಜ್ಜಮ್ಮತಾಯಿ ನನ್ನ ಕೊಂಡ, ನನ್ನ ಜಾತ್ರೆ, ನನ್ನ ರಥೋತ್ಸವ ಎಲ್ಲವನ್ನು ನಿಲ್ಲಿಸಿದ್ದಾರೆ. ನನಗೆ ಮೋಸ ಮಾಡಿದ್ದಾರೆ ಎಂದು ಹೇಳಿಕೊಂಡು ಓಡಾಡುತ್ತಿರುವುದನ್ನು ಗ್ರಾಮಸ್ಥರು ತಮ್ಮ ಮೊಬೈಲ್ನಲ್ಲಿ ಸೆರೆ ಹಿಡಿದಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾರೆ. ಅಲ್ಲದೇ ಅದರಲ್ಲಿ ಈ ಜಾತ್ರೆ ನಿಲ್ಲಿಸಿದವರ ಮನೆ ಮುರಿಯುತ್ತೀನಿ. ಮುಂದಿನ ಮೂರು ದಿನಗಳಲ್ಲಿ ಜಾತ್ರೆ ನಿಲ್ಲಲು ಕಾರಣರಾದ ಮೂವರ ಹೆಣ ಬೀಳುತ್ತದೆ. ಎಂದು ಶಾಪ ಹಾಕಿದ್ದಾರೆ. ಈ ವೇಳೆ ಗ್ರಾಮಾಂತರ ಪೊಲೀಸರ ಸಮ್ಮುಖದಲ್ಲೇ ಇದೆಲ್ಲಾ ನಡೆದಿದೆ.

# ಗಮಕ ಕಲೆಯ ಬಗ್ಗೆ ಜಾಗೃತಿ ಅಗತ್ಯ

**ಚಾಮರಾಜನಗರ:** ಕರ್ನಾಟಕದ ವಿಶಿಷ್ಟ ಕಲೆ ಗಮಕ ಕಲೆ. ಗಮಕ ವಾಚನ ಮತ್ತು ವ್ಯಾಖ್ಯಾನದಿಂದ ಹಳೆಯ ಕನ್ನಡ ಸಾಹಿತ್ಯವನ್ನು ಅರಿತು ಹಳೆಗನ್ನಡ ಸಾಹಿತ್ಯವನ್ನು ಸುಲಭಗೊಳಿಸುವ ಗಮಕ ಕಲೆ, ಮನಸ್ಸಿಗೆ ಆನಂದವನ್ನು ಉಂಟು ಮಾಡುತ್ತದೆ.ಗಮಕ ಕಲೆಯ ಬಗ್ಗೆ ಮನೆ ಮನೆಗೆ ಗಮಕ ಕಾರ್ಯಕ್ರಮದ ಮೂಲಕ ಜಾಗೃತಿಯನ್ನು ಉಂಟು ಮಾಡುವುದು ಹಾಗು ಶಾಲಾ ಕಾಲೇಜು ಮಕ್ಕಳಿಗೆ ಹಾಗೂ ಆಸಕ್ತರಿಗೆ ಗಮಕಲೆಯನ್ನು ಕಲಿಯಲು ವ್ಯವಸ್ಥೆ ಮಾಡಬೇಕು ಎಂದು ಕರ್ನಾಟಕ ಗಮಕ ಕಲಾಪರಿಷತ್ತಿನ ಜಿಲ್ಲಾಧ್ಯಕ್ಷರಾದ ಸುರೇಶ್ ಎನ್ ಋಗ್ವೇದಿ ತಿಳಿಸಿದರು. ಅವರು ಕರ್ನಾಟಕ ಗಮಕ ಕಲಾ ಪರಿಷತ್ತು ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಜರುಗಿದ ಕನಕ ಕಲೆ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತ ಚಾಮರಾಜನಗರ ಜಿಲ್ಲಾ ಘಟಕ ಅಸ್ತಿತ್ವಕ್ಕೆ ಬಂದಿದ್ದು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲೂ ಗಮಕ ಕಲಾ ಪರಿಷತ್ತಿನ ರಚನೆಯಾಗಬೇಕಾಗಿದೆ. ಆಸಕ್ತರು ಸ್ವಯಂ ಪ್ರೇರಣೆಯಿಂದ ಗಮಕ ಕಲೆಯ ಪ್ರಚಾರ ಮತ್ತು ಸೇವೆಯನ್ನು ಸಲ್ಲಿಸಲು ಮುಂದಾಗಬೇಕು. ಹಳೆಗನ್ನಡದ ಸಾಹಿತ್ಯವನ್ನು ಸರಳ ರೂಪದಲ್ಲಿ ರಾಗ ಮತ್ತು ಶೃತಿ ಬದ್ಧವಾಗಿ ಹಾಡುವ ಮೂಲಕ ಮತ್ತು ಅದರ ಅರ್ಥವನ್ನು ವಿವರಿಸುವ ವಿಶಿಷ್ಟವಾದ ಕಲೆ ಗಮಕ ಕಲೆಯಾಗಿದೆ. ಚಾಮರಾಜನಗರ ಜಿಲ್ಲೆ ಗಮಕ ಕಲೆಗೆ ವಿಶಿಷ್ಟ ಸ್ಥಾನವನ್ನು ಪಡೆದಿತ್ತು. ಹಲವಾರು ಶ್ರೇಷ್ಠ ಗಮಕಿಗಳೂ ಸೇವೆ ಸಲ್ಲಿಸಿದ್ದಾರೆ. ಗಮಕ ಕಲೆಯನ್ನು ಬೆಳೆಸಲು ನಾವೆಲ್ಲರೂ ಬದ್ದರಾಗೋಣ . ಶಾಲಾ ಕಾಲೇಜು ಹಂತದಲ್ಲಿ ವಿವಿಧ ಕಾರ್ಯಕ್ರಮ ಹಾಗು ಗಮಕ ಪರೀಕ್ಷೆ ನಡೆಸುವ ಯೋಜನೆಗಳನ್ನು ಕಾರ್ಯಗತ ಮಾಡುವ ಮೂಲಕ ಗಮಕಲೆಯ ಬಗ್ಗೆ ಅರಿವು ಮೂಡಿಸಬಹುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಹಿರಿಯರಾದ ವಿಜಯಲಕ್ಷ್ಮಿ ಮಾತನಾಡಿ ಮನೆ ಮನೆಗೆ ಗಮಕ ಕಾರ್ಯಕ್ರಮವನ್ನು ತಿಂಗಳಿಗೊಮ್ಮೆ ರೂಪಿಸುವ ಮೂಲಕ ಉತ್ಸಾಹಿಗಳ ಆಸಕ್ತಿಯನ್ನು ಹೆಚ್ಚಿಸೋಣ .ಗಮಕ ಕಲೆಯಲ್ಲಿ ಆಸಕ್ತಿ ಇರುವವರನ್ನು ಪರಿಷತ್ತಿಗೆ ಸೇರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವೀರಶೆಟ್ಟಿ, ವಾಸಂತಿ ,ಪದ್ಮ ಪುರುಷೋತ್ತಮ್ ಸರಸ್ವತಿ ,ಬಿಕೆ ಆರಾಧ್ಯ, ಲಕ್ಷ್ಮಿ ನರಸಿಂಹ ಇದ್ದರು.



# ಎಷ್ಟೇ ಸಿರಿವಂತರಾದರೂ ವಿದ್ಯೆ ಬಹಳ ಮುಖ್ಯವಾಗಿದೆ



**ಮಂಡ್ಯ :** ನಗರದ ಜ್ಞಾನಸಾಗರ ಕ್ಯಾಂಪಸ್ ಆವರಣದಲ್ಲಿ ಎಸ್ ಬಿ ಎಜುಕೇಶನ್ ಟ್ರಸ್ಟ್ ಮಾಂಡವ ಶಿಕ್ಷಣ ಮಹಾವಿದ್ಯಾಲಯ ವತಿಯಿಂದ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳಿಗೆ ಸ್ವಾಗತ ಹಾಗೂ ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನಾ ಸಮಾರಂಭವನ್ನು ಪ್ರೊ ಎಂ ಕೃಷ್ಣೇಗೌಡ ಉದ್ಘಾಟಿಸಿದರು.

ನಂತರ ಮಾತನಾಡಿ ಇತ್ತೀಚಿನ ದಿನಗಳಲ್ಲಿ ವಿದ್ಯೆಮುಂದೆ ಎಲ್ಲವೂ ನಗಾಣ್ಯವಾಗಿದೆ ಎಷ್ಟೇ ಸಿರಿವಂತರಾದರೂ ವಿದ್ಯೆ ಬಹಳ ಮುಖ್ಯವಾಗಿದೆ ವಿದ್ಯೆಯಿಂದ ಎಲ್ಲವನ್ನು ಪಡೆಯಬಹುದು ಆದರೆ ದುಡ್ಡಿನಿಂದಲ್ಲ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ವಿದ್ಯಾರ್ಥಿ ದೆಸೆಯಲ್ಲಿ ಶಿಸ್ತನ್ನು ಮೈಗೂಡಿಸಿಕೊಳ್ಳಬೇಕು ಮೊಬೈಲ್ ಗಳನ್ನು ಅನಾವಶ್ಯಕವಾಗಿ ಬಳಸಿ ಸಮಯ ವ್ಯರ್ಥ ಮಾಡದೆ ಓದಿನ ಕಡೆ ಹೆಚ್ಚು ಆಸಕ್ತಿವಹಿಸಿ ಎಂಬ ಸಲಹೆ ನೀಡಿದರು. ಪ್ರೊ.ಶಿವಲಿಂಗಯ್ಯ ಅವರು ಕೆನಡಾದಿಂದ ಒಂದು ಕಂಪ್ಯೂಟರ್ ಖರೀದಿ ಮಾಡಿ ಮೈಸೂರು ಪ್ರಾಂತ್ಯಕ್ಕೆ ಮೊದಲ ಕಂಪ್ಯೂಟರ್ ಪರಿಚಯಿಸಿದರು ಇಂದು ಕಂಪ್ಯೂಟರ್ ಯುಗವಾಗಿ ಮಾರ್ಪಡಾಗಿದೆ ಆಗಿದೆ

ಹಿಂದೆ ಪ್ಲಾಸ್ಟಿಕ್ ಬಳಸಿದರು ಪ್ರಮಾಣ ಕಡಿಮೆಯಿತ್ತು ಇಂದು ಹಳ್ಳಿ ನಗರ ಸೇರಿದಂತೆ ಎಲ್ಲವೂ ಪ್ಲಾಸ್ಟಿಕ್ ಬಳಕೆ ಅತಿಯಾಗಿದೆ ಇದು ನಮ್ಮ ಜೀವನಕ್ಕೆ ಕಂಟಕ ಪ್ರಾಯವಾಗಿದೆ ಎಂದರು. ಎಸ್ ಬಿ ಎಜುಕೇಶನ್ ಟ್ರಸ್ಟ್ ನ ಅಧ್ಯಕ್ಷ ಪ್ರೊಫೆಸರ್ ಬಿ ಶಿವಲಿಂಗಯ್ಯ ಕಾರ್ಯದರ್ಶಿ ಮೀರಾ ಶಿವಲಿಂಗಯ್ಯ ಮಾಂಡವ್ಯ ಪ್ರಥಮ ದರ್ಜೆ ಕಾಲೇಜು, ಪ್ರಾಂಶುಪಾಲ ಭವಾನಿ ಶಂಕರ್ ಮಾಂಡವ್ಯ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಪಿ. ಸುಮಾರಾಣಿ ಸಹಪ್ರಾಧ್ಯಪಕರಾದ ನಾಗರತ್ನಮ್ಮ ಸೇರಿದಂತೆ ಹಲವರು ಭಾಗವಹಿಸಿದ್ದರು.

### ಕರ್ನಾಟಕ ಭೀಮಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಮಂಜುನಾಥ್ ಸಲಹೆ

# ಮಾನವೀಯ ಮೌಲ್ಯ ಮರೆಯಬೇಡಿ

**ಮೈಸೂರು:** ಗಾಂಧಿನಗರದ ಯುವ ಮುಖಂಡರು ಹಾಗೂ ಕರ್ನಾಟಕ ಭೀಮಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿಗಳಾದ ಎಂ ಮಂಜುನಾಥ್ ಅವರ ಹುಟ್ಟುಹಬ್ಬವನ್ನು ಮೈಸೂರಿನ ಗಾಂಧಿನಗರದ ಅಭಿಮಾನಿಗಳು ಹಾಗೂ ಸಮುದಾಯದ ಸ್ವಾಮೀಜಿಗಳಾದ ಜ್ಞಾನಪ್ರಕಾಶ್ ಸ್ವಾಮೀಜಿಗಳ ಆಶೀರ್ವಾದದೊಂದಿಗೆ ಕುಟುಂಬದ ಸದಸ್ಯರ ಜೊತೆಗೆ ಸರಳವಾಗಿ ಆಚರಿಸಿಕೊಳ್ಳುವ ಮೂಲಕ ಕುಟುಂಬಸ್ಥರು ಮತ್ತು ಅಭಿಮಾನಿಗಳೊಂದಿಗೆ ಗಾಂಧಿನಗರದ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ಅವರು ನಂತರ ಮಾಧ್ಯಮಗಳ ಜೊತೆ ಮಾತನಾಡಿ ಸಂಘಟನೆಗಳ ಹೆಸರಿನಲ್ಲಿ ಇತ್ತೀಚಿನ ದಿನಗಳಲ್ಲಿ ಮಾನವಿಯ ಮೌಲ್ಯಗಳನ್ನೇ ಜನಸಾಮಾನ್ಯರು ಕಳೆದುಕೊಳ್ಳುತ್ತಿದ್ದಾರೆ ಯಾವುದೇ ಸಂಘಟನೆಗಳಿರಲಿ ಸಂಘಟನೆಗಳು ಸಮಾಜದ ಏಳಿಗೆಗಾಗಿ ಇರಬೇಕೆ ಹೊರತು ತಮ್ಮ ತಮ್ಮ ಪ್ರತಿಷ್ಠೆಗೆ ಅಥವಾ ಸಮುದಾಯದ ಚೌಕಟ್ಟಿಗೆ ಮಾತ್ರ ಕೆಲಸ ಮಾಡದೆ ನಿಮ್ಮಷ್ಟಕ್ಕೆ ನೀವೇ ಚೌಕಟ್ಟನ್ನು ಹಾಕಿಕೊಂಡು ಸಂಘಟನೆಗಳನ್ನು ನಡೆಸಬೇಡಿ ಉದಾಹರಣೆಗೆ ಕನ್ನಡಪರ ಸಂಘಟನೆಗಳು ಬರಿ ಕನ್ನಡ ಹೋರಾಟಕ್ಕೆ ಮಾತ್ರ ಸೀಮಿತವಲ್ಲ ಅಥವಾ ಯಾವುದೋ ಜಾತಿಯ ಸಮುದಾಯದ ಸಂಘಟನೆಗಳು ಬರಿ ಅವರವರ ಜಾತಿಯ ಏಳಿಗೆಗೆ ಮಾತ್ರ ಕೆಲಸ ಮಾಡುವುದಿಲ್ಲ ರಾಜ್ಯದಲ್ಲಿರುವ ಪ್ರತಿಯೊಂದು ಸಂಘಟನೆಗಳು ಕೂಡ ತಮ್ಮ ಪ್ರತಿಷ್ಠೆಗೆ ಕೆಲಸ ಮಾಡದೆ ಮಾನವೀಯ ಮೌಲ್ಯಗಳನ್ನು ಇಟ್ಟುಕೊಂಡು ಪ್ರತಿಯೊಬ್ಬ ವ್ಯಕ್ತಿಗೂ ತಮ್ಮ ಕೈಲಾಗುವ ಸಹಾಯ ಮಾಡುವ ಮೂಲಕ ಸಮ ಸಮಾಜದ ನಿರ್ಮಾಣ ಮಾಡಬೇಕು ಆಗ ಮಾತ್ರ ಬುದ್ಧ ಬಸವಣ್ಣ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳು ಮತ್ತು ಅವರು ನಮಗೆ ಕೊಟ್ಟಂತಹ ಮಾನವೀಯ ಮೌಲ್ಯಗಳು ಈ ಸಮಾಜದಲ್ಲಿ ಉಳಿಯಲು ಸಾಧ್ಯ ಎಂದು ಮಾಧ್ಯಮಗಳ ಜೊತೆ ಮಾತನಾಡಿದರು ಇದೇ ವೇಳೆ ಕುಟುಂಬಸ್ಥರು ಅಭಿಮಾನಿಗಳಿಂದ ಅವರಿಗೆ ಶುಭಾಶಯದ ಮಹಾಪೂರವೇ ಹರಿದು ಬಂದಿದೆ

ಮೈಸೂರು ಮಹಾನಗರ ಪಾಲಿಕೆ ಗುತ್ತಿಗೆದಾರರ ಸಂಘದ ಅಧ್ಯಕ್ಷರಾದ ಉದಯ್ ಕುಮಾರ್ ಸಿ ಮುಖಂಡರಾದ ಹೇಮಚಂದ್ರ, ಮಣಿ ಜ್ಯೋತಿ ಆಕಾಶ್ ಇನ್ನು ಮುಂತಾದವರು ಭಾಗವಹಿಸಿದ್ದರು .



# ಸಂಜೆ ಟಿಪ್ಸ್

## ಏರ್‌ಟೆಲ್ ಕರ್ನಾಟಕಾದ್ಯಂತ IPTV ಸೇವೆಗಳ ಆರಂಭ

ಭಾರತದ ಮಂಚೂಣಿ ದೂರಸಂಪರ್ಕಗಳ ಸೇವಾ ಪೂರೈಕೆದಾರರಲ್ಲಿ ಒಂದಾದ ಭಾರತಿ ಏರ್‌ಟೆಲ್ ತನ್ನ ಗ್ರಾಹಕರಿಗೆ ಅತ್ಯುತ್ತಮ ಅತಿದೊಡ್ಡ ಸ್ಕ್ರೀನ್ ಅನುಭವವನ್ನು ನೀಡಲು ಕರ್ನಾಟಕಾದ್ಯಂತ IPTV ಸೇವೆಗಳನ್ನು ಪರಿಚಯಿಸಿದೆ. ಗ್ರಾಹಕರು 600 ಜನಪ್ರಿಯ ಟಿವಿ ಚಾನೆಲ್‌ಗಳು ಹಾಗೂ ೦ಉಂ, ನಮ್ಮಫ್ಲಿಕ್ಸ್, ಸೋನಿ ಲಿವ್, ನೆಟ್‌ಫ್ಲಿಕ್ಸ್, ಆಪಲ್ ಟಿವಿ+, ಅಮೆಜಾನ್ ಪ್ರೈಮ್, ಜೀ5 ಒಳಗೊಂಡಂತೆ 29 ಸ್ಟ್ರೀಮಿಂಗ್ ಆಪ್ಸ್‌ನಿಂದ ಆನ್-ಡಿಮ್ಯಾಂಡ್ ಮನೋರಂಜನೆಯನ್ನು ಮತ್ತು ವೈಫೈ ಸೇವೆಗಳನ್ನು ಕೇವಲ ರೂ. 699ರಿಂದ ಆರಂಭವಾಗುವ ಪ್ಲಾನ್ಸ್ ಮೂಲಕ ಪಡೆಯಬಹುದು. ಈಗ ಆರಂಭ ಕೊಡುಗೆಯ ಭಾಗವಾಗಿ, ಎಲ್ಲ ಗ್ರಾಹಕರು ಏರ್‌ಟೆಲ್ ಥ್ಯಾಂಕ್ಸ್ ಆಪ್ ಮೂಲಕ AHA ಪ್ಲಾನ್ಸ್ ಖರೀದಿಯ ಮೇಲೆ 30 ದಿನಗಳ ಉಚಿತ ಸೇವೆಗಳನ್ನು ಸಹ ಪಡೆಯಬಹುದು.

ಈ ಆರಂಭದ ಬಗ್ಗೆ ಮಾತನಾಡಿದ ಕರ್ನಾಟಕದ ಭಾರತಿ-ಏರ್‌ಟೆಲ್ ಸಿಇಒ ಆಗಿರುವ ರಜನೀಶ್ ಶರ್ಮಾ ಮಾತನಾಡಿ, ''ಮನೋರಂಜನೆ ಎಂಬುದು ಕರ್ನಾಟಕದ ವೈವಿಧ್ಯಮ ಸಂಸ್ಕೃತಿಯ ಸಂಭ್ರಮಿಸಿದ ಮತ್ತು ಅವಿಭಾಜ್ಯ ಅಂಗವಾಗಿದೆ. ಇಂದು, ನಾವುನಮ್ಮ ಉದ್ಯಮದಲ್ಲಿಯೇ ಮೊದಲ IPTV ಸೇವೆಯ ಆರಂಭವನ್ನು ಪ್ರಕಟಿಸಲು ಬಹಳ ಖುಷಿಯಾಗುತ್ತಿದೆ. ಈ ಸೇವೆಯು ನಮ್ಮ ಗ್ರಾಹಕರಿಗೆ ಹೊಸ ಅನುಭವಗಳ ಯುಗಕ್ಕೆ ಜೋಡಿಸುವ ಪ್ರಯತ್ನ ನಡೆಸುತ್ತದೆ. ಈ ಆರಂಭದೊಂದಿಗೆ, ಕರ್ನಾಟಕದ ಜನರ ಆಸೆಗಳು ಮತ್ತು ಮಹತ್ವಾಕಾಂಕ್ಷೆಗಳೊಂದಿಗೆ ಪ್ರತಿಧ್ವನಿಸುವ ಮನೋರಂಜನೆ ಪರಿಹಾರಗಳಿಗಾಗಿ ಹೊಸ ಮಾನದಂಡಗಳನ್ನು ರಚಿಸುವ ಭರವಸೆ ನಮಗಿದೆ.'' ಎಂದರು.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

66.ಟಿ. ಚೌಡಯ್ಯ ರಾಷ್ಟ್ರೀಯ ಪ್ರಶಸ್ತಿಗೆ ಪಾತ್ರರಾದ ಪ್ರಪ್ರಥಮ ಸಂಗೀತಕಾರರು ಯಾರು

[illegible]

## ಮಾವಿನಕಾಯಿ ಉಪ್ಪಿನಕಾಯಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಹುಳಿ ಮಾವಿನಕಾಯಿ-1 ಕೆ.ಜಿ, ಉಪ್ಪಿನ ಪುಡಿ-ಅರ್ಧ ಕಪ್, ಅಚ್ಚ ಖಾರದ ಪುಡಿ-ಅರ್ಧ ಕಪ್, ಮೆಂತ್ಯೆ ಕಾಳು-ಅರ್ಧ ಟೀ ಚಮಚ, ಜೀರಿಗೆ-ಒಂದೂವರೆ ಟೀ ಚಮಚ, ಸಾಸಿವೆ-3 ಟೇಬಲ್ ಚಮಚ, ಇಂಗು-ಅರ್ಧ ಟೀ ಚಮಚ, ಸಾಸಿವೆ ಎಣ್ಣೆ-ಅರ್ಧ ಕಪ್.

### ಮಾಡುವ ವಿಧಾನ

ಮೆಂತ್ಯೆ, ಸಾಸಿವೆ, ಜೀರಿಗೆಯನ್ನು ಸಣ್ಣ ಉರಿಯಲ್ಲಿ ಹುರಿದು ಪುಡಿ ಮಾಡಿಡಿ. ಎಣ್ಣೆ ಬಿಸಿ ಮಾಡಿ ಅದಕ್ಕೆ ಇಂಗು ಹಾಕಿ ಪೂರ್ತಿ ಆರಲು ಬಿಡಿ. ಮಾವಿನಕಾಯಿಯನ್ನು ಒಂದೇ ರೀತಿಯಲ್ಲಿ ಕತ್ತರಿಸಿಡಿ. ಪಿಂಗಾಣಿ ಪಾತ್ರೆಗೆ ಮಾವಿನಕಾಯಿ ಹೋಳು, ಉಪ್ಪು, ಮೆಣಸಿನ ಪುಡಿ, ಪುಡಿ ಮಾಡಿದ ಜೀರಿಗೆ, ಸಾಸಿವೆ ಮತ್ತು ಮೆಂತ್ಯೆ ಹಾಕಿ ಮಿಶ್ರಣ ಮಾಡಿ. ನಂತರ ಇದಕ್ಕೆ ಆರಿಸಿಕೊಂಡ ಎಣ್ಣೆ ಹಾಕಿ ಚೆನ್ನಾಗಿ ಮಿಶ್ರಣ ಮಾಡಿ ಉಪ್ಪಿನಕಾಯಿಯನ್ನು ಮುಚ್ಚಿಡಿ. ಮೂರು ದಿನಗಳ ಕಾಲ ದಿನಕ್ಕೆ ಒಂದು ಬಾರಿಯಂತೆ ಒಣಗಿದ ಸೌಟಿನಿಂದ ಉಪ್ಪಿನಕಾಯಿಯನ್ನು ಮಿಶ್ರ ಮಾಡಿ ನಂತರ ಉಪಯೋಗಿಸಿ.

## ರಾಗಿ ತಿಂದವನೇ ಗಟ್ಟಿವಂತ



ಹೆಲ್ತ್ ಟಿಪ್ಸ್

ರಾಗಿಯಿಂದ ತಯಾರಿಸಿದ ಸರಿ, ಗಂಜಿ, ಮುದ್ದೆ.. ಇತರೆ ಆಹಾರ ಪದಾರ್ಥಗಳಿಗಿಂತ ಅನೇಕ ಪ್ರಯೋಜನಗಳಿವೆ ಎಂಬುದಾಗಿ ವೈಜ್ಞಾನಿಕ ಸಂಶೋಧನೆಯಿಂದಲೂ ದೃಢಪಟ್ಟಿದೆ. ಹೀಗಾಗಿ ರಾಗಿ ಕೇವಲ ಆಹಾರವಲ್ಲದೇ.. ಅದೊಂದು ದೈಹಿಕ ಆರೋಗ್ಯ ಹೆಚ್ಚಿಸುವಂತದ್ದು ಎಂಬುದಾಗಿ ಅರಿಯಬೇಕಿದೆ.

ಅಡುಗೆಯಲ್ಲಿ ರಾಗಿಯನ್ನು ಬಳಕೆ ಮಾಡುವುದರಿಂದ ಕಬ್ಬಿಣದ ಅಂಶ ನಿಮ್ಮ ದೇಹಕ್ಕೆ ಸಿಗುವ ಮೂಲಕ, ಅನೆಮಿಯಾದಂತ ಖಾಯಿಲೆಯಿಂದ ರಕ್ಷಿಸುತ್ತದೆ

ರಾಗಿಯಲ್ಲಿ ಕ್ಯಾಲ್ಸಿಯಂ ಹೇರಳವಾಗಿ ಲಭ್ಯವಿರುದುದರಿಂದ, ಮಕ್ಕಳ ಬೆಳವಣಿಗೆಗೆ ಸಹಕಾರಿ

ಕ್ಯಾಲ್ಸಿಯಂ ಯುಕ್ತ ಆಹಾರ ರಾಗಿಯಾಗಿರುವುದರಿಂದ ಮೂಳೆಗಳ ಬೆಳವಣಿಗೆಗೆ ಉಪಯೋಗಕಾರಿ

ಮಕ್ಕಳಿಗೆ ರಾಗಿಯಿಂದ ತಯಾರಿಸಿದಂತ ಸರಿ, ಗಂಜಿ ಕೊಡೋದ್ರಿಂದ ಇದರಲ್ಲಿರುವ ಡೈಯಟ್ರಿ ಫೈಬರ್ ಅಂಶ ಮಕ್ಕಳಿಗೆ ಸಿಗುವ ಮೂಲಕ, ಮಗುವಿನಲ್ಲಿ ಜೀರ್ಣಕ್ರಿಯೆ ಹೆಚ್ಚುತ್ತದೆ ರಾಗಿಯಲ್ಲಿ ಹೆಚ್ಚು ಪೌಷ್ಠಿಕಾಂಶ ಇರೋಂದ್ರಿ.. ಮಕ್ಕಳು ಸೇರಿದಂತೆ ಎಲ್ಲರ ಅನೇಕ ಆರೋಗ್ಯ ಕರ ಸಮಸ್ಯೆಯನ್ನು ದೂರ ಮಾಡುತ್ತದೆ.

ಅಲ್ಲದೇ ಡಯಾಬಿಟಿಸ್ ನಿಂದ ಬಳಲುತ್ತಿರುವವರು ರಾಗಿಯನ್ನು ಬಳಸಿ ಮುದ್ದೆಯನ್ನು ತಯಾರಿಸಿಯೂ ಊಟ ಮಾಡೋದ್ರಿಂದ ಸಕ್ಕರೆಯ ಅಂಶವನ್ನು ಹತೋಟಿಗೆ ತರಬಹುದಾಗಿದೆ. ಹೀಗಾಗಿ ರಾಗಿಯ ಬಳಕೆಯನ್ನು ನಿಮ್ಮ ಮನೆಯಲ್ಲಿ ಇಂದಿನಿಂದಲೇ ಬಳಕೆ ಮಾಡಿ.

## ಕೂದಲಿನ ಬೆಳವಣಿಗೆಗೆ ಹರಳೆಣ್ಣೆ ಬಳಸುತ್ತೀರಾ?

### ಬ್ಯೂಟಿ ಟಿಪ್ಸ್



ನೆತ್ತಿಯ ಮೇಲಿನ ಆ್ಯಂಟಿಫಂಗಲ್ ಮತ್ತು ಬ್ಯಾಕ್ಟೀರಿಯಾ ವಿರೋಧಿ ಸಮಸ್ಯೆಗಳನ್ನು ಪರಿಹರಿಸಲು ಹರಳೆಣ್ಣೆ ಬಳಸಬಹುದು ಎಂದು ಅನೇಕ ಮೂಲಗಳು ಹೇಳುತ್ತವೆ. ಏಕೆಂದರೆ ಇದು ಉತ್ಕರ್ಷಣ ನಿರೋಧಕಗಳನ್ನು ಹೊಂದಿರುತ್ತದೆ ಮತ್ತು ನೆತ್ತಿಯ ಪಿಎಚ್ ಅನ್ನು ಸಮತೋಲನಗೊಳಿಸುತ್ತದೆ ಮತ್ತು ಕೂದಲು ಬೆಳವಣಿಗೆಯನ್ನು ಸಹ ಉತ್ತೇಜಿಸುತ್ತದೆ. ಆದರೆ, ಇದಕ್ಕೆ ಯಾವುದೇ ವೈಜ್ಞಾನಿಕ ಆಧಾರವಿಲ್ಲ. ಆದ್ದರಿಂದ, ತಲೆಹೊಟ್ಟು ಅಥವಾ ಸೆಬೊರ್ಹೆಕ್ ಡರ್ಮಟೈಟಿಸ್‌ನಿಂದ ಬಳಲುತ್ತಿರುವವರಿಗೆ ಇದು ನಿಜಕ್ಕೂ ಪ್ರತಿರೋಧಕವಾಗಬಹುದು. ಆದರೆ ಇದು ದೊಡ್ಡ ಸಮಸ್ಯೆಗಳನ್ನು ಉಂಟುಮಾಡುತ್ತದೆ. ಚರ್ಮದ ಸಮಸ್ಯೆಯನ್ನು ಉಂಟುಮಾಡುವ ಮತ್ತು ಅಲರ್ಜಿಯನ್ನು ಉಂಟುಮಾಡುವ ಶಿಲೀಂಧ್ರಗಳು ವಾಸ್ತವವಾಗಿ ಎಣ್ಣೆಯಲ್ಲಿರುವ ಲಿಪಿಡ್‌ಗಳನ್ನು ತಿನ್ನುತ್ತವೆ. ಆದ್ದರಿಂದ ತಲೆಹೊಟ್ಟು ಮೇಲೆ ಹರಳೆಣ್ಣೆಯನ್ನು ಅಚ್ಚುವುದರಿಂದ ಪರಿಸ್ಥಿತಿ ಇನ್ನಷ್ಟು ಹದಗೆಡಬಹುದು ಎಚ್ಚರ!.

ಕ್ಯಾಸ್ಟರ್ ಆಯಿಲ್‌ನ ಸ್ವರೂಪವು ಬಹಳ ಸಂಕೋಚಕವಾಗಿದೆ ಮತ್ತು ಚರ್ಮದ ಸಮಸ್ಯೆಯನ್ನು ಉಂಟುಮಾಡುತ್ತದೆ ಹಾಗೂ ಕಿರಿಕಿರಿಯನ್ನು ಉಂಟುಮಾಡುತ್ತದೆ. ಇದು ಶುಷ್ಕತೆ, ಸೂಕ್ಷ್ಮತೆ ಮತ್ತು ಕೂದಲು ಉದುರುವಿಕೆಗೆ ಕಾರಣವಾಗಬಹುದು. ಆದ್ದರಿಂದ ಇದು ನಿಮ್ಮ ಕೂದಲಿಗೆ ಉತ್ತಮವಲ್ಲ. ವಾಸ್ತವವಾಗಿ, ಹರಳೆಣ್ಣೆಯನ್ನು ಬಳಸಿದ ನಂತರ ಅನೇಕ ಜನರು ಕೂದಲಿನ ಸಮಸ್ಯೆಯಿಂದ ಡರ್ಮಟೈಟಿಸ್ ಅನ್ನು ಭೇಟಿ ಮಾಡುತ್ತಾರೆ. ಹರಳೆಣ್ಣೆಯು ಎಲ್ಲಾ ಚರ್ಮದ ಪ್ರಕಾರಗಳಿಗೆ ಸೂಕ್ತವಲ್ಲ. ನಿಮ್ಮ ಚರ್ಮವು ಅದಕ್ಕೆ ಸ್ಪಂದಿಸುತ್ತದೆಯೇ ಎಂದು ಪರೀಕ್ಷಿಸಲು ಮೊಣಕೈಗೆ ಸ್ವಲ್ಪ ಹಚ್ಚಿ ತಿಳಿದುಕೊಳ್ಳಿ. ಅದು ನಿಮ್ಮ ಚರ್ಮಕ್ಕೆ ಹೊಂದುತ್ತದೆ ಎಂದು ತಿಳಿದ ಮೇಲೆ ಬಳಸಲು ಪ್ರಾರಂಭಿಸಿ.

ಹರಳೆಣ್ಣೆಯು ನಿಜವಾಗಿಯೂ ದಪ್ಪವಾಗಿರುತ್ತದೆ ಮತ್ತು ಒಮ್ಮೆ ನೆತ್ತಿಗೆ ಹಚ್ಚಿದಾಗ ತುಂಬಾ ಜಿಡ್ಡಿನಂತೆ ಅನಿಸುತ್ತದೆ. ಆದ್ದರಿಂದ ಸ್ವಾಭಾವಿಕವಾಗಿ, ಅದನ್ನು ತೊಳೆಯುವುದು ಕಠಿಣ ಕೆಲಸವೆಂದು ತೋರುತ್ತದೆ. ಆದ್ದರಿಂದ ನೀವು ಸಾಮಾನ್ಯಕ್ಕಿಂತ ಹೆಚ್ಚು ಶಾಂಪೂ ಬಳಸಿದರೆ, ನೀವು ಎಲ್ಲಾ ಕೂದಲಿಗೆ ಬೇಕಾಗಿರುವ ಕನಿಷ್ಟ ಮಟ್ಟದ ಎಣ್ಣೆಯನ್ನು ಬಿಡದೆ ತೊಳೆಯುವಿರಿ. ಅದು ಕೂದಲು ಉದುರುವಿಕೆಗೆ ಕಾರಣವಾಗುತ್ತದೆ. ನಿಮ್ಮ ಕೂದಲನ್ನು ಎರಡು ಅಥವಾ ಮೂರು ಬಾರಿ ಶಾಂಪೂ ಮಾಡುವ ಬದಲು ತೊಳೆಯುವ ಮೊದಲು ಸ್ಪಷ್ಟವಾದ ಶಾಂಪೂ ಬಳಸಿ ಮತ್ತು ಸ್ವಲ್ಪ ಸಮಯದವರೆಗೆ ಇರಿಸಿ. ಎಣ್ಣೆ ಇನ್ನೂ ಇದ್ದರೆ, ಮರುದಿನ ನಿಮ್ಮ ಕೂದಲನ್ನು ತೊಳೆಯಬಹುದು.

## ಫೊಂಗಲ್ ಹಬ್ಬಕ್ಕೆ ದಳಪತಿ ವಿಜಯ್ ಅಭಿನಯದ ಜನ ನಾಯಗನ್ ರಿಲೀಸ್



ಭಾರತೀಯ ಚಿತ್ರರಂಗದ ಮೋಸ್ಟ್ ವಾಂಟೆಂಡ್ ಸಿನಿಮಾಗಳಲ್ಲೊಂದು ಜನ ನಾಯಗನ್..ದಳಪತಿ ವಿಜಯ್ ಕಟ್ಟ ಕಡೆಯ ಸಿನಿಮಾದಾಳವಾಗಿರುವ ಜನ ನಾಯಗನ್ ಮೇಲೆ ತಮಿಳು ಸಿನಿರಸಿಕರು ಮಾತ್ರ ಇಡೀ ಇಂಡಿಯನ್ ಇಂಡಸ್ಟ್ರೀ ಕಾತುರ ಆತುರದಿಂದ ಕಾಯುತ್ತಿದೆ. ಅದಕ್ಕೆ ಕಾರಣ ಈ ಚಿತ್ರದ ಬಲವಾಗಿರುವ ಕೆವಿಎನ್. ಹಾಗೂ ಇಂತಿಪ್ಪ ದಳಪತಿ ವಿಜಯ್.. ಸಿನಿರಂಗಕ್ಕೆ ಬೈ ಬೈ ಹೇಳಿ ಖಾದಿ ತೊಟ್ಟು ರಾಜಕೀಯದಲ್ಲಿ ದಾಳ ಹಾಕೋದಿಕ್ಕೆ ರೆಡಿಯಾಗಿರುವ ಮಾಸ್ಟರ್ ಕೊನೆ ಸಿನಿಮಾ ಜನ ನಾಯಗನ್ ಬಿಡುಗಡೆಗೆ ದಿನಾಂಕ ನಿಗದಿಯಾಗಿದೆ. ಫೊಂಗಲ್ ಹಬ್ಬಕ್ಕೆ ಕಮಾಲ್ ಮಾಡೋದಿಕ್ಕೆ ದಳಪತಿ ಬಾಕ್ಸಾಫೀಸ್ ಅಖಾಡಕ್ಕೆ ಇಳಿಯುತ್ತಿದೆ. 2026 ಜನವರಿ 15ರಂದು ಬಹುನಿರೀಕ್ಷಿತ ಸಿನಿಮಾ ಜನ ನಾಯಗನ್ ತೆರೆಗೆ ಬರ್ತಿದೆ. ನಾವು ಮೊದ್ಲೇ ಹೇಳಿದಂಗೆ ವಿಜಯ್ ಕೊನೆ ಚಿತ್ರವಾಗಿರೋದ್ರಿಂದ ಬಹಳ ಅದ್ದೂರಿಯಾಗಿ ಕೆವಿಎನ್ ಪ್ರೊಡಕ್ಷನ್ ಸಿನಿಮಾ ನಿರ್ಮಾಣ ಮಾಡುತ್ತಿದೆ. ಈ ಬಾರಿಯ ಫೊಂಗಲ್ ದಳಪತಿ ಅಭಿಮಾನಿಗಳಿಗೆ ಮಾತ್ರವಲ್ಲ ಅಖಂಡ ಸಿನಿಮಾಪ್ರೇಮಿಗಳಿಗೂ ವಿಶೇಷವಾಗಿರುವಂತೆ ಕೆವಿಎನ್ ಸಂಸ್ಥೆ ತಮ್ಮ ನಿರ್ಮಾಣದ ಜನ ನಾಗಯನ್ ಚಿತ್ರವನ್ನು ಫೊಂಗಲ್ ಹಬ್ಬಕ್ಕೆ ಬೆಳ್ಳಿತೆರೆ ಅಖಾಡಕ್ಕೆ ಇಳಿಸುತ್ತಿದೆ. ಈ ಮೂಲಕ ದಳಪತಿ ವಿಜಯ್ ಅವರಿಗೆ ಅಂತಿಮ ಸಿನಿಮಾ ವಿದಾಯ ಹೇಳುವ ಎಲ್ಲಾ ರೀತಿಯ ಸಕಲ ತಯಾರಿ ಮಾಡಿಕೊಂಡಿದೆ. ಒಬ್ಬ ಸೂಪರ್ ಸ್ಟಾರ್ ಕೊನೆಯ ಚಿತ್ರ ಹೇಗೆಲ್ಲಾ ಇರಲಿದೆ? ಅದಕ್ಕೆ ಬೇಕಾದ ಬಲ, ಬೆಂಬಲ ಎಲ್ಲವನ್ನೂ ಕೆವಿಎನ್ ಕೊಂಚವೂ ಏರುಪೇರಾಗದಂತೆ ಒದಗಿಸಿದೆ. ಹೆಚ್ ವಿನೋದ್ ಎಂಬ ಅದ್ಭುತಸಿನಿಮಾಕರ್ಮಿಯಿಂದ ತಯಾರಾಗುತ್ತಿರುವ ಜನ ನಾಯಗನ್ ಗೆ ರಾಕ್ ಸ್ಟಾರ್ ಅನಿರುದ್ಧ್ ರವಿಚಂದರ್ ರಾಕಿಂಗ್ ಮ್ಯೂಸಿಕ್ ಕಿಕ್, ಚಿತ್ರದ ಶ್ರೀಮಂತಿಕೆ ಹೆಚ್ಚಿಸಿದೆ. ದಳಪತಿ ವಿಜಯ್ ಜೊತೆ ಪೂಜಾ ಹೆಗ್ಡೆ, ಬಾಲಿವುಡ್ ನಟ ಬಾಬಿ ಡಿಯೋಲ್, ಗೌತಮ್ ವಾಸುದೇವ ಮೆನನ್, ಪ್ರಿಯಾಮಣಿ, ಪ್ರಕಾಶ್ ರಾಜ್, ವರಲಕ್ಷ್ಮಿ ಶರತ್ ಕುಮಾರ್ ಮುಂತಾದದವರ ತಾರಾಮೆರಗು ಜನ ನಾಯಗನ್ ಅಂದವನ್ನು ಹೆಚ್ಚಿಸಿದೆ. ದಕ್ಷಿಣ ಭಾರತದ ಸಿನಿರಂಗದಲ್ಲಿ ಹೊಸ ಹೆಜ್ಜೆ ಇಟ್ಟಿರುವ ಕೆವಿಎನ್ ಪ್ರೊಡಕ್ಷನ್ ನಿರ್ಮಾತೃ ವೆಂಕಟ್ ಕೆ ನಾರಾಯಣ್ ವಿಜಯ್ ಕಟ್ಟ ಕಡೆಯ ಸಿನಿಮಾವನ್ನು ಪ್ರೇಕ್ಷಕರ ಮುಂದೆ ಹರವಿಡುವ ಎಲ್ಲಾ ರೀತಿಯ ತಯಾರಿ ಮಾಡಿಕೊಂಡಿದ್ದಾರೆ. ಹೇಳಿಕೇಳಿ ತಮಿಳು ಚಿತ್ರರಂಗದ ಬಾಕ್ಸಾಫೀಸ್ ಕಿಂಗ್ ಎನಿಸಿಕೊಂಡಿರುವ ಮಾಸ್ಟರ್ ಮೇನಿಯಾ ಫೊಂಗಲ್ ನಲ್ಲಿ ಜೋರಾಗಿರಲಿದೆ ಎಂಬ ಸೂಚನೆಯಂತೂ ಸಿಕ್ಕಿದೆ. ಅದಕ್ಕೆ ಸಂಪೂರ್ಣವಾದ ಸಹಕಾರವೂ ಕೆವಿಎನ್ ನೀಡಿದೆ. ಈ ಮೂಲಕ ದಳಪತಿ ಅಭಿಮಾನಿಗಳು ಫೊಂಗಲ್ ಹಬ್ಬವನ್ನು ವಿಶೇಷವಾಗಿ ಆಚರಿಸುವ ಖುಷಿಯಲ್ಲಿದ್ದಾರೆ.

## ಐಶ್ವರ್ಯ ರೈ ಕಾರಿಗೆ ಬಸ್ ಡಿಕ್ಕಿ: ನಟಿ ಸೇಫ್





**ಮುಂಬೈ:** ಇಲ್ಲಿನ ಜುಹು ಉಪನಗರದಲ್ಲಿ ಬಾಲಿವುಡ್ ನಟಿ ಐಶ್ವರ್ಯಾ ರೈ ಬಚ್ಚನ್ ಅವರ ಐಷಾರಾಮಿ ಕಾರಿಗೆ ಬಸ್ ಡಿಕ್ಕಿ ಹೊಡೆದಿದೆ. ಅದೃಷ್ಟವಶಾತ್ ಘಟನೆಯಲ್ಲಿ ಅಪಘಾತದಲ್ಲಿ ಯಾರಿಗೂ ಗಾಯಗಳಾಗಿಲ್ಲ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮುಂಬೈನ ಎಲೆಕ್ಟ್ರಿಕ್ ಸಪ್ಲೈ ಅಂಡ್ ಟ್ರಾನ್ಸ್‌ಪೋರ್ಟ್ ಸಂಸ್ಥೆಯ ಬಸ್ ನಟಿಯ ಕಾರಿಗೆ ಡಿಕ್ಕಿ ಹೊಡೆದಿದೆ. ಅಪಘಾತದ ಸಂದರ್ಭದಲ್ಲಿ ನಟಿ ಕಾರಿನಲ್ಲಿ ಇರಲಿಲ್ಲ. ಆದ್ರೆ ನಂಬರ್ ಪ್ಲೇಟ್ ಪರಿಶೀಲಿಸಿದಾಗ ಅದು ಐಶ್ವರ್ಯ ರೈ ಅವರದ್ದೇ ಕಾರು ಎಂಬುದು ಹೊತ್ತಾಗಿದೆ ಎಂದು ವರದಿಗಳು ತಿಳಿಸಿವೆ. ಅಪಘಾತ ದೃಶ್ಯದ ವಿಡಿಯೋ ಮತ್ತು ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡುತ್ತಿವೆ. ಕಾರು ಅಪಘಾತದ ಬಳಿಕ ಅಮಿತಾಬ್ ಬಚ್ಚನ್ ಅವರ ನಿವಾಸದ ಬೌನ್ಸರ್ ಬಸ್ ಚಾಲಕನಿಗೆ ಕಪಾಳಕ್ಕೆ ಬಾರಿಸಿದ್ದಾನೆ ಎಂದು ಬೆಸ್ಟ್ ಸಂಸ್ಥೆಯ ಅಧಿಕಾರಿ ತಿಳಿಸಿದ್ದಾರೆ. ಒಂದಿಷ್ಟು ಹೈಡ್ರಾಮಾ ಬಳಿಕ ಬೌನ್ಸರ್ ಪೊಲೀಸರ ಎದುರು ಚಾಲಕನಿಗೆ ಕ್ಷಮೆ ಕೋರಿದ್ದಾನೆ ಎಂಬುದಾಗಿ ತಿಳಿದುಬಂದಿದೆ.

## ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶುರನ್ಸ್: ಬಿಎಂಟಿಸಿ ಚಾಲಕರಿಗೆ ಸಿಪಿಆರ್ ಕಾರ್ಯಾಗಾರ ಮತ್ತು ವಿಮೆ ಜಾಗೃತಿ ಶಿಬಿರ

ದೇಶದ ಪ್ರಮುಖ ಆರೋಗ್ಯ ವಿಮೆ ಕಂಪನಿಗಳಲ್ಲಿ ಒಂದಾಗಿರುವ ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶುರನ್ಸ್, ಬೆಂಗಳೂರು ಮಹಾನಗರ ಸಾರಿಗೆ ನಿಗಮದ (ಬಿಎಂಟಿಸಿ) ಸಹಯೋಗದಲ್ಲಿ ಬೆಂಗಳೂರಿನ ಹೆಣ್ಣೂರಿನಲ್ಲಿ ಆರೋಗ್ಯ ವಿಮೆ ಜಾಗೃತಿ ಶಿಬಿರದ ಜೊತೆಗೆ ಜೀವ ಉಳಿಸುವ ಪ್ರಥಮ ಚಿಕಿತ್ಸೆಯಾಗಿರುವ ಹೃದಯ ಶ್ವಾಸಕೋಶ ಪುನರುಜ್ಜೀವನಕ್ಕೆ (ಸಿಪಿಆರ್) ಸಂಬಂಧಿಸಿದ ತರಬೇತಿ ಶಿಬಿರ ಆಯೋಜಿಸಿತ್ತು.

ಕರ್ನಾಟಕ ರಾಜ್ಯದಾದ್ಯಂತ ಆರೋಗ್ಯ ವಿಮೆ ಜಾಗೃತಿ ಮೂಡಿಸುವ ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶುರನ್ಸ್ನ ದೊಡ್ಡ ಗುರಿ ಸಾಧಿಸುವುದಕ್ಕೆ ಪೂರಕವಾಗಿ ಈ ಶಿಬಿರ ಆಯೋಜಿಸಲಾಗಿತ್ತು. ಭಾರತದ ವಿಮೆ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರದ (ಐಆರ್‌ಡಿಎಐ) ರಾಜ್ಯ ವಿಮೆ ಜಾಗೃತಿ ಯೋಜನೆ ಕಾರ್ಯಗತಗೊಳಿಸುವಲ್ಲಿ ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶುರನ್ಸ್ ಪ್ರಮುಖ ಆರೋಗ್ಯ ವಿಮೆ ಕಂಪನಿಯಾಗಿದೆ.

ಸಾರ್ವಜನಿಕರಿಗೆ ಸುರಕ್ಷಿತ ಸಂಚಾರ ಸೇವೆ ಒದಗಿಸುವಲ್ಲಿ ಚಾಲಕರು ಮತ್ತು ನಿರ್ವಾಹಕರು ಸೇರಿದಂತೆ ಬಿಎಂಟಿಸಿಯ ಮುಂಚೂಣಿ ಸಿಬ್ಬಂದಿಯು ಪ್ರಮುಖ ಪಾತ್ರ ನಿರ್ವಹಿಸುತ್ತಿರುವುದನ್ನು ಪರಿಗಣಿಸಿ, ಜೀವ ಉಳಿಸುವ ಕೌಶಲಗಳನ್ನು ಅವರಿಗೆ ಕರಗತ ಮಾಡುವ ಮತ್ತು ಕಾಯಿಲೆಗಳು ಬರದಂತೆ ತಡೆಗಟ್ಟುವ ಆರೋಗ್ಯ ರಕ್ಷಣಾ ಕ್ರಮಗಳನ್ನು ಉತ್ತೇಜಿಸಲು ಈ ವಿಶೇಷ ಶಿಬಿರವನ್ನು ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮವು ತಜ್ಞರ ನೇತೃತ್ವದಲ್ಲಿನ ಸಿಪಿಆರ್ ಮತ್ತು ಜೀವ ರಕ್ಷಿಸುವ ಪ್ರಾಥಮಿಕ (ಬಿಎಲ್ಎಸ್) ತರಬೇತಿಯನ್ನು ಒಳಗೊಂಡಿತ್ತು. ತುರ್ತು ಸಂದರ್ಭಗಳಲ್ಲಿ ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಲು



ಅಗತ್ಯವಾದ ಕೌಶಲಗಳೊಂದಿಗೆ ಬಿಎಂಟಿಸಿ ಸಿಬ್ಬಂದಿಗೆ ತರಬೇತಿ ನೀಡುವ ಗುರಿ ಹೊಂದಲಾಗಿದೆ. ಅನೇಕ ಸಂದರ್ಭಗಳಲ್ಲಿ ಬಿಎಂಟಿಸಿ ಸಿಬ್ಬಂದಿಯು ಪ್ರಯಾಣಿಕರ ನೆರವಿಗೆ ಧಾವಿಸಬೇಕಾದ ತುರ್ತು ಎದುರಾಗುತ್ತದೆ. ಅಂತಹ ಸಂದರ್ಭಗಳಲ್ಲಿ ಹೃದಯಾಘಾತ ಸಂಭವಿಸುವ ಸಾಧ್ಯತೆ ಅಥವಾ ಉಸಿರಾಟದ ತೊಂದರೆ ಕಂಡುಬಂದ ಸಮಯದಲ್ಲಿ ಸಿಪಿಆರ್ ನೆರವೇರಿಸುವವರು ನೆರವಿಗೆ ಧಾವಿಸುವುದರಿಂದ ವ್ಯಕ್ತಿಯು ಬದುಕುಳಿಯುವಿಕೆಯ ಪ್ರಮಾಣವು ಗಮನಾರ್ಹವಾಗಿ ಹೆಚ್ಚಳಗೊಳ್ಳುತ್ತದೆ. ಸಾರ್ವಜನಿಕ ಆರೋಗ್ಯ ಮತ್ತು ಸುರಕ್ಷತೆ ಕಾಪಾಡುವಲ್ಲಿ ಸಿಬ್ಬಂದಿಯು ನಿರ್ವಹಿಸುವ ಮಹತ್ವದ ಪಾತ್ರವನ್ನು ಈ ತರಬೇತಿಯು ಬಲಪಡಿಸುತ್ತದೆ.

ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶುರನ್ಸ್ನ ಮುಖ್ಯ ಮಾರುಕಟ್ಟೆ ಅಧಿಕಾರಿ ಸಪ್ನಾ ದೇಸಾಯಿ ಅವರು ಮಾತನಾಡಿ, ''ಬಿಎಂಟಿಸಿಯ ಮುಂಚೂಣಿಯ ಸಿಬ್ಬಂದಿ ಬೆಂಗಳೂರಿನ ಸಾರಿಗೆ ವ್ಯವಸ್ಥೆಯ ಬೆನ್ನೆಲುಬಾಗಿದ್ದು, ಪ್ರತಿದಿನ ಲಕ್ಷಾಂತರ ಪ್ರಯಾಣಿಕರ ಸುರಕ್ಷತೆಯನ್ನು ಖಾತ್ರಿಪಡಿಸುತ್ತಾರೆ. ಹೃದಯಾಘಾತದ ತುರ್ತು ಪರಿಸ್ಥಿತಿಗಳು ಹೆಚ್ಚುತ್ತಿರುವ ಮತ್ತು ಜೀವ ರಕ್ಷಿಸುವ ಮಹತ್ವದ ಘಟ್ಟದಲ್ಲಿ ನಾವು ಆಯೋಜಿಸಿದ್ದ ಈ ಸಿಪಿಆರ್ ತರಬೇತಿ ಶಿಬಿರದಲ್ಲಿ ಬಿಎಂಟಿಸಿ ಸಿಬ್ಬಂದಿಯ ಉತ್ಸಾಹದಾಯಕ ಭಾಗವಹಿಸುವಿಕೆಯನ್ನು ನೋಡಿ ನಮಗೆ ಅತೀವ ಸಂತಸವಾಗಿದೆ. ಸಾರ್ವಜನಿಕರಲ್ಲಿನ ತಿಳಿವಳಿಕೆ ಹಾಗೂ ನೆರವಿಗೆ ಧಾವಿಸುವ ಅರಿವಿನ ಕೊರತೆಯಿಂದಾಗಿ ಆಸ್ಪತ್ರೆಯ ಹೊರಗೆ ಸಂಭವಿಸುವ ಹೃದಯಾಘಾತಗಳಲ್ಲಿ ಶೇ 90 ರಷ್ಟು ಜೀವ ಉಳಿಸುವ ಸಿಪಿಆರ್ ನೆರವು ದೊರೆಯದೇ ಹೋಗುತ್ತದೆ. ಈ ರೀತಿಯ ತರಬೇತಿ ಕಾರ್ಯಕ್ರಮಗಳು ವೈಯಕ್ತಿಕ ಸನ್ನದ್ಧತೆ ಹೆಚ್ಚಿಸುವುದಲ್ಲದೆ, ಆರೋಗ್ಯ ರಕ್ಷಣಾ ತುರ್ತು ಪರಿಸ್ಥಿತಿಗಳಿಗೆ ಪ್ರತಿಕ್ರಿಯಿಸುವ ಸಾರ್ವಜನಿಕರ ಸಾಮರ್ಥ್ಯವನ್ನು ಬಲಪಡಿಸುತ್ತವೆ. ಆರೋಗ್ಯ ವಿಮೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದರ ಜೊತೆಗೆ ಈ ಶಿಬಿರದ ಮೂಲಕ ಬಿಎಂಟಿಸಿ ಸಿಬ್ಬಂದಿಯ ಸನ್ನದ್ಧತೆ ಬೆಂಬಲಿಸಲು ನೆರವಾಗಿದ್ದಕ್ಕೆ ನಾವು ಹೆಮ್ಮೆಪಡುತ್ತೇವೆ'' ಎಂದು ಹೇಳಿದ್ದಾರೆ.ಇಂತಹ ಪ್ರಯತ್ನಗಳ ಮೂಲಕ, ಮಣಿಪಾಲ್ ಸಿಗ್ನಾ ಹೆಲ್ತ್ ಇನ್ಶುರನ್ಸ್ ಕಂಪನಿಯು ಆರೋಗ್ಯ ಫಲಿತಾಂಶಗಳನ್ನು ಸುಧಾರಿಸಲು ಮತ್ತು ದೇಶದಾದ್ಯಂತ ಆರೋಗ್ಯ ವಿಮೆ ಸೇವೆ ವಿಸ್ತರಿಸಲು ಶ್ರಮಿಸುತ್ತದೆ.



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ವಾಹನ ಭೂಮಿಯಿಂದ ಅನುಕೂಲ, ಅನಾರೋಗ್ಯ, ಮಾತಿನಿಂದ ಸಮಸ್ಯೆ, ಕೋಪ, ಆತಂಕ, ಗುಪ್ತ ವಿಷಯಗಳಿಂದ ಅಪವಾದ.

**ವೃಷಭ:** ಯಂತ್ರೋಪಕರಣಗಳಿಗೆ ಖರ್ಚು, ಆತುರದ ನಿರ್ಧಾರದಿಂದ ಸಂಕಷ್ಟ, ಸಂಗಾತಿಯ ಬೇಜವಾಬ್ದಾರಿತನ, ದೂರ ಪ್ರದೇಶದಲ್ಲಿ ಉದ್ಯೋಗ ಅನುಕೂಲ.

**ಮಿಥುನ:** ದುಃಸ್ವಪ್ನಗಳು, ಶತ್ರು ಕಾಟ, ಸಾಲಭಾದೆ, ಕುಟುಂಬಸ್ಥರಿಂದ ವಿರೋಧ, ತಂದೆಯಿಂದ ಅಸಹಕಾರ, ಮಾತಿನಿಂದ ಸಂಕಷ್ಟ.

**ಕಟಕ:** ಉದ್ಯೋಗ ಲಾಭ, ಸ್ನೇಹಿತರಿಂದ ಸಹಕಾರ, ಸ್ತ್ರೀಯರಿಂದ ನೋವು, ಮಕ್ಕಳಿಂದ ಅದೃಷ್ಟ ಮತ್ತು ಯೋಗ.

**ಸಿಂಹ:** ಸ್ಥಿರಾಸ್ತಿ ಯೋಗ, ಕೈಗಾರಿಕೆಯವರಿಗೆ ಅನುಕೂಲ, ಉದ್ಯೋಗ ಬದಲಾವಣೆಯ ಅದೃಷ್ಟ, ತಂದೆಯಿಂದ ಸಹಕಾರ.

**ಕನ್ಯಾ:** ಕೇಸ್‌ಗಳಲ್ಲಿ ಒದ್ದಾಟ, ಕಲಹಗಳು ಅಪವಾದ ಅಪ ನಿಂದನೆ, ಸೋಲು ನಷ್ಟ ನಿರಾಸೆ, ಅನಗತ್ಯ ತಿರುಗಾಟ.

**ತುಲಾ:** ಅನಿರೀಕ್ಷಿತ ಧನಾಗಮನ, ಸಂಗಾತಿಯಿಂದ ಆರ್ಥಿಕ ನೆರವು, ಪಾಲುದಾರಿಕೆಯಲ್ಲಿ ಬೇಸರ, ದಾಂಪತ್ಯದಲ್ಲಿ ತೊಂದರೆ.

**ವೃಶ್ಚಿಕ:** ಉಡಾಫೆಯ ನಡವಳಿಕೆ, ದಾಂಪತ್ಯದಲ್ಲಿ ವಿರಸ, ಅನಾರೋಗ್ಯ, ಪ್ರಯಾಣದಲ್ಲಿ ಗೊಂದಲಗಳು.

**ಧನಸ್ಸು:** ಶತ್ರು ದಮನ, ಭಾವನಾತ್ಮಕ ಅಸಮಾಧಾನದಿಂದ ಕೋಪ, ಮಕ್ಕಳಿಂದ ಅನುಕೂಲ, ಉದ್ಯೋಗ ಲಾಭ.

**ಮಕರ:** ಸ್ಥಿರಾಸ್ತಿಯಿಂದ ಶುಭಫಲ, ದೂರದ ವ್ಯಕ್ತಿಗಳಿಂದ ಅನುಕೂಲ, ರಕ್ತಸಂಬಂಧಿಗಳಿಂದ ನೋವು, ಮಾಟ ಮಂತ್ರ ತಂತ್ರದ ಸನ್ನಿವೇಶ.

**ಕುಂಭ:** ದಾಯಾದಿಗಳಿಂದ ತೊಂದರೆ, ಸ್ಥಿರಾಸ್ತಿ ವಾಹನ ಲಾಭ, ಮಹಿಳೆಯರಿಂದ ಅನುಕೂಲ, ನೆರೆಹೊರೆಯವರಿಂದ ಒತ್ತಡ.

**ಮೀನ:** ಆರ್ಥಿಕ ಚೇತರಿಕೆ, ಉದ್ಯೋಗ ಬದಲಾವಣೆಯಿಂದ ಅವಕಾಶ ಪ್ರಾಪ್ತಿ, ಮಹಿಳೆಯರಿಂದ ತೊಂದರೆಯಾಗುವ ಆತಂಕ, ಪ್ರೇಮಿಗಳಲ್ಲಿ ಮನಸ್ತಾಪ.

## ವಿಶ್ವ ರಂಗಭೂಮಿ ದಿನ




ವಿಶ್ವ ರಂಗಭೂಮಿ ದಿನವನ್ನು ಪ್ರತಿ ವರ್ಷ ಮಾರ್ಚ್ 27 ರಂದು ಆಚರಿಸಲಾಗುತ್ತದೆ. 1961 ರಲ್ಲಿ ಅಂತರರಾಷ್ಟ್ರೀಯ ರಂಗಭೂಮಿ ಸಂಸ್ಥೆ (ಐಟಿಐ) ಗೊತ್ತುಪಡಿಸಿದ ಈ ದಿನವು ರಂಗಭೂಮಿ ಕಲೆಗಳ ಸಾರ, ಸೌಂದರ್ಯ ಮತ್ತು ಪ್ರಾಮುಖ್ಯತೆ, ಮನರಂಜನೆಯಲ್ಲಿ ಅವುಗಳ ಮಹತ್ವದ ಪಾತ್ರ ಮತ್ತು ರಂಗಭೂಮಿ ಜೀವನದ ಮೇಲೆ ಬೀರುವ ಸಾಂಕೇತಿಕ ಪ್ರಭಾವವನ್ನು ಆಚರಿಸುತ್ತದೆ. ಈ ದಿನವು ಜನರಿಗೆ ರಂಗಭೂಮಿಯ ಮೌಲ್ಯ ಮತ್ತು ಆರ್ಥಿಕ ಬೆಳವಣಿಗೆಗೆ ಅದರ ಸಾಮರ್ಥ್ಯವನ್ನು ಇನ್ನೂ ಅರಿತುಕೊಳ್ಳದ ಸರ್ಕಾರಗಳು, ರಾಜಕಾರಣಿಗಳು, ಸಂಸ್ಥೆಗಳು ಮತ್ತು ಪ್ರಪಂಚದಾದ್ಯಂತದ ಪಾಲುದಾರರಿಗೆ ತಿಳಿಸಲು ಸಹ ಸಹಾಯ ಮಾಡುತ್ತದೆ. ಪ್ರಾಚೀನ ಗ್ರೀಸ್ ನಿಂದಲೂ, ರಂಗಭೂಮಿ ಕಲೆ ಮತ್ತು ಮನರಂಜನೆಯ ಜನಪ್ರಿಯ ರೂಪವಾಗಿದೆ - ಅದರ ಪ್ರೇಕ್ಷಕರನ್ನು ರೋಮಾಂಚನಗೊಳಿಸುತ್ತದೆ ಮತ್ತು ಅವರನ್ನು ವಿಸ್ಮಯಗೊಳಿಸುತ್ತದೆ. ಇದು ಮನರಂಜನೆ ಮತ್ತು ಶಿಕ್ಷಣವನ್ನು ನೀಡುವುದಲ್ಲದೆ, ರಂಗಭೂಮಿಯು ತನ್ನ ನೇರ ಪ್ರೇಕ್ಷಕರಿಗೆ ನಿಜವಾದ ರಂಗ ಅನುಭವವನ್ನು ನೀಡಲು ವಿವಿಧ ಕಲಾ ಪ್ರಕಾರಗಳನ್ನು ಸಂಯೋಜಿಸುತ್ತದೆ, ವಿಶ್ವ ರಂಗಭೂಮಿ ದಿನವನ್ನು ವಾರ್ಷಿಕವಾಗಿ ಮಾರ್ಚ್ 27 ರಂದು ಆಚರಿಸಲಾಗುತ್ತದೆ, ಇದನ್ನು ಐಟಿಐ ತನ್ನ ಕೇಂದ್ರಗಳ ಮೂಲಕ ಉತ್ತೇಜಿಸುತ್ತದೆ ಮತ್ತು ಪ್ರಪಂಚದಾದ್ಯಂತದ ರಂಗಭೂಮಿ ಸಮುದಾಯಗಳಿಂದ ಬೆಂಬಲಿತವಾಗಿದೆ. ಜೂನ್ 1961 ರಲ್ಲಿ ವಿಯೆನ್ನಾದಲ್ಲಿ ನಡೆದ ಐಟಿಐನ ಒಂಬತ್ತನೇ ವಿಶ್ವ ಕಾಂಗ್ರೆಸ್‌ನಲ್ಲಿ - ಐಟಿಐನ ಫಿನ್ನಿಷ್ ಕೇಂದ್ರದ ಪರವಾಗಿ - ವಿಶ್ವ ರಂಗಭೂಮಿ ದಿನವನ್ನು ಸ್ಥಾಪಿಸಬೇಕೆಂಬ ಅಧ್ಯಕ್ಷ ಅರ್ವಿ ಕಿವಿಮಾ ಅವರ ಪ್ರಸ್ತಾವನೆಯ ಮೇರೆಗೆ ಐಟಿಐ ಈ ದಿನವನ್ನು ಪ್ರಾರಂಭಿಸಿತು. ಈ ಪ್ರಸ್ತಾವನೆಯನ್ನು ಐಟಿಐನ ಸ್ಕ್ಯಾಂಡಿನೇವಿಯನ್ ಕೇಂದ್ರಗಳು ಬೆಂಬಲಿಸಿದವು ಮತ್ತು ಉತ್ಸಾಹದಿಂದ ಪ್ರಚಾರ ಮಾಡಿದವು. ಪ್ರತಿ ವರ್ಷ ವಿಶ್ವ ರಂಗಭೂಮಿ ದಿನವನ್ನು ಗುರುತಿಸಲು ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಈ ವಾರ್ಷಿಕ ಕಾರ್ಯಕ್ರಮಗಳ ಪ್ರಮುಖ ಲಕ್ಷಣವೆಂದರೆ, ಇಂದಿನ ಜಗತ್ತಿನಲ್ಲಿ ರಂಗಭೂಮಿಯ ಇತಿಹಾಸ ಮತ್ತು ಶಾಂತಿಯ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಪ್ರಸಿದ್ಧ ಕಲಾ ವ್ಯಕ್ತಿಯೊಬ್ಬರು ಪ್ರಸ್ತುತಪಡಿಸುವ ವಿಶ್ವ ರಂಗಭೂಮಿ ದಿನದ ಅಂತರರಾಷ್ಟ್ರೀಯ ಸಂದೇಶ. ಮೊದಲ ವಿಶ್ವ ರಂಗಭೂಮಿ ದಿನದ ಅಂತರರಾಷ್ಟ್ರೀಯ ಸಂದೇಶವನ್ನು ಫ್ರೆಂಚ್ ಕವಿ ಮತ್ತು ನಾಟಕಕಾರ ಜೀನ್ ಕಾಕ್ಟೊ 1962 ರಲ್ಲಿ ಬರೆದರು. 2021 ರಲ್ಲಿ, ದಿ ಕ್ವೀನ್ ನಲ್ಲಿನ ಅಭಿನಯಕ್ಕಾಗಿ 2007 ರಲ್ಲಿ ಅಕಾಡೆಮಿ ಪ್ರಶಸ್ತಿಯನ್ನು ಗೆದ್ದು ಖ್ಯಾತಿ ಪಡೆದ ಬಹು-ಪ್ರಶಸ್ತಿ ವಿಜೇತ ಬ್ರಿಟಿಷ್ ನಟಿ ಹೆಲೆನ್ ಮಿರ್ರೆನ್ ಅವರು ವಿಶ್ವ ರಂಗಭೂಮಿ ದಿನದ ಸಂದೇಶವನ್ನು ಬರೆದಿದ್ದಾರೆ.

## ಅಮಿತ್ ಶಾ ಅವರಿಗೆ ಜೈರಾಮ್ ರಮೇಶ್ ನೋಟಿಸ್



**ಹೊಸದಿಲ್ಲಿ:** ರಾಷ್ಟ್ರೀಯ ಪ್ರಧಾನ ಮಂತ್ರಿ ಪರಿಹಾರ ನಿಧಿ (ಎನ್‌ಪಿಎಂಆರ್‌ಎಫ್) ಕಾರ್ಯನಿರ್ವಹಣೆಗೆ ಸಂಬಂಧಿಸಿ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿಯವರ ಹೆಸರು ಕೆಡಿಸಲು ಉದ್ದೇಶಪೂರ್ವಕ ಹೇಳಿಕೆ ನೀಡಿರುವುದಾಗಿ ಆರೋಪಿಸಿ ಗೃಹ ಸಚಿವ ಅಮಿತ್ ಶಾ ಅವರ ವಿರುದ್ಧ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಬುಧವಾರ ಹಕ್ಕುಚ್ಯುತಿ ನೋಟಿಸ್ ಸಲ್ಲಿಸಿದ್ದಾರೆ.

ಸೋನಿಯಾ ಗಾಂಧಿ ವಿರುದ್ಧದ ಅಮಿತ್ ಶಾ ಅವರ ಹೇಳಿಕೆ ಸ್ಪಷ್ಟವಾಗಿ ಸುಳ್ಳು, ಮಾನ ಹಾನಿಕರ ಹಾಗೂ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಜೈರಾಮ್ ರಮೇಶ್ ಹೇಳಿದ್ದಾರೆ. ಆದುದರಿಂದ ಅವರ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ಅವರು ರಾಜ್ಯಸಭೆಯ ಅಧ್ಯಕ್ಷ ಜಗದೀಪ್ ಧನ್ಕರ್ ಅವರನ್ನು ಆಗ್ರಹಿಸಿದ್ದಾರೆ.

ವಿಪತ್ತು ನಿರ್ವಹಣಾ (ತಿದ್ದುಪಡಿ) ಮಸೂದೆ, 2024ರ ಕುರಿತ ಚರ್ಚೆಗೆ ತನ್ನ ಪ್ರತಿಕ್ರಿಯೆ ನೀಡುವ ಸಂದರ್ಭ ಅಮಿತ್ ಶಾ ಅವರು ನೀಡಿದ ಹೇಳಿಕೆಯನ್ನು ಜೈರಾಮ್ ರಮೇಶ್ ಅವರು ಉಲ್ಲೇಖಿಸಿದರು. ಚರ್ಚೆಯ ಸಂದರ್ಭ ಅಮಿತ್ ಶಾ ಅವರು ಎನ್‌ಪಿಎಂಆರ್‌ಎಫ್ ಅನ್ನು ಕಾಂಗ್ರೆಸ್ ಆಡಳಿತದ ಸಂದರ್ಭ ಸ್ಥಾಪಿಸಲಾಯಿತು. ಪಿಎಂ-ಕೇರ್ ಅನ್ನು ನರೇಂದ್ರ ಮೋದಿ ಸರಕಾರದ ಸಂದರ್ಭ ಸ್ಥಾಪಿಸಲಾಯಿತು ಎಂದು ಹೇಳಿದ್ದರು.

## ಅಮೆರಿಕಕ್ಕೆ ಚೀನಾದಿಂದ ಸೈಬರ್ ಬೆದರಿಕೆ

**ವಾಷಿಂಗ್ಟನ್:** ಅಮೆರಿಕದ ಗುಪ್ತಚರ ಏಜೆನ್ಸಿಗಳು ಚೀನಾವನ್ನು ಅಮೆರಿಕಕ್ಕೆ ಪ್ರಾಥಮಿಕ ಮಿಲಿಟರಿ ಮತ್ತು ಸೈಬರ್ ಬೆದರಿಕೆ ಎಂದು ಗುರುತಿಸಿದ್ದು, ಚೀನಾವು ತೈವಾನ್ ಮೇಲೆ ಹಿಡಿತ ಸಾಧಿಸುವ ಸಾಮರ್ಥ್ಯವನ್ನು ಹೆಚ್ಚಿಸುತ್ತಲೇ ಇದೆ ಎಂದು ಹೇಳಿರುವುದಾಗಿ 'ತೈಪೆ ಟೈಮ್ಸ್' ವರದಿ ಮಾಡಿದೆ.

ಏಜೆನ್ಸಿಗಳು ಅಮೆರಿಕಕ್ಕೆ ಬೆದರಿಕೆಯನ್ನು ಎರಡು ಪ್ರಮುಖ ಗುಂಪುಗಳಾಗಿ ವರ್ಗೀಕರಿಸಿವೆ. ಒಂದು ಗುಂಪಿನಲ್ಲಿ ರಾಷ್ಟ್ರೇತರ ಬಹುರಾಷ್ಟ್ರೀಯ ದೇಶೀಯ ಅಪರಾಧಿಗಳು ಮತ್ತು ಭಯೋತ್ಪಾದಕರು ಹಾಗೂ ಮತ್ತೊಂದು ಗುಂಪಿನಲ್ಲಿ ರಶ್ಯ, ಚೀನಾ, ಇರಾನ್ ಮತ್ತು ಉತ್ತರ ಕೊರಿಯಾಗಳನ್ನು ಒಳಗೊಂಡ ಪ್ರಮುಖ ರಾಷ್ಟ್ರಗಳಿವೆ ಎಂದು ವರದಿ ಹೇಳಿದೆ. ಚೀನಾವು ವಿಶ್ವದಾದ್ಯಂತದ ಅಮೆರಿಕದ ಹಿತಾಸಕ್ತಿಗಳಿಗೆ ಬೆದರಿಕೆಯೊಡ್ಡುವ ಹೆಚ್ಚಿನ ಸಾಮರ್ಥ್ಯವಿರುವ ದೇಶವೆಂದು ಗುರುತಿಸಲಾಗಿದೆ.

ಚೀನಾದ ಮಿಲಿಟರಿಯು ಹೈಪರ್‌ಸಾನಿಕ್ ಆಯುಧಗಳು, ಸ್ಟೆಲ್ತ್ ವಿಮಾನಗಳು, ಅತ್ಯಾಧುನಿಕ ಸಬ್‌ಮೆರಿನ್ ಗಳು, ವರ್ಧಿತ ಬಾಹ್ಯಾಕಾಶ ಮತ್ತು ಸೈಬರ್ ಸಾಮರ್ಥ್ಯದಂತಹ ಅತ್ಯಾಧುನಿಕ ತಂತ್ರಜ್ಞಾನವನ್ನು ಹಾಗೂ ಪರಮಾಣು ಶಸ್ತ್ರಾಸ್ತ್ರಗಳ ದೊಡ್ಡ ದಾಸ್ತಾನುಗಳನ್ನು ಹೊಂದಿವೆ ಎಂದು ಅಮೆರಿಕದ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಸಂಸತ್ ನ ಗುಪ್ತಚರ ಸಮಿತಿಯ ಎದುರು ಹೇಳಿಕೆ ನೀಡಿರುವುದಾಗಿ ಹೇಳಿದೆ.

## ಸಾರ್ವಜನಿಕ ಸ್ಥಳಗಳಲ್ಲಿ ಪ್ರಾರ್ಥನೆ ಸಲ್ಲಿಕೆ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ಒತ್ತಾಯ

**ನವದೆಹಲಿ:** ಸಾರ್ವಜನಿಕ ಸ್ಥಳಗಳಲ್ಲಿ ಮುಸ್ಲಿಮರು ನಮಾಜ್ ಮಾಡುವುದರಿಂದ ಜನರಿಗೆ ತೊಂದರೆ ಉಂಟಾಗುತ್ತಿದ್ದು, ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ದೆಹಲಿಯ ಶಕುರ್ ಬಸ್ತಿಯ ಬಿಜೆಪಿ ಶಾಸಕ ಕರ್ನೈಲ್ ಸಿಂಗ್ ಬುಧವಾರ ಪೊಲೀಸ್ ಆಯುಕ್ತರಿಗೆ ಪತ್ರ ಬರೆದು ದೂರು ನೀಡಿದ್ದಾರೆ. ರಸ್ತೆ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ನಮಾಜ್ ಮಾಡುವುದರಿಂದ ಸಂಚಾರ ದಟ್ಟಣೆ ಉಂಟಾಗುತ್ತದೆ. ಇದರಿಂದ ಜನರ ಸಂಚಾರಕ್ಕೆ ಅಡ್ಡಿಯಾಗುತ್ತಿದೆ. ಇದರಿಂದ ತುರ್ತು ಸೇವೆಗಳಿಗೆ ತೊಂದರೆ ಉಂಟಾಗುತ್ತಿದೆ. ಹಲವು ಬಾರಿ ಆಂಬ್ಯುಲೆನ್ಸ್‌ಗಳು, ಶಾಲಾ ಬಸ್‌ಗಳು ಮತ್ತು ಇತರ ಅಗತ್ಯ ಸೇವೆಗಳ ವಾಹನಗಳು ಜನದಟ್ಟಣೆಯಲ್ಲಿ ಸಿಕ್ಕಿ ಬಿದ್ದ ಉದಾಹರಣೆಗಳಿವೆ ಎಂದು ದೂರಿನಲ್ಲಿ ಹೇಳಿದ್ದಾರೆ. ಎಲ್ಲರಿಗೂ ತಮ್ಮದೇ ಆದ ಧರ್ಮಗಳನ್ನು ಆಚರಿಸುವ ಹಕ್ಕಿದೆ. ಆದರೆ, ಸಾರ್ವಜನಿಕ ಸುವ್ಯವಸ್ಥೆ ಮತ್ತು ಸಂಚಾರಕ್ಕೆ ಅಡ್ಡಿಯಾಗದಂತೆ ನಡೆದುಕೊಳ್ಳಬೇಕು. ಹೀಗಾಗಿ, ಯಾವುದೇ ಧಾರ್ಮಿಕ ಚಟುವಟಿಕೆಗಳನ್ನು ನಿರ್ದಿಷ್ಟ ಜಾಗ ಹಾಗೂ ಖಾಸಗಿ ಸ್ಥಳಗಳಲ್ಲಿ ಕೈಗೊಳ್ಳುವಂತೆ ಪೊಲೀಸರು ಕ್ರಮ ಜರುಗಿಸಬೇಕು ಎಂದು ಕರ್ನೈಲ್ ಸಿಂಗ್ ಒತ್ತಾಯಿಸಿದ್ದಾರೆ. 2025 ರ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಎಎಪಿ ಸರ್ಕಾರದಲ್ಲಿ ಆರೋಗ್ಯ ಸಚಿವರಾಗಿದ್ದ ಸತ್ಯೇಂದ್ರ ಜೈನ್ ಅವರನ್ನು 20 ಸಾವಿರ ಮತಗಳ ಅಂತರದಲ್ಲಿ ಸಿಂಗ್ ಪರಾಭವಗೊಳಿಸಿದ್ದರು.



## ಸಿಎಂ ನಿತೀಶ್‌ಕುಮಾರ್ ವಿರುದ್ಧ ದೂರು



**ಬೇಗುಸರಾಯ್:** ಬಲ್ಲಿಯಾ ಪೊಲೀಸ್ ಠಾಣೆಯ ಭಗತ್‌ಪುರ ನಿವಾಸಿ ಮಹೇಶ್ ಪಾಸ್ವಾನ್ ಎಂಬುವರ ಪುತ್ರ ವಿಕಾಸ್ ಪಾಸ್ವಾನ್ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ವಿರುದ್ಧ ಬಿಹಾರದ ಬೇಗುಸರಾಯ್ ಜಿಲ್ಲಾ ನ್ಯಾಯಾಲಯದ ಮುಖ್ಯ ನ್ಯಾಯಿಕ ಮ್ಯಾಜಿಸ್ಟ್ರೇಟ್ ಕವಿತಾ ಕುಮಾರಿ ಅವರಿಗೆ ದೂರಿನ ಪತ್ರ ನೀಡಿದ್ದಾರೆ. ಮಂಗಳವಾರ ಅಧಿಕೃತ ಮ್ಯಾಜಿಸ್ಟ್ರೇಟ್ ರಜೆಯಲ್ಲಿರುವ ಕಾರಣ ಉಸ್ತುವಾರಿ ವಹಿಸಿದ್ದ ಪ್ರಥಮ ದರ್ಜೆ ಮ್ಯಾಜಿಸ್ಟ್ರೇಟ್ ಮಯಾಂಕ್ ಪಾಂಡೆ ಅವರಿಗೆ ಈ ದೂರು ಸಲ್ಲಿಕೆ ಮಾಡಲಾಗಿದೆ. ಈ ದೂರನ್ನು ನ್ಯಾಯಾಧೀಶರು ಸ್ವೀಕರಿಸಿದ್ದಾರೆ ಎಂದು ದೂರು ನೀಡಿದ ವಕೀಲರು ತಿಳಿಸಿದ್ದಾರೆ.

ವಾಸ್ತವವಾಗಿ ಪಾಟ್ನಾದಲ್ಲಿ ನಡೆದ ಸೆಪಕ್ ಟಕ್ರಾ (ಕಿಕ್ ವಾಲಿಬಾಲ್) ವಿಶ್ವಕಪ್ ಉದ್ಘಾಟನಾ ಸಮಾರಂಭದಲ್ಲಿ ರಾಷ್ಟ್ರಗೀತೆಯ ಸಂದರ್ಭದಲ್ಲಿ, ಮುಖ್ಯಮಂತ್ರಿ ನಿತೀಶ್ ಕುಮಾರ್ ಸೇರಿದಂತೆ ಅನೇಕ ಆಟಗಾರರು ಮತ್ತು ಅಧಿಕಾರಿಗಳು ಭಾಗಿಯಾಗಿದ್ದರು. ಮುಖ್ಯಮಂತ್ರಿಗಳು ಪತ್ರಕರ್ತರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಲು ಪ್ರಾರಂಭಿಸಿದಾಗ ರಾಷ್ಟ್ರಗೀತೆ ಹಾಡಲಾಯಿತು. ಈ ವೇಳೆ ಅವರು ನಗುತ್ತಾ ಹಿರಿಯ ಅಧಿಕಾರಿಗೆ ಸನ್ನೆ ಮಾಡಿ ನಕ್ಕಿದ್ದಾರೆ. ಇದು ರಾಷ್ಟ್ರಗೀತೆಗೆ ಮಾಡಿದ ಅವಮಾನ ಎಂದು ಆರೋಪಿಸಿ ಬೇಗುಸರಾಯ್‌ನ ಬಲ್ಲಿಯಾ ನಿವಾಸಿ ಅಡ್ವೋಕೇಟ್ ವಿಕಾಸ್ ಪಾಸ್ವಾನ್ ಈ ದೂರು ದಾಖಲಿಸಿದ್ದಾರೆ.

ಪಾಟ್ನಾದಲ್ಲಿ ನಡೆದ ಉದ್ಘಾಟನಾ ಕಾರ್ಯಕ್ರಮದ ವೇಳೆ ಮುಖ್ಯಮಂತ್ರಿ ನಿತೀಶ್ ಕುಮಾರ್ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು ಎಂದು ಪ್ರಕರಣದ ದೂರುದಾರ ಮತ್ತು ವಕೀಲ ವಿಕಾಸ್ ಕುಮಾರ್ ಹೇಳಿದ್ದಾರೆ. ಇದೇ ವೇಳೆ, ರಾಷ್ಟ್ರಗೀತೆ ಹಾಡುವಾಗ ಅವರು ವಿಚಿತ್ರವಾಗಿ ನಡೆದುಕೊಂಡಿದ್ದಾರೆ. ಈ ರೀತಿಯ ವರ್ತನೆ ಭಾರತದ ಸಂವಿಧಾನ ಮತ್ತು ರಾಷ್ಟ್ರಗೀತೆಯ ನಿಯಮಗಳಿಗೆ ವಿರುದ್ಧವಾಗಿದೆ ಎಂದು ಅವರು ದೂರಿನಲ್ಲಿ ವಿವರಿಸಿದ್ದಾರೆ.

## ಕೇಂದ್ರದ ವಿರುದ್ಧ ಸೋನಿಯಾ ಆಕ್ಷೇಪ



**ನವದೆಹಲಿ:** ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ (ಪಿಎಂಎಂವಿವೈ)ಗೆ ಅನುದಾನದ ಕೊರತೆ ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ (ಎನ್ ಎಫ್‌ಎಸ್‌ಎ) 2013ರ ಅಡಿ ಹೆರಿಗೆ ಸೌಲಭ್ಯಗಳನ್ನು ನೀಡದಿರುವ ಬಗ್ಗೆ ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಮತ್ತು ರಾಜ್ಯಸಭಾ ಸಂಸದೆ ಸೋನಿಯಾ ಗಾಂಧಿ ಬುಧವಾರ ರಾಜ್ಯಸಭೆಯಲ್ಲಿ ಕಳವಳ ವ್ಯಕ್ತಪಡಿಸಿದರು.

ರಾಜ್ಯಸಭೆಯಲ್ಲಿ ಶೂನ್ಯ ವೇಳೆಯಲ್ಲಿ ಮಾತನಾಡಿದ ಸೋನಿಯಾ ಗಾಂಧಿ, ಮಾಜಿ ಪ್ರಧಾನಿ ದಿವಂಗತ ಡಾ. ಮನಮೋಹನ್ ಸಿಂಗ್ ಅವರ ನೇತೃತ್ವದಲ್ಲಿ ಜಾರಿಗೆ ಬಂದ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯು ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಯೋಜನೆಯ ಅಡಿಪಾಯವಾಗಿದೆ ಎಂದು ಹೇಳಿದರು. ಈ ಕಾಯ್ದೆಯು ಅನೌಪಚಾರಿಕ ವಲಯದ ಗರ್ಭಿಣಿಯರಿಗೆ ಪ್ರತಿ ಮಗುವಿಗೆ 6,000 ರೂ.ಗಳ ಹೆರಿಗೆ ಅನುದಾನವನ್ನು ಒಳಗೊಂಡಿದೆ. ಆದರೆ ಈ ನಿಬಂಧನೆಯನ್ನು ಪೂರೈಸಲು 2017 ರಲ್ಲಿ ಪ್ರಾರಂಭಿಸಲಾದ ಮಾತೃ ವಂದನಾ ಯೋಜನೆಯಡಿ ಮೊದಲ ಮಗುವಿಗೆ ಮಾತ್ರ ಕೇವಲ 5,000 ರೂ.ಗಳನ್ನು ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಮೊದಲ ಮಗು ಹೆಣ್ಣಾಗಿದ್ದರೆ ಮಾತ್ರ ಈ ಯೋಜನೆಯನ್ನು ಎರಡನೇ ಮಗುವಿಗೆ ವಿಸ್ತರಿಸಲಾಗುತ್ತದೆ ಎಂದು ಸೋನಿಯಾ ಗಾಂಧಿ ಗಮನಸೆಳೆದರು. 2022-23ರ ವಿಶ್ಲೇಷಣೆ ಉಲ್ಲೇಖಿಸಿದ ಸೋನಿಯಾ ಗಾಂಧಿ, ಸರಿಸುಮಾರು 68 ಪ್ರತಿಶತದಷ್ಟು ಗರ್ಭಿಣಿಯರು ತಮ್ಮ ಮೊದಲ ಮಗುವಿಗೆ ಪಿಎಂಎಂವಿವೈ ಅಡಿ ಕನಿಷ್ಠ ಒಂದು ಕಂತನ್ನು ಪಡೆದಿದ್ದಾರೆ. ಆದರೆ, ಅದರ ಮುಂದಿನ ವರ್ಷದಲ್ಲಿ ಈ ಸಂಖ್ಯೆ ಕೇವಲ 12 ಪ್ರತಿಶತಕ್ಕೆ ಇಳಿದಿರುವುದು ಏಕೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಹೀಗಾಗಲು ಅವಕಾಶ ನೀಡಿದ್ದು ಯಾಕೆ ಎಂದು ನಾನು ಕೇಂದ್ರ ಸರ್ಕಾರವನ್ನು ಕೇಳಲು ಬಯಸುತ್ತೇನೆ ಎಂದು ಸೋನಿಯಾ ಗಾಂಧಿ ಹೇಳಿದರು. ಹೆರಿಗೆ ಸೌಲಭ್ಯ ನಿಬಂಧನೆಗಳನ್ನು ಸಂಪೂರ್ಣವಾಗಿ ಜಾರಿಗೆ ತರಲು ಸುಮಾರು 12,000 ಕೋಟಿ ರೂ.ಗಳ ವಾರ್ಷಿಕ ಬಜೆಟ್ ಅಗತ್ಯವಿದೆ ಎಂದು ಅವರು ನುಡಿದರು. ಬಜೆಟ್ ದಾಖಲೆಗಳಲ್ಲಿ ಪಿಎಂಎಂವಿವೈಗೆ ಅನುದಾನ ಹಂಚಿಕೆಯ ಬಗ್ಗೆ ನಿರ್ದಿಷ್ಟ ಮಾಹಿತಿಯನ್ನು ನೀಡದಿರುವ ಬಗ್ಗೆ ಬಗ್ಗೆಯೂ ಅವರು ಕಳವಳ ವ್ಯಕ್ತಪಡಿಸಿದರು.

## ವಿದೇಶಿ ಕಾರುಗಳ ಮೇಲೆ ಶೇ.25 ಸುಂಕ: ಟ್ರಂಪ್ ಮತ್ತೆ ಹೊಸ ಬಾಂಬ್

**ವಾಷಿಂಗ್ಟನ್:** ಅಮೆರಿಕಕ್ಕೆ ಆಮದು ಮಾಡಿಕೊಳ್ಳುವ ಎಲ್ಲಾ ವಿದೇಶಿ ಕಾರು ಹಾಗೂ ಇತರೇ ವಾಹನಗಳ ಮೇಲೆ ಶೇ.25 ರಷ್ಟು ಸುಂಕ ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಣೆ ಮಾಡಿದ್ದಾರೆ. ಅಲ್ಲದೇ ಈ ಸುಂಕ ನಿರ್ಧಾರ ಶಾಶ್ವತವಾಗಿರಲಿದೆ ಎಂದೂ ಸ್ಪಷ್ಟಪಡಿಸಿದ್ದಾರೆ. ಓವಲ್ ಕಚೇರಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಟ್ರಂಪ್, ಅಮೆರಿಕಕ್ಕೆ ಆಮದು ಮಾಡಿಕೊಳ್ಳುವ ಎಲ್ಲಾ ಕಾರು, ವಾಹನಗಳ ಮೇಲೆ 25% ಸುಂಕ ವಿಧಿಸಲಾಗುತ್ತದೆ. ಅಮೆರಿಕದಲ್ಲೇ ತಯಾರು ಮಾಡಿದ್ರೆ, ಅದಕ್ಕೆ ಯಾವುದೇ ಸುಂಕ ವಿಧಿಸುವುದಿಲ್ಲ ಎಂದು ಟ್ರಂಪ್ ಹೇಳಿದ್ದಾರೆ. ಏಪ್ರಿಲ್ 2ರಿಂದ ಸುಂಕ ನೀತಿ ಜಾರಿಯಾಗಲಿದ್ದು, ಏಪ್ರಿಲ್ 3ರಿಂದ ಸಂಗ್ರಹ ಪ್ರಾರಂಭವಾಗಲಿದೆ. ಅಮೆರಿಕದ ಈ ನೀತಿಯು ದೇಶಿಯ ಉತ್ಪಾದನೆಯನ್ನು ಉತ್ತೇಜಿಸುತ್ತದೆ. ಜೊತೆಗೆ ವಾಹನ ತಯಾರಕರ ಪೂರೈಕೆ ಸರಪಳಿ ಅಭಿವೃದ್ಧಿಗೂ ಪೂರಕವಾಗಲಿದೆ ಎಂದು ಹೇಳಿದ್ದಾರೆ. ಆದ್ರೆ ಟ್ರಂಪ್ ಅವರ ಈ ನಿರ್ಧಾರದಿಂದ ಅಮೆರಿಕದ ಗ್ರಾಹಕರು ಹಣದುಬ್ಬರ ಎದುರಿಸಬೇಕಾಗುತ್ತದೆ ಎಂದು ಆರ್ಥಿಕ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

**ಟ್ರಂಪ್ ನಿರ್ಧಾರದಲ್ಲಿ ಮಸ್ಕ್ ಪಾತ್ರ ಇದೆಯೇ?:** ಟ್ರಂಪ್ ಅವರ ಈ ನಿರ್ಧಾರದ ಹಿಂದೆ ಟೆಸ್ಲಾ ಸಿಇಒ ಎಲಾನ್ ಮಸ್ಕ್ (ಇಟಆಟಿ ಒಣಇ) ಪಾತ್ರ ಇದೆಯೇ ಎನ್ನುವ ವದಂತಿ ಕೇಳಿಬರುತ್ತಿದ್ದಂತೆ, ಆ ರೀತಿ ಯಾವುದೇ ಪಾತ್ರ ಇಲ್ಲ ಎಂದು ಟ್ರಂಪ್ ಸ್ಪಷ್ಟಪಡಿಸಿದ್ದಾರೆ. ಸುಂಕದ ಬಗ್ಗೆ ಮಸ್ಕ್ ಯಾವುದೇ ಸಲಹೆ ನೀಡಿಲ್ಲ ಎಂದು ಹೇಳಿದ್ದಾರೆ. ಈ ನೀತಿಯನ್ನು ಪ್ರಮುಖ ವಾಹನ ತಯಾರಕರೊಂದಿಗೆ ಚರ್ಚಿಸಿದ್ದೇನೆ ಮತ್ತು ಈ ಸುಂಕಗಳು ಒಟ್ಟಾರೆಯಾಗಿ ಸಮತೋಲಿತವಾಗಿರುತ್ತವೆ. ಟೆಸ್ಲಾಗೂ ಇದು ಪ್ರಯೋಜನಕಾರಿಯಾಗಬಹುದು ಎಂದಿದ್ದಾರೆ.

## ಮಾತನಾಡಲು ಸ್ಪೀಕರ್ ಅವಕಾಶವನ್ನೇ ಕೊಡುತ್ತಿಲ್ಲ: ಕೈ ನಾಯಕ ರಾಹುಲ್ ಗಾಂಧಿ



**ಹೊಸದಿಲ್ಲಿ:** ಸರಕಾರವು ಪ್ರತಿಪಕ್ಷದ ಧ್ವನಿಯನ್ನು ಹತ್ತಿಕ್ಕುತ್ತಿದೆ ಎಂದು ಲೋಕಸಭೆಯ ಪ್ರತಿಪಕ್ಷ ನಾಯಕ ಹಾಗೂ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಬುಧವಾರ ಆರೋಪಿಸಿದ್ದಾರೆ. ಹಲವು ದಿನಗಳಿಂದ ಸಂಸತ್ ನಲ್ಲಿ ಮಾತನಾಡಲು ತನಗೆ ಅವಕಾಶ ನೀಡಲಾಗಿಲ್ಲ ಎಂದು ಅವರು ಹೇಳಿದ್ದಾರೆ. ''ಏನು ನಡೆಯುತ್ತಿದೆ ಎನ್ನುವುದು ನನಗೆ ಗೊತ್ತಾಗುತ್ತಿಲ್ಲ. ನನಗೆ ಮಾತನಾಡಲು ಅವಕಾಶ ಕೊಡಿ ಎಂದು ನಾನು ಸ್ಪೀಕರ್ ಗೆ ಮನವಿ ಮಾಡಿದ್ದೇನೆ. ಆದರೆ, ಅವರು ಓಡಿಹೋಗುತ್ತಿದ್ದಾರೆ. ಇದು ಸದನವನ್ನು ನಡೆಸುವ ರೀತಿಯಲ್ಲ. ಈ ವಿಷಯದ ಬಗ್ಗೆ ನಾನು ಮಾತನಾಡಿದಾಗಲೆಲ್ಲ ಸ್ಪೀಕರ್ ನುಣುಚಿಕೊಳ್ಳುತ್ತಾರೆ. ಅವರು ನನಗೆ ಮಾತನಾಡಲು ಅವಕಾಶ ನೀಡಿಲ್ಲ. ಅವರು ಸಾಬೀತಾಗದ ಏನನ್ನೋ ನನ್ನ ಬಗ್ಗೆ ಹೇಳಿದ್ದಾರೆ ಮತ್ತು ಸದನವನ್ನು ಮುಂದೂಡಿದ್ದಾರೆ. ಅದರ ಅಗತ್ಯವಿರಲಿಲ್ಲ'' ಎಂದು ಸಂಸತ್ ನ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ರಾಹುಲ್ ಗಾಂಧಿ ಹೇಳಿದರು. ಬುಧವಾರ ಲೋಕಸಭೆಯಲ್ಲಿ ಮಾತನಾಡಲು ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಎದ್ದು ನಿಂತಾಗ ಸ್ಪೀಕರ್ ಹಠಾತ್ತನೆ ಸದನವನ್ನು ಮುಂದೂಡಿದರು. ''ಪ್ರತಿಪಕ್ಷ ನಾಯಕರಿಗೆ ಮಾತನಾಡಲು ಅವಕಾಶ ನೀಡುವ ಸಂಪ್ರದಾಯವಿದೆ. ಆದರೆ, ಮಾತನಾಡಲು ನಾನು ಎದ್ದು ನಿಲ್ಲುವಾಗಲೆಲ್ಲ ನನಗೆ ಅನುಮತಿ ನಿರಾಕರಿಸಲಾಗುತ್ತಿದೆ. ಸದನವು ಹೇಗೆ ಕಾರ್ಯನಿರ್ವಹಿಸುತ್ತಿದೆ ಎಂದು ನನಗೆ ಗೊತ್ತಿಲ್ಲ, ನಮಗೆ ಏನನ್ನು ಹೇಳಬೇಕಾಗಿದೆಯೋ ಅದನ್ನು ಹೇಳಲು ಅವಕಾಶ ನೀಡಲಾಗುತ್ತಿಲ್ಲ'' ಎಂದು ಕಾಂಗ್ರೆಸ್ ಸಂಸದ ನುಡಿದರು.

## ಯೂನುಸ್ ವಿರುದ ಶೀಘ್ರವೇ ಕ್ರಾಂತಿ ಬಾಂಗ್ಲಾದಲ್ಲಿ ಸೇನೆಗೆ ಕೈಗೆ ಅಧಿಕಾರ?

**ಢಾಕಾ:** ಶೇಖ್ ಹಸೀನಾ ವಿರುದ್ಧ ದಂಗೆ ರೂಪಿಸಿ ಅಧಿಕಾರಕ್ಕೇರಿದ ಮೊಹಮ್ಮದ್ ಯೂನುಸ್‌ಗೂ ಇದೀಗ ಅದೇ ರೀತಿಯ ಸಂಕಷ್ಟ ಎದುರಾಗುವ ಸರ್ವ ಸಾಧ್ಯತೆಯಿದೆ. ಬಾಂಗ್ಲಾದೇಶದಲ್ಲಿ ಮತ್ತೊಂದು ರಾಜಕೀಯ ದಂಗೆ ನಡೆಬಹುದು. ಯೂನುಸ್ ವಿರುದ್ಧವೂ ಕ್ರಾಂತಿ ನಡೆಯಬಹುದು ಎಂದು ಹೇಳಲಾಗುತ್ತಿದೆ. ಹೀಗಾಗಿ ಬಾಂಗ್ಲಾ ಸೇನೆಯ ಉನ್ನತಾಧಿಕಾರಿಗಳು ತುರ್ತು ಸಭೆ ನಡೆಸಿದ್ದಾರೆ. ಯೂನುಸ್ ಸರ್ಕಾರದ ಜವಾಬ್ದಾರಿ ವಹಿಸಿಕೊಂಡ ದಿನದಿಂದ ಬಾಂಗ್ಲಾ ಪ್ರಜೆಗಳಲ್ಲಿ ಅಶಾಂತಿ, ಅಪನಂಬಿಕೆ ಹೆಚ್ಚಿದೆ. ಇದು ಮುಂದಿನ ದಿನಗಳಲ್ಲಿ ತೀವ್ರ ಪರಿಣಾಮಗಳಿಗೆ ಎಡೆ ಮಾಡಿಕೊಡಬಹುದು. ದಂಗೆಯೂ ನಡೆಬಹುದು ಎಂಬ ಆತಂಕ ವ್ಯಕ್ತವಾಗಿದೆ. ಮಾಧ್ಯಮಗಳಲ್ಲಿ ಪ್ರಕಟವಾದ ವರದಿ ಪ್ರಕಾರ ಸೇನೆಯು ಮುಹಮ್ಮದ್ ಯೂನುಸ್ ಅವರನ್ನು ಪದಚ್ಯುತಗೊಳಿಸುವ ಮೂಲಕ ಅಧಿಕಾರವನ್ನು ವಶಪಡಿಸಿಕೊಳ್ಳಲಿದೆ. ಈ ಸಂಬಂಧ ಕೆಲ ದಿನಗಳ ಹಿಂದೆ ಬಾಂಗ್ಲಾದೇಶ ಸೇನೆಯ ಪ್ರಮುಖ ತುರ್ತು ಸಭೆ ನಡೆದಿದೆ. ಈ ಸಭೆಯಲ್ಲಿ ಐದು ಲೆಫ್ಟಿನೆಂಟ್ ಜನರಲ್‌ಗಳು, ಎಂಟು ಮೇಜರ್ ಜನರಲ್‌ಗಳು, ಸ್ವತಂತ್ರ ಬ್ರಿಗೇಡ್‌ಗಳ ಕಮಾಂಡಿಂಗ್ ಅಧಿಕಾರಿಗಳು ಮತ್ತು ಸೇನಾ ಪ್ರಧಾನ ಕಚೇರಿಯ ಇತರ ಪ್ರಮುಖ ಅಧಿಕಾರಿಗಳು ಭಾಗವಹಿಸಿದ್ದರು. ಇತ್ತೀಚಿನ ದಿನಗಳಲ್ಲಿ ಬಾಂಗ್ಲಾ ರಾಜಧಾನಿ ಢಾಕಾದಲ್ಲಿ ಬೀದಿಗಳಲ್ಲಿ ಸೇನಾ ವಾಹನಗಳು ಹೆಚ್ಚಿನ ಪ್ರಮಾಣದಲ್ಲಿ ಗಸ್ತು ತಿರುಗುತ್ತಿವೆ.

## ಭಾರತದಾದ್ಯಂತ UPI ಸೇವೆ ಸ್ಥಗಿತ




**ನವದೆಹಲಿ:** ದೇಶಾದ್ಯಂತ ಹಲವಾರು ಬಳಕೆದಾರರಿಗೆ ಅಪ್ಲಿಕೇಶನ್ ಗಳಾದ್ಯಂತ ಏಕೀಕೃತ ಪಾವತಿ ಇಂಟರ್ಫೇಸ್ (UPI) ಸೇವೆಗಳು ಸ್ಥಗಿತಗೊಂಡಿವೆ. ಡೌನ್‌ಡೆಕ್ಟರ್ ಪ್ರಕಾರ, ಸಂಜೆ 7:50 ರ ಹೊತ್ತಿಗೆ UPI ಸ್ನ್ಯಾಗ್‌ಗೆ ಸಂಬಂಧಿಸಿದಂತೆ 2,750 ದೂರುಗಳು ಬಂದಿವೆ.

ವೆಬ್‌ಸೈಟ್ ಪ್ರಕಾರ Google Pay ಬಳಕೆದಾರರಿಂದ 296 ದೂರುಗಳು ಬಂದಿವೆ.ಅದೇ ರೀತಿ, Paytm ಅಪ್ಲಿಕೇಶನ್‌ಗೆ ಸಂಬಂಧಿಸಿದಂತೆ 119 ದೂರುಗಳು ಬಂದಿದ್ದರೆ, 376 ಬಳಕೆದಾರರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಪ್ಲಾಟ್‌ಫಾರ್ಮ್‌ನಲ್ಲಿನ ಸ್ಥಗಿತದ ಬಗ್ಗೆ ದೂರು ನೀಡಿದ್ದಾರೆ. ಹೆಚ್ಚಿನ SBI ಬಳಕೆದಾರರು ಹಣ ವರ್ಗಾವಣೆ ಮತ್ತು ಆನ್ ಲೈನ್ ಬ್ಯಾಂಕಿಂಗ್ ಸೇವೆಗಳ ಮೇಲೆ ಪರಿಣಾಮ ಬೀರುವ ಬಗ್ಗೆ ದೂರು ನೀಡಿದ್ದಾರೆ.

''ನನ್ನ ಜೀವನದಲ್ಲಿ ಮೊದಲ ಬಾರಿಗೆ ನಾನು UPI ಡೌನ್‌ಟೈಮ್ ಅನ್ನು ಅನುಭವಿಸಿದ್ದೇನೆ. ಬ್ಯಾಂಕ್‌ಗಳು ಅಥವಾ ಗೇಟ್‌ವೇಗಳಲ್ಲ, ಆದರೆ @UPI_NPCI ಸ್ವತಃ btw, ಅಪ್‌ಟೈಮ್ ಫೆಬ್ರವರಿಯಲ್ಲಿ 100% ಆಗಿತ್ತು'' ಎಂದು X ಬಳಕೆದಾರರು ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ಪೋಸ್ಟ್ ಮಾಡಿದ್ದಾರೆ. ಮತ್ತೊಬ್ಬ ಬಳಕೆದಾರರು Xನಲ್ಲಿ ಪೋಸ್ಟ್ ಮಾಡಿದ್ದಾರೆ, ''ಇದು ಏನು ಅಸಂಬದ್ಧ. UPI ಕಾರ್ಯನಿರ್ವಹಿಸುತ್ತಿಲ್ಲ. ನನ್ನ ಹಣವನ್ನು ಡೆಬಿಟ್ ಮಾಡಲಾಗಿದೆ ಆದರೆ ನನ್ನ ಸ್ನೇಹಿತ ಖಾತೆ ಗಕಖಟಕಅಖ ಗೆ ಜಮಾ ಮಾಡಲಾಗಿಲ್ಲ.'' ''ಈಗ upi ನಲ್ಲಿ ಏನಾದರೂ ಸಮಸ್ಯೆ ಇದೆಯೇ? ನಾನು Google pay, phone pe, paytm ಮೂಲಕ ಪಾವತಿಗಳನ್ನು ಪ್ರಯತ್ನಿಸಿದೆ, ಆದರೆ ಪಾವತಿಗಳು ವಿಫಲವಾಗುತ್ತಿವೆ'' ಎಂದು ಬಳಕೆದಾರರು ಪೋಸ್ಟ್ ಮಾಡಿದ್ದಾರೆ.ಜನವರಿಯಲ್ಲಿ ಯುಪಿಐ ವಹಿವಾಟುಗಳು 16.99 ಬಿಲಿಯನ್ ದಾಟಿವೆ. ಜನವರಿಯಲ್ಲಿ ಯುಪಿಐ ವಹಿವಾಟುಗಳು 16.99 ಬಿಲಿಯನ್ ದಾಟಿವೆ ಮತ್ತು ಮೌಲ್ಯವು 23.48 ಲಕ್ಷ ಕೋಟಿ ಮೀರಿದೆ, ಇದು ಯಾವುದೇ ತಿಂಗಳಲ್ಲಿ ದಾಖಲಾದ ಅತ್ಯಧಿಕ ಸಂಖ್ಯೆಯಾಗಿದೆ ಎಂದು ಹಣಕಾಸು ಸಚಿವಾಲಯ ಗುರುವಾರ ತಿಳಿಸಿದೆ.

2023-24ರಲ್ಲಿ, ಡಿಜಿಟಲ್ ಪಾವತಿಗಳ ಭೂದೃಶ್ಯವು ಗಮನಾರ್ಹ ವಿಸ್ತರಣೆಯನ್ನು ಪ್ರದರ್ಶಿಸಿದೆ ಎಂದು ಹಣಕಾಸು ಸಚಿವಾಲಯವನ್ನು ಉಲ್ಲೇಖಿಸಿ ಪಿಟಿಐ ತಿಳಿಸಿದೆ.

## ಹಮಾಸ್ ವಿರುದ್ಧ ಪ್ರತಿಭಟನೆಗಿಳಿದ ಪ್ಯಾಲೆಸ್ಟೈನಿಯನ್ ಜನ

**ಟೆಲ್ ಅವಿವ್:** ಇಸ್ರೇಲ್ ಮತ್ತು ಹಮಾಸ್ ಉಗ್ರರ ನಡುವೆ ನಡೆಯುತ್ತಿರುವ ಯುದ್ಧವು ಸಾವಿರಾರು ಜನರನ್ನು ಬಲಿ ತೆಗೆದುಕೊಂಡಿದೆ. ಕೆಲ ದಿನಗಳ ಹಿಂದಷ್ಟೇ ಎರಡೂ ರಾಷ್ಟ್ರಗಳು ತಾತ್ಕಾಲಿಕ ಕದನ ವಿರಾಮ ಘೋಷಿಸಿದ್ದವು. ಅದರ ಮಾತುಕತೆಗಳು ಮುಂದುವರಿಯದ ಕಾರಣ, ಮತ್ತೆ ಯುದ್ಧ ಆರಂಭವಾಗಿದೆ. ಇಸ್ರೇಲ್ ಗಾಜಾ ಪಟ್ಟಿಯಲ್ಲಿ ಮತ್ತೆ ಮಾರಣಹೋಮ ಆರಂಭಿಸಿದೆ.

ಇದರಿಂದ ತೀವ್ರ ಆಕ್ರೋಶಕ್ಕೀಡಾಗಿರುವ ಪ್ಯಾಲೆಸ್ಟೈನಿಯನ್ನರು, ಗಾಜಾ ಪಟ್ಟಿಯಲ್ಲಿ ಹಮಾಸ್ ಉಗ್ರರ ವಿರುದ್ಧವೇ ತಿರುಗಿಬಿದ್ದಿದ್ದಾರೆ. ಯುದ್ಧ ಮರು ಆರಂಭವಾಗಿದ್ದಕ್ಕೆ ತೀವ್ರ ಕ್ರೋಧಗೊಂಡು ಕದನ ನಿಲ್ಲಿಸಲು ಆಗ್ರಹಿಸಿ ಪ್ರತಿಭಟನೆ ಆರಂಭಿಸಿದ್ದಾರೆ.

ಹಮಾಸ್ ಉಗ್ರರ ವಿರುದ್ಧದ ಬರಹಗಳುಳ್ಳ ಫಲಕಗಳನ್ನು ಪ್ರದರ್ಶಿಸುತ್ತಾ, ಯುದ್ಧ ನಿಲ್ಲಿಸಲು ಜನರು ಆಗ್ರಹಿಸುತ್ತಿದ್ದಾರೆ. ನೂರಾರು ಪ್ಯಾಲೆಸ್ಟೈನಿಯನ್ನರು ಹಮಾಸ್? ವಿರುದ್ಧ ಘೋಷಣೆ ಕೂಗುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ವಿಡಿಯೋ ಒಂದರಲ್ಲಿ ಕಾಣುವಂತೆ, ಜನರು ಯುದ್ಧ ಬಯಸುತ್ತಿಲ್ಲ. ನಮಗೆ ಹಮಾಸ್ ಬೇಡ, ಅಲ್ ಜಜೀರಾ ಬೇಡ. ನಮ್ಮ ಪ್ರಾಣ ಉಳಿದರೆ ಸಾಕು ಎಂದು ಘೋಷಣೆ ಕೂಗುತ್ತಿರುವುದು ಇದೆ. ಹಮಾಸ್? ಮತ್ತು ಇಸ್ರೇಲ್? ನಡುವೆ ಯುದ್ಧ ಆರಂಭಗೊಂಡ 17 ತಿಂಗಳು ಗತಿಸಿದ್ದು, ಅಪಾರ ಸಾವು - ನೋವು ಸಂಭವಿಸಿದೆ. ಆದರೆ, ಈಗ ಹಮಾಸ್ ವಿರುದ್ಧವೇ ಜನರು ಆಕ್ರೋಶ ಹೊರಹಾಕುತ್ತಿದ್ದಾರೆ.

ಗಾಜಾಪಟ್ಟಿಯ ಬೀಟ್? ಲಹಿಯಾ ನಗರದಲ್ಲಿ ಮಂಗಳವಾರ ನಡೆದ ಯುದ್ಧ ವಿರೋಧಿ ಪ್ರತಿಭಟನೆಯಲ್ಲಿ ಜನರು ರಸ್ತೆಗಳಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದರು. ಯುದ್ಧ ನಿಲ್ಲಿಸಿ, ನಾವು ಸಾಯಲು ಬಯಸುವುದಿಲ್ಲ, ನಮ್ಮ ಮಕ್ಕಳ ರಕ್ತ ಚೆಲ್ಲಲು ಬಿಡುವುದಿಲ್ಲ ಎಂದು ಬರಹಗಳಿರುವ ಭಿತ್ತಿಪತ್ರಗಳನ್ನು ಪ್ರತಿಭಟನಾಕಾರರು ಹಿಡಿದಿದ್ದರು.

## ಟ್ರಂಪ್ ಪತ್ನಿಯ ವೆಡ್ಡಿಂಗ್ ಗೌನ್ ಹರಾಜಿಗೆ?



**ವಾಷಿಂಗ್ಟನ್:** 2010ರಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಿವಾಹ ಮೆಲಾನಿಯಾ ಟ್ರಂಪ್ ಅವರೊಂದಿಗೆ ನಡೆದಿತ್ತು. ಆ ಸಂದರ್ಭದಲ್ಲಿ ?ಕ್ರಿಶ್ಚಿಯನ್ ಡಿಯೋರ್? ಎಂಬ ಖ್ಯಾತ ಫ್ಯಾಶನ್ ಡಿಸೈನರ್ ತಯಾರಿಸಿದ ಮದುವೆಯ ಡ್ರೆಸ್‌ನಲ್ಲಿ ಮೆಲಾನಿಯಾ ಕಂಗೊಳಿಸಿದ್ದರು. ಈಗ ಅದೇ ರೀತಿಯ ಡ್ರೆಸ್ ಅನ್ನು ಒಬ್ಬರು ಆನ್‌ಲೈನ್‌ನಲ್ಲಿ ಹರಾಜಿಗಿಟ್ಟಿದ್ದು, ಇದರ ಬೆಲೆ ನೋಡಿದರೆ ನೀವು ಹುಬ್ಬೇರಿಸುವುದು ಗ್ಯಾರಂಟಿ. ಈ ಸಂಗತಿ ಇದೀಗ ಸಾಮಾಜಿಕ ಜಾಲತಾಣದಲ್ಲಿ ಭಾರೀ ವೈರಲ್ ಆಗುತ್ತಿದೆ.

ಅಮೆರಿಕದಲ್ಲಿ ಜನರು ಅತಿ ಹೆಚ್ಚಾಗಿ ಬಳಸುವ ಇಬೇ ಪ್ಲಾಟ್ ಫಾರ್ಮ್‌ನಲ್ಲಿ, Svjabc1 ಎಂಬ ಅಕೌಂಟ್‌ನಿಂದ ಈ ಡ್ರೆಸ್ ಹರಾಜಿಗೆ ಹಾಕಲಾಗಿದೆ. ಮೆಲಾನಿಯಾ ಅವರು 20 ವರ್ಷಗಳ ಹಿಂದೆ ಖರೀದಿಸಿದ್ದ ಈ ಡ್ರೆಸ್ ಅನ್ನು ಮದುವೆಯ ಗೌನ್ ಆಗಿಯೂ ಬಳಸಿದ್ದರು ಎಂದು ಆ ವ್ಯಕ್ತಿ ಹೇಳಿಕೊಂಡಿದ್ದಾನೆ. ಇಬೇ ಮಾರಾಟಗಾರರ ಪ್ರಕಾರ ಈ ಡ್ರೆಸ್‌ನ ಆರಂಭಿಕ ಬೆಲೆ 45,000 ಡಾಲರ್, ಎಂದರೆ ಭಾರತೀಯ ರೂಪಾಯಿಗಳಲ್ಲಿ 38.5 ಲಕ್ಷ. ಹರಾಜಿನ ವೇಳೆ ಈ ಮೊತ್ತ ಎಷ್ಟು ಬೇಕಾದರೂ ಏರಬಹುದು ಎಂದು ಅವರು ಅಂದಾಜಿಸಿದ್ದಾರೆ.

ಕೆಲವು ವರದಿಗಳ ಪ್ರಕಾರ, ಮೆಲಾನಿಯಾ ಈ ಡ್ರೆಸ್ ಅನ್ನು 70,000 ಡಾಲರ್ (ಸುಮಾರು 60 ಲಕ್ಷ) ಕೊಟ್ಟು ಖರೀದಿಸಿದ್ದರು. ?ಡಿಯೋರ್ ಹಾಟ್ ಕೌಚರ್ ಗೌನ್? ಎಂದು ಕರೆಯಲ್ಪಡುವ ಜಾನ್ ಗ್ಯಾಲಿಯಾನೋ ವಿನ್ಯಾಸಗೊಳಿಸಿದ ಈ ಡ್ರೆಸ್ ಅನ್ನು ಅಮೆರಿಕದ ಖ್ಯಾ ರೆಸಾರ್ಟ್ ಮಾರ್-ಎ-ಲಾಗೋದಲ್ಲಿ ಇರಿಸಲಾಗಿದೆ. 2005ರಲ್ಲಿ ಮೆಲಾನಿಯಾ ಟ್ರಂಪ್ ಮತ್ತು ಡೊನಾಲ್ಡ್ ಟ್ರಂಪ್ ಅವರ ವಿವಾಹಕ್ಕಾಗಿಯೇ ವಿಶೇಷವಾಗಿ ವಿನ್ಯಾಸಗೊಳಿಸಲಾದ ಈ ಮದುವೆಯ ಉಡುಪನ್ನು ಕೈಯಿಂದಲೇ ಹೊಲಿಯಲಾಗಿತ್ತು ಎಂದು ಇಬೇ ಮಾರಾಟಗಾರರು ಹೇಳಿದ್ದಾರೆ. ಇದರಲ್ಲಿ ಸ್ವರೋವ್ಸ್ಕಿ ಕ್ರಿಸ್ಟಲ್ ಮತ್ತು 13 ಅಡಿ ಉದ್ದದ ಟ್ರೇಲ್ ಇತ್ತು ಎಂದು ಅವರು ತಿಳಿಸಿದ್ದಾರೆ.

## ನಿತ್ಯಾನಂದನ ಕೈಲಾಸದಿಂದ 20 ಜನರ ಗಡಿಪಾರು



**ಕೈಲಾಸ:** ಭಾರತದಿಂದ ಪರಾರಿಯಾಗಿ ತನ್ನದೇ ಆದ ಕೈಲಾಸ ದೇಶ ಸ್ಥಾಪಿಸಿರುವ ನಿತ್ಯಾನಂದ ವಿರುದ್ಧ ಭೂ ವಂಚನೆ ಯತ್ನ ಆರೋಪ ಕೇಳಿ ಬಂದಿದೆ. ದಕ್ಷಿಣ ಅಮೆರಿಕ ಖಂಡದಲ್ಲಿರುವ ಬೊಲಿವಿಯಾ ಬೊಲಿವಿಯಾದ ಅಮೇಜಾನ್ ಪ್ರದೇಶದ ಬುಡಕಟ್ಟು ಜನಾಂಗಕ್ಕೆ ಅಸ್ತಿತ್ವದಲ್ಲಿಲ್ಲದ ಕೈಲಾಸ ದೇಶ ವಂಚನೆ ಮಾಡಿರೋದು ಬೆಳಕಿಗೆ ಬಂದಿದೆ. ಅಮೆಜಾನ್ ಮಳೆ ಕಾಡು ಪ್ರದೇಶದ ಭೂಮಿಯನ್ನು ನಿತ್ಯಾನಂದ ಗ್ಯಾಂಗ್ 1 ಸಾವಿರ ವರ್ಷ ಲೀಸ್‌ಗೆ ಪಡೆದು ವಂಚಿಸಿದ ಆರೋಪ ಕೇಳಿಬಂದಿದೆ. ದೇಶದಲ್ಲಿ 3,900 ಚದರ ಕಿಲೋಮೀಟರ್ ಭೂ ಕಬಳಿಕೆ ಆರೋಪ ಎದುರಿಸುತ್ತಿದ್ದಾರೆ. ನಿತ್ಯಾನಂದ ಮತ್ತು ಅವರ ಶಿಷ್ಯರು ಬೊಲಿವಿಯಾದ 4.8 ಲಕ್ಷ ಹೆಕ್ಟೇರ್ (ಅಂದರೆ 4 ಲಕ್ಷ 80 ಸಾವಿರ ಎಕರೆ) ಸರ್ಕಾರಿ ಭೂಮಿಯನ್ನು ತಮ್ಮ ಹೆಸರಿಗೆ ವರ್ಗಾಯಿಸಿಕೊಂಡಿದ್ದಾರೆ ಎಂಬ ಆರೋಪವಿದೆ. ಈ ಭೂಮಿಯನ್ನು 1000 ವರ್ಷಗಳ ಅವಧಿಗೆ ಗುತ್ತಿಗೆಗೆ ನೀಡಲಾಗಿದೆ ಎಂದು ತಿಳಿದು ಬಂದಿದೆ. ಇದೀಗ ಸ್ಥಳೀಯ ಸಮುದಾಯಗಳ ಭೂಮಿಯನ್ನು ವಶಪಡಿಸಿಕೊಳ್ಳಲು ಯತ್ನಿಸಿದ್ದಕ್ಕಾಗಿ ಬೊಲಿವಿಯಾದ ಅಧಿಕಾರಿಗಳು ನಿತ್ಯಾನಂದನ ಕಾಲ್ಪನಿಕ ದೇಶ ಕೈಲಾಸದ 20 ಸದಸ್ಯರನ್ನು ಗಡಿಪಾರು ಮಾಡಿದ್ದಾರೆ ಎಂದು ತಿಳಿದು ಬಂದಿದೆ. ಮಧ್ಯ ದಕ್ಷಿಣ ಅಮೆರಿಕಾದ ದೇಶದ ವಲಸೆ ನಿರ್ದೇಶಕಿ ಕ್ಯಾಥರೀನ್ ಕಾಲ್ಡೆರಾನ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, 20 ಸದಸ್ಯರನ್ನು ಗಡಿಪಾರು ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಬಂಧಿತರಲ್ಲಿ ಹೆಚ್ಚಿನವರು ಬಹುತೇಕ ಮಹಿಳೆಯರಿದ್ದಾರೆ ಎಂದು ತಿಳಿದು ಬಂದಿದೆ. ನಿತ್ಯಾನಂದ ತಂಡ ಆರೋಪ ನಿರಾಕರಿಸಿದೆ. ತಪ್ಪು ವರದಿಯಿಂದ ಹಿಂದು ಸನ್ಯಾಸಿಗಳನ್ನ ಬಂಧಿಸಿ ಹಲ್ಲೆ ಮಾಡಲಾಗಿದೆ ಎಂದು ಪ್ರತಿಕ್ರಿಯಿಸಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ದುಬೈ ಮರಳುಗಾಡಿನಲ್ಲಿ ನಟಿ ಫೋಟೋಶೂಟ್



ಜನಪ್ರಿಯ 'ಅಮೃತಧಾರೆ' ಸೀರಿಯಲ್ ನಟಿ ಇಶಿತಾ ವರ್ಷ ದುಬೈ ಮರಳುಗಾಡಿನಲ್ಲಿ ಅದ್ದೂರಿಯಾಗಿ ಫೋಟೋಶೂಟ್ ಮಾಡಿಸಿದ್ದಾರೆ. ಬಾಲಿವುಡ್ ಬ್ಯೂಟಿಯಂತೆ ಕಂಗೊಳಿಸಿದ ನಟಿಯ ಕಂಡು ಫ್ಯಾನ್ಸ್ ಬೆರಗಾಗಿದ್ದಾರೆ.

ಸದಾ ಒಂದಲ್ಲಾ ಒಂದು ಶೈಲಿಯಲ್ಲಿ ಬೋಲ್ಡ್ ಆಗಿ ಫೋಟೋಶೂಟ್ ಮಾಡಿಸೋ ಇಶಿತಾ ಇದೀಗ ದುಬೈಗೆ ಹಾರಿದ್ದಾರೆ. ಅಲ್ಲಿ ಮರುಳುಗಾಡಿನಲ್ಲಿ ನಿಂತು ವಿವಿಧ ಭಂಗಿಯಲ್ಲಿ ಫೋಟೋಶೂಟ್ ಮಾಡಿಸಿದ್ದಾರೆ. ರೆಡ್ ಕಲರ್ ಡ್ರೆಸ್ ಧರಿಸಿ ಬಾಲಿವುಡ್ ಬ್ಯೂಟಿಯಂತೆ ಕ್ಯಾಮೆರಾಗೆ ಪೋಸ್ ಕೊಟ್ಟಿದ್ದಾರೆ.

ಸ್ಟಾರ್ ನಟಿಯರನ್ನೇ ಸೆಡ್ಡು ಹೊಡೆಯುವಂತೆ ಇಶಿತಾ ನಯಾ ಫೋಟೋಶೂಟ್ ಮಾಡಿಸಿ ಗಮನ ಸೆಳೆದಿದ್ದಾರೆ. ಬಳುವ ಬಳ್ಳಿಯಂತೆ ಮಿಂಚಿರೋ ಇಶಿತಾರನ್ನು ಕಂಡು ಪಡ್ಡೆಹುಡುಗರು ಖುಷಿಪಟ್ಟಿದ್ದಾರೆ.

**ಬಾಲಿವುಡ್ ಬ್ಯೂಟಿಯಂತೆ ಮಿಂಚಿದ ಇಶಿತಾ**

'ಅಗ್ನಿಸಾಕ್ಷಿ' ಸೀರಿಯಲ್‌ನಲ್ಲಿ ಮಾಯಾ ಪಾತ್ರಧಾರಿಯಾಗಿ ಸತತ 7 ವರ್ಷಗಳ ಕಾಲ ರಂಜಿಸಿದರು. ಇಂದಿಗೂ ಅವರ ಪಾತ್ರವನ್ನು ಜನರು ಸ್ಮರಿಸುತ್ತಾರೆ. ಅಷ್ಟರ ಮಟ್ಟಿಗೆ ಈ ಸೀರಿಯಲ್ ಸೂಪರ್ ಹಿಟ್ ಆಗಿತ್ತು.

ಪ್ರಸ್ತುತ 'ಅಮೃತಧಾರೆ' ಸೀರಿಯಲ್‌ನಲ್ಲಿ ಗೌತಮ್ ದಿವಾನ್ ತಂಗಿಯಾಗಿ ಇಶಿತಾ ನಟಿಸುತ್ತಿದ್ದಾರೆ. ರೀಪ್ಲೇಸ್‌ಮೆಂಟ್ ಪಾತ್ರಕ್ಕೆ ಅವರು ಎಂಟ್ರಿ ಕೊಟ್ಟಿದ್ರೂ ಕೂಡ ಅದ್ಭುತವಾಗಿ ನಟಿಸುತ್ತಿದ್ದಾರೆ. ಅವರ ನಟನೆ ಮತ್ತೆ ಪ್ರೇಕ್ಷಕರ ಮನಗೆದ್ದಿದೆ.

ನೃತ್ಯ ಸಂಯೋಜಕ ಮುರುಗಾನಂದ ಜೊತೆ ಇಶಿತಾ ಮದುವೆ ಆಗಿದ್ದಾರೆ. ಅವರ ಕೂಡ ಬಣ್ಣದ ಲೋಕದಲ್ಲಿ ಸ್ಟಾರ್ ನಟರ ಸಿನಿಮಾಗಳಿಗೆ ಕೆಲಸ ಮಾಡ್ತಿರೋದ್ರಿಂದ ಪತ್ನಿಯ ಕೆರಿಯರ್‌ಗೆ ಪ್ರೋತ್ಸಾಹಿಸುತ್ತಿದ್ದಾರೆ.

# ತಮಿಳಿನತ್ತ ಕನ್ನಡದ ನಟ– ಚಿಯಾನ್ ವಿಕ್ರಮ್ ಸಿನಿಮಾದಲ್ಲಿ ರಮೇಶ್ ಇಂದಿರಾ

'ಸಪ್ತಸಾಗರದಾಚೆ ಎಲ್ಲೋ' ಸಿನಿಮಾದಲ್ಲಿ 'ಲವ್ ಯೂ ಮನು' ಎನ್ನುತ್ತಾ ಭಯ ಹುಟ್ಟಿಸಿದ್ದ ರಮೇಶ್ ಇಂದಿರಾ ಇದೀಗ ತಮಿಳಿನತ್ತ ಮುಖ ಮಾಡಿದ್ದಾರೆ. ಸ್ಟಾರ್ ನಟ ಚಿಯಾನ್ ವಿಕ್ರಮ್ ಸಿನಿಮಾದಲ್ಲಿ ಅವರು ನಟಿಸಿದ್ದಾರೆ.



ನಿರ್ದೇಶಕನಾಗಿ ಸೈ ಎನಿಸಿಕೊಂಡಿದ್ದ ರಮೇಶ್ ಇಂದಿರಾ ಹಿರಿತೆರೆಯಲ್ಲಿ ಖಳನಟನಾಗಿ ಬ್ಯುಸಿಯಾಗಿದ್ದಾರೆ. ಇತ್ತೀಚೆಗೆ ಡಾಲಿ ನಟನೆಯ 'ಕೋಟಿ' ಸಿನಿಮಾದಲ್ಲೂ ಅವರು ನಟಿಸಿದ್ದರು. ಈಗ ಕಾಲಿವುಡ್‌ನಲ್ಲಿ ಅವರಿಗೆ ಬಂಪರ್ ಅವಕಾಶ ಸಿಕ್ಕಿದೆ. ಸಿಕ್ಕಿರೋ ಅವಕಾಶವನ್ನು ಅವರು ಸದುಪಯೋಗಪಡಿಸಿಕೊಂಡಿದ್ದಾರೆ. ಚಿಯಾನ್ ವಿಕ್ರಮ್ ನಟನೆಯ 'ವೀರ ಧೀರ ಶೂರನ್' ಸಿನಿಮಾದಲ್ಲಿ ಪವರ್‌ಫುಲ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

ಸದ್ಯ ಈಗಾಗಲೇ ರಿಲೀಸ್ ಆಗಿರೋ ಚಿತ್ರದ ಟ್ರೈಲರ್‌ನಲ್ಲಿ ರಮೇಶ್ ಇಂದಿರಾ ಕಾಣಿಸಿಕೊಂಡಿದ್ದಾರೆ. ಆದರೆ ಅವರ ಪಾತ್ರ ಹೇಗಿದೆ ಎಂಬುದಕ್ಕೆ ಮಾ.27ರಂದು ಉತ್ತರ ಸಿಗಲಿದೆ. ಚಿಯಾನ್ ವಿಕ್ರಮ್ ಜೊತೆ ರಮೇಶ್ ತೆರೆಹಂಚಿಕೊಂಡಿದ್ದಾರೆ ಎಂದರೆ ಇಲ್ಲಿನೋ ಹೊಸತನವಿದೆ ಎಂಬುದು ಅಭಿಮಾನಿಗಳ ಲೆಕ್ಕಾಚಾರ. ಹಾಗಾಗಿ ಸಿನಿಮಾ ನೋಡಲು ಫ್ಯಾನ್ಸ್ ಕಾಯ್ತಿದ್ದಾರೆ.

ವಿಕ್ರಮ್ ನಟನೆಯ 'ವೀರ ಧೀರ ಶೂರನ್' ಚಿತ್ರವು ಮಾ.27ರಂದು ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ. ವಿಕ್ರಮ್‌ಗೆ ನಾಯಕಿಯಾಗಿ ದುಶ್ರಾ ವಿಜಯನ್ ನಟಿಸಿದ್ದಾರೆ.

# ಕೆಜಿಎಫ್ ಕ್ವೀನ್ ಬ್ಯಾಕ್ ಟು ರಾಕ್– ಫ್ಯಾನ್ಸ್‌ಗೆ ಗುಡ್ ನ್ಯೂಸ್

ಕನ್ನಡದ ನಟಿ ಶ್ರೀನಿಧಿ ಶೆಟ್ಟಿ ಮತ್ತೆ ಬೆಳ್ಳಿಪರದೆಯಲ್ಲಿ ಬ್ಯಾಕ್ ಟು ಬ್ಯಾಕ್ ಸಿನಿಮಾಗಳ ಮೂಲಕ ಮಿಂಚಲು ಸಜ್ಜಾಗಿದ್ದಾರೆ. 3 ವರ್ಷಗಳ ಬಳಿಕ ಮತ್ತೆ ಬೆಳ್ಳಿಪರದೆಯತ್ತ ನಟಿ ಎಂಟ್ರಿ ಕೊಡ್ತಿದ್ದಾರೆ. ಯಾವೆಲ್ಲಾ ಸಿನಿಮಾಗಳು ಕುಡ್ಲದ ಬೆಡಗಿ ಕೈಯಲ್ಲಿದೆ ಗೊತ್ತಾ? ಇಲ್ಲಿದೆ ವಿವರ.



ರಾಕಿಂಗ್ ಸ್ಟಾರ್ ಯಶ್‌ಗೆ ನಾಯಕಿಯಾಗಿ ಸತತ 5 ವರ್ಷಗಳ ಕಾಲ 'ಕೆಜಿಎಫ್ 1' ಮತ್ತು 'ಕೆಜಿಎಫ್ 2'ಗೆ 5 ವರ್ಷ ಮೀಸಲಿಟ್ಟು ಗೆದ್ದು ಬೀಗಿದ್ದರು. ಆ ನಂತರ ಚಿಯಾನ್ ವಿಕ್ರಮ್‌ಗೆ ನಾಯಕಿಯಾಗಿ 'ಕೋಬ್ರಾ' ಮೂಲಕ ಹಿಟ್ ಕೊಡಲು ರೆಡಿಯಾದ್ರು. ಆದರೆ ಅದ್ಯಾಕೋ ಸಕ್ಸಸ್ ಸಿಗದೇ ನಟಿ ಸೈಲೆಂಟ್ ಆದರು. ಈಗ ಬರೋಬ್ಬರಿ 3 ಬಿಗ್ ಪ್ರಾಜೆಕ್ಟ್‌ಗಳ ಮೂಲಕ ಮೂರು ವರ್ಷಗಳ ಬಳಿಕ ಕೆಜಿಎಫ್ ಕ್ವೀನ್ ಶ್ರೀನಿಧಿ ಬರುತ್ತಿದ್ದಾರೆ.

ನ್ಯಾಚುರಲ್ ಸ್ಟಾರ್ ನಾನಿ ಜೊತೆ ಹಿಟ್ 3, ಸಿದ್ದು ಜೊನ್ನಲಗಡ್ಡ ಜೊತೆ 'ತೆಲುಸು ಕದಾ' ಸಿನಿಮಾಗಳನ್ನ ಮಾಡಿದ್ದಾರೆ. ಕಿಚ್ಚ ಸುದೀಪ್ ನಟನೆಯ 'ಕಿಚ್ಚ 47' ಸಿನಿಮಾಗೂ ಇವರೇ ನಾಯಕಿ ಅನ್ನೋದು ಚಿತ್ರತಂಡದ ಕಡೆಯಿಂದ ಅಧಿಕೃತವಾಗಿದೆ. ಅಲ್ಲಿಗೆ 'ಕೆಜಿಎಫ್' ಕ್ವೀನ್ ಈಸ್ ಬ್ಯಾಕ್. ಹೊಸ ಸಿನಿಮಾಗಳ ಮೂಲಕ ಅಭಿಮಾನಿಗಳನ್ನು ರಂಜಿಸೋಕೆ ನಟಿ ರೆಡಿಯಾಗಿದ್ದಾರೆ. ಈ ಸುದ್ದಿ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

# ವಿಶಿಷ್ಟ ಕಥಾ ಹಂದರದ ಮಕ್ಕಳ ಚಿತ್ರ 'ಸೀಸ್ ಕಡ್ಡಿ' ಬಿಡುಗಡೆಗೆ ರೆಡಿ!

ಇತ್ತೀಚಿನ ದಿನಗಳಲ್ಲಿ ಮಕ್ಕಳ ಚಿತ್ರಗಳ ಸಂಖ್ಯೆ ಕಡಿಮೆಯಾಗಿದೆ ಅಂತೊಂದು ಕೊರಗು ಕನ್ನಡದ ಸಿನಿಮಾ ಪ್ರೇಮಿಗಳಲ್ಲಿದೆ. ಒಂದು ಸಿನಿಮಾ ರಂಗದ ಜೀವಂತಿಕೆಯ ದೃಷ್ಟಿಯಿಂದ ಎಲ್ಲ ಬಗೆಯ ಸಿನಿಮಾಗಳು ಕೂಡ ಕಾಲ ಕಾಲಕ್ಕೆ ರೂಪುಗೊಳ್ಳಬೇಕಾಗುತ್ತದೆ. ಈ ನಿಟ್ಟಿನಲ್ಲಿ ಸಿನಿಮಾಸಕ್ತರ ನಡುವಲ್ಲೊಂದು ಚರ್ಚೆ ಚಾಲ್ತಿಯಲ್ಲಿರುವಾಗಲೇ ಸದ್ದಿಲ್ಲದೆ ತಯಾರಾಗಿ ನಿಂತಿರುವ ವಿಶಿಷ್ಟ ಕಥಾನಕದ ಮಕ್ಕಳ ಚಿತ್ರವೊಂದು ಅಂತಾರಾಷ್ಟ್ರೀಯ ಸಿನಿಮೋತ್ಸವಗಳಲ್ಲಿ ಸದ್ದು ಮಾಡಿದೆ. ಇನ್ನೇನು ಆರಂಭವಾಗಲಿರೋ ಶಾಲಾ ರಜಾ ದಿನಗಳು ಅಂತಿಮ ಘಟ್ಟ ತಲುಪಿಕೊಳ್ಳುವ ಹೊತ್ತಿಗೆಲ್ಲ ಅದ್ದೂರಿಯಾಗಿ ತೆರೆಗಾಣಲು ತಯಾರಿಯೂ ಆರಂಭವಾಗಿದೆ. ಹಾಗೆ ಬಿಡುಗಡೆಗೆ ತಯಾರಾಗಿರುವ ಮಕ್ಕಳ ಚಿತ್ರ 'ಸೀಸ್ ಕಡ್ಡಿ'.

ಇದು ಕನ್ನಡ ಚಿತ್ರರಂಗದಲ್ಲಿ ನಿರ್ಮಾಪಕರಾಗಿ, ನಿರ್ದೇಶಕರಾಗಿ ಪರಿಚಿತರಾಗಿರುವ ರತನ್ ಗಂಗಾಧರ್ ನಿರ್ದೇಶನದ ಚಿತ್ರ. 'ಸೀಸ್ ಕಡ್ಡಿ' ಎಂಬುದು ನಮ್ಮೆಲ್ಲರ ಪಾಲಿಗೆ ಅಕ್ಷರದ ಬೆಳಕು ತೋರುವ ವಸ್ತು. ಅಂತಹ ಪೆನ್ಸಿಲ್ ಅನ್ನು ರೂಪಕವಾಗಿಟ್ಟುಕೊಂಡು, ಅದರ ಭಾಗವಾಗಿರೋ ಲೆಡ್, ಶಾರ್ಪ್ನರ್, ಇರೇಜರ್ ಮುಂತಾದವುಗಳನ್ನು ಹೋಲುವ ಪಾತ್ರಗಳ ಮೂಲಕ ಈ ಸಿನಿಮಾ ಕಥೆ ತುಂಬಿಕೊಂಡಿದೆಯಂತೆ. ಈ ರೂಪಕಗಳನ್ನಿಟ್ಟುಕೊಂಡು ಎಂತಹ ಪಾತ್ರಗಳು ಸೃಷ್ಟಿಯಾಗಿರಬಹುದೆಂಬ ಕುತೂಹಲಕ್ಕೆ ತಿಂಗಳೊಪ್ಪತ್ತಿನಲ್ಲಿಯೇ ಮಜವಾದ ಉತ್ತರ ಸಿಗಲಿದೆ. ಒಂದು ಪೆನ್ಸಿಲ್‌ನ ರೂಪಕದೊಂದಿಗೆ ಬದುಕಿನ ಅಚ್ಚರಿದಾಯಕ ಮಜಲುಗಳನ್ನು ತೆರೆದಿಡುವ ಈ ಸಿನಿಮಾ ಮಕ್ಕಳ ಚಿತ್ರಗಳ ಸಾಲಿನಲ್ಲಿ ಭಿನ್ನವಾಗಿ ನೆಲೆಕಂಡುಕೊಳ್ಳುವ ಸಾಧ್ಯತೆಗಳಿವೆ. ಇದುವರೆಗೂ ಸಿನಿಮೋತ್ಸವಗಳಲ್ಲಿ ಪ್ರದರ್ಶನಗೊಂಡಿದ್ದ ಈ ಚಿತ್ರವನ್ನು ನೋಡಿದವರೆಲ್ಲ ನಾನಾ ದಿಕ್ಕಿನಲ್ಲಿ ವಿಮರ್ಶೆ ಮಾಡಿದ್ದಾರೆ. ಅವೆಲ್ಲವೂ ಸಕಾರಾತ್ಮಕವಾಗಿವೆ ಅನ್ನೋದೇ 'ಸೀಸ್ ಕಡ್ಡಿ'ಯ ನಿಜವಾದ ಹೆಗ್ಗಳಿಕೆ. ಒಂದಿಡೀ







ಸಿನಿಮಾ ಲೈವ್ ಸೌಂಡ್ ರೆಕಾರ್ಡಿಂಗ್ ಮೂಲಕ ಮೂಡಿ ಬಂದಿರೋದು ಮತ್ತೊಂದು ವಿಶೇಷ.

ಇಲ್ಲಿ ಹರಿಕಥೆಯಲ್ಲಿ ಪ್ರಾವಿಣ್ಯ ಹೊಂದಿರೋ ಸೆಕ್ಯೂರಿಟಿ ಗಾರ್ಡ್ ಮತ್ತು ಕಾಂದಂಬರಿಕಾರನೋರ್ವನ ಮುಖಾಮುಖಿಯಾಗುತ್ತೆ. ಹಾಗೆ ಸಿಕ್ಕ ಸೆಕ್ಯೂರಿಟಿ ಗಾರ್ಡ್ ಅನ್ನೇ ಬೇತಾಳನಾಗಿ ಕಲ್ಪಿಸಿಕೊಂಡು ಆ ಕಾದಂಬರಿಕಾರ ಕಥೆಯೊಂದನ್ನು ಬರೆಯಲಾರಂಭಿಸುತ್ತಾನೆ. ಆ ಬೇತಾಳನ ಪ್ರಶ್ನೆಗಳಿಗೆ ವಿಕ್ರಮಾದಿತ್ಯನ ಪಾತ್ರ ಕೊಡುವ ಉತ್ತರಗಳ ಮೂಲಕ ಕಥೆ ಗರಿಬಿಚ್ಚಿಕೊಳ್ಳುತ್ತೆ. ಮಕ್ಕಳ ಕಥನದಲ್ಲಿಯೇ ಹಿರೀಕರ ಕಥೆಯೂ ತೆರೆದುಕೊಳ್ಳುತ್ತಾ ಸಾಗುತ್ತದೆ. ಅದರೊಂದಿಗೇ ಒಟ್ಟಾರೆ ಸಿನಿಮಾದ ಪಾತ್ರಗಳೂ ಕದಲಲಾರಂಭಿಸುತ್ತವೆ. ಈ ಸಿನಿಮಾ ಈಗಾಗಲೇ ನೋಯ್ಡಾದಲ್ಲಿ ನಡೆದಿರುವ ಅಂತಾರಾಷ್ಟ್ರೀಯ ಸಿನಿಮೋತ್ಸವದಲ್ಲಿ ಪ್ರದರ್ಶನ ಕಂಡಿದೆ.

ಉತ್ತಮ ನಿರ್ದೇಶನ ವಿಭಾಗದಲ್ಲಿ ಪ್ರಶಸ್ತಿಯನ್ನೂ ಬಾಚಿಕೊಂಡಿದೆ. ಮೆಲ್ಬೋರ್ನ್ ಸಿನಿಮಾ ಫೆಸ್ಟಿವಲ್ ನಲ್ಲಿಯೂ ಪ್ರದರ್ಶನ ಕಂಡು ಎಲ್ಲರಿಂದಲೂ ಮೆಚ್ಚುಗೆ ಪಡೆದುಕೊಂಡಿದೆ. ಸಾಮಾನ್ಯವಾಗಿ ಮಕ್ಕಳ ಸಿನಿಮಾ ಅಂದಾಕ್ಷಣ ಸಿದ್ಧಸೂತ್ರದ ಸುತ್ತ ಒಂದಷ್ಟು ಕಲ್ಪನೆಗಳು ಮೂಡಿಕೊಳ್ಳುತ್ತವೆ. ಅಂಥಾ ಕಲ್ಪನೆಗಳ ನಿಲುಕಿನಾಚೆಗೆ ಹಬ್ಬಿಕೊಂಡ ಲಕ್ಷಣಗಳಿದ್ದಾವೆ. ಚಿತ್ರತಂಡ ಹಂಚಿಕೊಂಡಿರೋ ಕೆಲ ವಿಚಾರಗಳನ್ನು ಗಮನಿಸಿದರೆ ಆ ವಿಚಾರ ಸ್ಪಷ್ಟವಾಗುತ್ತದೆ. ಇಲ್ಲಿ ಐದು ಕಥೆಗಳಿವೆ. ಅವೆಲ್ಲವೂ ಒಂದು ಬಿಂದುವಿನಲ್ಲಿ ಸಂಧಿಸುತ್ತವೆ. ಒಬ್ಬ ಕಾದಂಬರಿಕಾರ ಮತ್ತು ಆತನ ಸುತ್ತ ಹಬ್ಬಿಕೊಂಡ ಮಕ್ಕಳ ಪಾತ್ರಗಳಾಗಿವೆ. ಅವುಗಳ ಸುತ್ತ ಥ್ರಿಲ್ಲಿಂಗ್ ಅಂಶಗಳಗೊಂಡು, ಚಿಂತನೆಗೂ ಹಚ್ಚುವಂಥಾ ಧಾಟಿಯಲ್ಲಿ ಈ ಸಿನಿಮಾವನ್ನು ರೂಪಿಸಲಾಗಿದೆಯಂತೆ. ಒಟ್ಟಾರೆಯಾಗಿ ಮಕ್ಕಳ ಚಿತ್ರವಾದರೂ ಕೂಡ ಎಲ್ಲ ವಯೋಮಾನದವರನ್ನೂ ಆವರಿಸಿಕೊಳ್ಳುವ ಕಥನ ಸೀಸ್ ಕಡ್ಡಿಯದ್ದು.

ಪ್ರಯೋಗಾತ್ಮಕ ಗುಣದೊಂದಿಗೆ ಈ ಸಿನಿಮಾವನ್ನು ನಿರ್ದೇಶನ ಮಾಡಿರುವವರು ರತನ್ ಗಂಗಾಧರ್. ಸಂಪತ್ ಶಿವಶಂಕರ್, ಕೃತಿ ನಾಣಯ್ಯರೊಂದಿಗೆ ರತನ್ ಅವರೂ ಸೇರಿಕೊಂಡು ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಇಲ್ಲಿನ ಒಂದೊಂದು ಭಾಗದ ಚಿತ್ರಕಥೆ ಮತ್ತು ಸಂಭಾಷಣೆಯನ್ನು ಒಬ್ಬೊಬ್ಬರು ನಿರ್ವಹಿಸಿದ್ದಾರೆ. ವಿಕ್ರಮ ಬೇತಾಳ ಭಾಗಕ್ಕೆ ಆಕರ್ಷ ಕಮಲ, ಚಿಕ್ಕಿ ಪಾತ್ರಕ್ಕೆ ಅಕ್ಷರ ಭಾರದ್ವಾಜ್, ರವೀಶ ಪಾತ್ರಕ್ಕೆ ಶರತ್ ಕೆ ಪರ್ವತವಾಣಿ, ಮಂಜಿ ಪಾತ್ರಕ್ಕೆ ಜಯಂತ್ ವೆಂಕಟ್ ಹಾಗೂ ತೌಫಿಕ್ ಪಾತ್ರಕ್ಕೆ ಮಹೇಂದ್ರ ಗೌಡ ಚಿತ್ರಕಥೆ ಮತ್ತು ಸಂಭಾಷಣೆ ಬರೆದಿದ್ದಾರೆ. ಕೆ.ಸಿ ಬಾಲಸಾರಂಗನ್ ಸಂಗೀತ ನಿರ್ದೇಶನದಲ್ಲಿ ಈ ಸಿನಿಮಾ ಹಾಡುಗಳು ರೂಪುಗೊಂಡಿವೆ. ಮಹೇಶ್ ಎನ್.ಸಿ, ಪ್ರತಾಪ್ ವಿ ಭಟ್, ಮಹೇಂದ್ರ ಗೌಡ ಅನುಜಯ ಎಸ್. ಕುಮ್ಟಕರ್ ಹಾಡುಗಳಿಗೆ ಸಾಹಿತ್ಯ ಬರೆದಿದ್ದಾರೆ. ಇದೇ ಮೇ ತಿಂಗಳ ಕಡೆಯ ಭಾಗದಲ್ಲಿ 'ಸೀಸ್ ಕಡ್ಡಿ' ಚಿತ್ರ ತೆರೆಗಾಣಲಿದೆ. ಈ ಮೂಲಕ ಬೇಸಿಗೆ ರಜೆಯ ಅಂಚಿನಲ್ಲಿ ಒಂದು ಅಪರೂಪದ ಅನುಭೂತಿ ಕನ್ನಡ ಚಿತ್ರ ಪ್ರೇಮಿಗಳಿಗೆ ಕಾದಿದೆ.

# ಡಿಕಾಕ್ ಅಬ್ಬರಕ್ಕೆ ರಾಯಲ್ಸ್ ಪಂಚರ್ ಕೋಲ್ಕತ್ತಾಗೆ 8 ವಿಕೆಟ್‌ಗಳ ಜಯ

**ಗುವಾಹಟಿ:** ಕ್ವಿಂಟನ್ ಡಿಕಾಕ್ ಬ್ಯಾಟಿಂಗ್ ಅಬ್ಬರಕ್ಕೆ ಕೋಲ್ಕತ್ತಾ ವಿರುದ್ಧ ರಾಯಲ್ಸ್‌ಗೆ 8 ವಿಕೆಟ್‌ಗಳ ಸೋಲಾಗಿದೆ. ಬ್ಯಾಟಿಂಗ್ ಮತ್ತು ಬೌಲಿಂಗ್‌ನಲ್ಲಿ ಮಿಂಚಿದ ಕೆಕೆಆರ್ ಐಪಿಎಲ್ 2025 ರಲ್ಲಿ ಮೊದಲ ಗೆಲುವು ದಾಖಲಿಸಿತು.



ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್ ವೈಫಲ್ಯ ಅನುಭವಿಸಿತು. 20 ಓವರ್‌ಗಳಿಗೆ 9 ವಿಕೆಟ್ ನಷ್ಟಕ್ಕೆ 151 ರನ್ ಕಲೆ ಹಾಕಿತು. ಕೋಲ್ಕತ್ತಾ ನೈಟ್ ರೈಡರ್ಸ್ 17.3 ಓವರ್‌ಗೆ 2 ವಿಕೆಟ್ ನಷ್ಟಕ್ಕೆ ಗುರಿ ತಲುಪಿ ಗೆದ್ದು ಬೀಗಿತು.

ಬ್ಯಾಟಿಂಗ್‌ನಲ್ಲಿ ರಿಯಾನ್ ಪರಾಗ್ ಪಡೆ ಮುಗ್ಗರಿಸಿತು. ಯಶಸ್ವಿ ಜೈಸ್ವಾಲ್ 29, ಸಂಜು ಸ್ಯಾಮ್ಸನ್ 13, ರಿಯಾನ್ ಪರಾಗ್ 25, ಧ್ರುವ್ ಜುರೆಲ್ 33, ಜೋಫ್ರಾ ಆರ್ಚರ್ 16 ರನ್ ಗಳಿಸಿದರು. ಪ್ರಮುಖ ಬ್ಯಾಟರ್‌ಗಳೇ ಕೈಕೊಟ್ಟಿದ್ದು ತಂಡದ ಸೋಲಿಗೆ ಪ್ರಮುಖ ಕಾರಣವಾಯಿತು.

ಕೋಲ್ಕತ್ತಾ ಬೌಲರ್‌ಗಳು ರಾಯಲ್ಸ್ ಬ್ಯಾಟರ್‌ಗಳನ್ನು ಚೆಂಡಾಡಿದರು. ವೈಭವ್ ಅರೋರಾ, ಹರ್ಷಿತ್ ರಾಣಾ, ಮೊಯಿಲ್ ಅಲಿ, ವರುಣ್ ಚಕ್ರವರ್ತಿ ತಲಾ 2 ಹಾಗೂ ಸ್ಪೆನ್ಸರ್ ಜಾನ್ಸನ್ 1 ವಿಕೆಟ್ ಕಿತ್ತರು.

ಆರ್‌ಆರ್ ನೀಡಿದ 152 ರನ್ ಗುರಿ ಬೆನ್ನತ್ತಿದ ಕೆಕೆಆರ್ ಬ್ಯಾಟಿಂಗ್‌ನಲ್ಲಿ ಅಬ್ಬರಿಸಿತು. ಕ್ವಿಂಟನ್ ಡಿಕಾರ್ 61 ಬಾಲ್‌ಗೆ 97 ರನ್ (8 ಬೌಂಡರಿ, 6 ಸಿಕ್ಸರ್) ಗಳಿಸಿ ಮಿಂಚಿದರು. ಕ್ಯಾಪ್ಟನ್ ಅಜಿಂಕ್ಯಾ ರಹಾನೆ (18), ಅಂಗ್‌ಕ್ರಿಶ್ ರಘುವಂಶಿ (22) ಬ್ಯಾಟಿಂಗ್‌ನಲ್ಲಿ ತಂಡದ ಗೆಲುವಿಗೆ ಸಹಕಾರಿಯಾದರು. ಪಂದ್ಯದಲ್ಲಿ ಆರ್ ಆರ್ ಬೌಲರ್‌ಗಳು ವಿಫಲರಾದಂತೆ ಕಂಡುಬಂತು.

# ಐಪಿಎಲ್‌ನಲ್ಲಿ ಡಬಲ್ ಸೆಂಚುರಿ ಹೊಡೀತೀನಿ..!

ಇಂಡಿಯನ್ ಪ್ರೀಮಿಯರ್ ಲೀಗ್ ನಲ್ಲಿ ಚೊಚ್ಚಲ ಶತಕ ಸಿಡಿಸಿರುವ ಇಶಾನ್ ಕಿಶನ್ ಹೊಸ ಹುಮ್ಮಸ್ಸಿನಲ್ಲಿದ್ದಾರೆ. ಈ ಹುಮ್ಮಸ್ಸಿನೊಂದಿಗೆ ಐಪಿಎಲ್ ನಲ್ಲಿ ದ್ವಿಶತಕ ಬಾರಿಸುವ ವಿಶ್ವಾಸದಲ್ಲಿದ್ದಾರೆ. ರಾಜಸ್ಥಾನ್ ರಾಯಲ್ಸ್ ವಿರುದ್ಧದ ಪಂದ್ಯದಲ್ಲಿ ಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿದ ಇಶಾನ್ 47 ಎಸೆತಗಳಲ್ಲಿ 6 ಸಿಕ್ಸ್ ಹಾಗೂ 11 ಫೋರ್ ಗಳೊಂದಿಗೆ ಅಜೇಯ 106 ರನ್ ಬಾರಿಸಿದ್ದರು.



ಈ ವಿಸ್ಫೋಟಕ ಬ್ಯಾಟಿಂಗ್ ನಿಂದಾಗಿ ಈ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡವು 20 ಓವರ್ ಗಳಲ್ಲಿ 286 ರನ್ ಕಲೆಹಾಕಿತು. ಅಲ್ಲದೆ ಈ ಪಂದ್ಯದಲ್ಲಿ 44 ರನ್ ಗಳ ಗೆಲುವು ದಾಖಲಿಸಿತು. ಈ ಗೆಲುವಿನ ರೂವಾರಿಯೇ ಇಶಾನ್ ಕಿಶನ್.

ಈ ಖುಷಿಯಲ್ಲಿ ನೀಡಿದ ಸಂದರ್ಶನವೊಂದರಲ್ಲಿ ಮಾತನಾಡಿದ ಇಶಾನ್ ಕಿಶನ್, ಸನ್ ರೈಸರ್ಸ್ ಹೈದರಾಬಾದ್ ಪರ ಕಣಕ್ಕಿಳಿದ ಮೊದಲ ಪಂದ್ಯದಲ್ಲೇ ಸೆಂಚುರಿ ಬಾರಿಸಿದ್ದು ಖುಷಿ ನೀಡಿದೆ. ಇದೇ ಪ್ರದರ್ಶನವನ್ನು ಮುಂದಿನ ಪಂದ್ಯಗಳಲ್ಲೂ ಮುಂದುವರೆಸುವ ವಿಶ್ವಾಸವಿದೆ ಎಂದಿದ್ದಾರೆ.

ಇದೇ ವೇಳೆ ಮುಂದಿನ ಪಂದ್ಯಗಳಲ್ಲಿ ನಿಮ್ಮಿಂದ ದ್ವಿಶತಕವನ್ನು ನಿರೀಕ್ಷಿಸಬಹುದಾ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಇಶಾನ್ ಕಿಶನ್, ಅಂತಹದೊಂದು ಅವಕಾಶ ಸಿಕ್ಕರೆ ಖಂಡಿತವಾಗಿಯೂ ನಾನು ಡಬಲ್ ಸೆಂಚುರಿ ಬಾರಿಸ್ತೀನಿ. ಈ ಮೂಲಕ ಟಿ20 ಕ್ರಿಕೆಟ್ ನಲ್ಲಿ ಈ ಸಾಧನೆ ಮಾಡುವ ಬಯಕೆಯನ್ನು ಹೊಂದಿದ್ದೀನಿ ಎಂದು ತಿಳಿಸಿದ್ದಾರೆ.

ಅಷ್ಟೇ ಅಲ್ಲದೆ ಮುಂಬರುವ ದಿನಗಳಲ್ಲಿ ಏಕದಿನ ಪಂದ್ಯಗಳಲ್ಲಿ 250 ಮತ್ತು 300 ರನ್ ಗಳಿಸುವ ಬಯಕೆಯನ್ನು ಹೊಂದಿರುವುದಾಗಿ ಇಶಾನ್ ಕಿಶನ್ ತಿಳಿಸಿದ್ದಾರೆ. ಈ ಮೂಲಕ ತನ್ನ ಟಾರ್ಗೆಟ್ ಬಿಗ್ ಸ್ಕೋರ್ ಗಳಿಸುವುದು ಎಂಬುದನ್ನು ಯುವ ಎಡಗೈ ದಾಂಡಿಗ ಬಹಿರಂಗಪಡಿಸಿದ್ದಾರೆ.

ಸದ್ಯ ರಾಜಸ್ಥಾನ್ ರಾಯಲ್ಸ್ ತಂಡವನ್ನು ಬಗ್ಗು ಬಡಿದಿರುವ ಸನ್ ರೈಸರ್ಸ್ ಹೈದರಾಬಾದ್ ತಂಡವು ಇಂದು (ಮಾ.27) ನಡೆಯಲಿರುವ ಐಪಿಎಲ್ ನ 7ನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ಎದುರಿಸಲಿದೆ. ಈ ಪಂದ್ಯದಲ್ಲಿ ಇಶಾನ್ ಕಿಶನ್ ಅರ್ಭಟಿಸಲಿದ್ದಾರಾ ಕಾದು ನೋಡಬೇಕಿದೆ.

## ಮಹಾನಗರ ಪಾಲಿಕೆಯ ಗಾರ್ಬೇಜ್ ರೀತಿ ರಾಜ್ಯ ಸರ್ಕಾರದ ಆಡಳಿತ

# ಛಲವಾದಿ ನಾರಾಯಣಸ್ವಾಮಿ ಕಿಡಿ

**ರಾಮನಗರ:** ರಾಜ್ಯ ರಾಜಕಾರಣದ ಪರಿಸ್ಥಿತಿ ಹದಗೆಟ್ಟಿದೆ. ಮಹಾನಗರ ಪಾಲಿಕೆಯ ಗಾರ್ಬೇಜ್ ರೀತಿ ಸರ್ಕಾರದ ಆಡಳಿತ ಇದೆ. ಇಂತಹ ಕೆಟ್ಟ ಸರ್ಕಾರವನ್ನ ನಾವು ಎಂದೂ ನೋಡಿಲ್ಲ ಎಂದು ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕಿಡಿಕಾರಿದ್ದಾರೆ.

ರಾಮನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸರ್ಕಾರದಲ್ಲಿ ಅಭಿವೃದ್ಧಿ ಸಂಪೂರ್ಣ ಶೂನ್ಯ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಅಭಿವೃದ್ಧಿ ಬಗ್ಗೆ ಚರ್ಚೆ ಆಗದೇ ಹಣ ಹೊಡೆಯೋದು, ಹನಿಟ್ರ್ಯಾಪ್, ಫೋನ್ ಟ್ರ್ಯಾಪ್ ಬಗ್ಗೆ ಚರ್ಚೆ ಆಗುತ್ತಿದೆ. ಇಲ್ಲಿಯ ತನಕ ಸರ್ಕಾರ ಇರಲೇ ಬಾರದಿತ್ತು. ಹನಿಟ್ರ್ಯಾಪ್‌ನಲ್ಲಿ ಬಿಜೆಪಿಯ ಯಾವ ನಾಯಕರೂ ಇಲ್ಲ. ಇದ್ದಿದ್ದರೇ ಸರ್ಕಾರ ಇಷ್ಟೊತ್ತಿಗೆ ತನಿಖೆಗೆ ಮುಂದಾಗುತ್ತಿತ್ತು ಎಂದರು.

ಈಗ ಕಾಂಗ್ರೆಸ್ ನಾಯಕರೇ ಕಾಂಗ್ರೆಸ್‌ನವರ ಹನಿಟ್ರ್ಯಾಪ್ ಮಾಡುತ್ತಿದ್ದಾರೆ. ತಮ್ಮ ವಿರುದ್ಧ ಮಾತನಾಡುವವರ ವಿರುದ್ಧ ಹನಿಟ್ರ್ಯಾಪ್ ಮಾಡುವ ಕೆಲಸ ಆಗುತ್ತಿದೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಮಾತೇ ಆಡುತ್ತಿಲ್ಲ. ತನಿಖೆ ಮಾಡುತ್ತೇವೆ ಅನ್ನೋದು ಬಿಟ್ಟರೆ ಇನ್ನೇನು ಹೇಳಿಲ್ಲ. ಸಿಎಂ ಸಿದ್ದರಾಮಯ್ಯರದ್ದೂ ಹನಿಟ್ರ್ಯಾಪ್ ಆಗಿರುವ ಅನುಮಾನ ಇದೆ. ತನಿಖೆ ಆದರೆ ಇವರದ್ದೂ ಎಲ್ಲಿ ಆಚೆ ಬರುತ್ತೋ ಎಂಬ ಭಯ. ಅದಕ್ಕಾಗಿ ಸಿಎಂ ಈ ಬಗ್ಗೆ ತನಿಖೆಗೆ ಸೂಚಿಸುತ್ತಿಲ್ಲ ಎಂದು ಆರೋಪಿಸಿದರು.



ದಲಿತರ ಹಣವನ್ನ ಸರ್ಕಾರ ತಿಂದು ಹಾಕುತ್ತಿದೆ. ದಲಿತರಿಗೆ ಸರ್ಕಾರ ಅನ್ಯಾಯ ಮಾಡುತ್ತಿದ್ದರೂ ಕಾಂಗ್ರೆಸ್ ದಲಿತ ಸಚಿವರು, ಶಾಸಕರು ಬಾಯಿ ಬಿಡುತ್ತಿಲ್ಲ. ಇಂತಹ ಗುಲಾಮಗಿರಿಯನ್ನ ನಾನು ಎಲ್ಲಿಯೂ ನೋಡಿಲ್ಲ. ದಲಿತರ ಹಣ, ದಲಿತರಿಗೆ ಮೀಸಲಾಗಿ ಇಡಬೇಕು. ಗ್ಯಾರಂಟಿಗಾಗಿ ದಲಿತರ ಹಣ ಬಳಸಿಕೊಳ್ಳಲಾಗಿದೆ. ಅಲ್ಲದೇ ಧರ್ಮಾಧಾರಿತ ಮೀಸಲಾತಿ ಸಂವಿಧಾನ ವಿರೋಧಿ. ಡಿಸಿಎಂ ಡಿಕೆಶಿ ಸಂವಿಧಾನ ಬದಲಾವಣೆ ಮಾಡುತ್ತೇವೆ ಅಂದಿದ್ದಾರೆ. ಸಂವಿಧಾನ ಬದಲಿಸಿ ಧರ್ಮಾಧಾರಿತ ಮೀಸಲಾತಿ ಕೊಡುತ್ತೇವೆ ಎನ್ನುತ್ತಾರೆ. ಅಂಬೇಡ್ಕರ್ ಬಗ್ಗೆ ಮಾತನಾಡುವ ಕಾಂಗ್ರೆಸ್ಸಿಗರು ಇದನ್ನು ಸಮರ್ಥನೆ ಮಾಡಿಕೊಳ್ಳುತ್ತಿದ್ದಾರೆ. ಡಿಸಿಎಂ ಆಗಿ ಮುಂದುವರೆಯುವ ನೈತಿಕತೆ ಡಿಕೆಶಿಗೆ ಇಲ್ಲ. ಸಿಎಂ ಸಿದ್ದರಾಮಯ್ಯ ಕೂಡಲೇ ಡಿಕೆಶಿಯನ್ನ ಸಂಪುಟದಿಂದ ವಜಾ ಮಾಡಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ಕೇವಲ ಮೂರು ರಾಜ್ಯಗಳಲ್ಲಿ ಉಳಿದಿದೆ. ಹಿಮಾಚಲ ಪ್ರದೇಶ, ತೆಲಂಗಾಣ, ಕರ್ನಾಟಕದಲ್ಲಿ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಇರಲ್ಲ. ಕರ್ನಾಟಕ ಕಾಮಧೇನು ರೀತಿ ಇದೆ. ಕಾಮಧೇನು ಕೆಚ್ಚಲನ್ನ ಕೊಯ್ಯುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ ಎಂದು ಕೆಂಡಕಾರಿದರು.

ಸಂವಿಧಾನ ಬದಲಾವಣೆ ಬಗ್ಗೆ ಡಿಕೆಶಿ ಮಾತನಾಡಿದರೂ ದಲಿತ ಸಂಘಟನೆಗಳು ಡಿಕೆಶಿ ವಿರುದ್ಧ ಮಾತನಾಡುತ್ತಿಲ್ಲ. ಕಾಂಗ್ರೆಸ್ ಆಡಳಿತದಲ್ಲಿ ದಲಿತರಿಗೆ ಭಯ ಬಂದುಬಿಟ್ಟಿದೆ. ಕಾಂಗ್ರೆಸ್ ಏನೇ ಮಾತನಾಡಿದರೂ ಸುಮ್ಮನಿರುತ್ತಾರೆ. ಕಾಂಗ್ರೆಸ್ ಸುಡುವ ಮನೆ, ಇದರಲ್ಲಿ ಭವಿಷ್ಯ ಇಲ್ಲ ಅಂತ ಅಂಬೇಡ್ಕರ್ ಹೇಳಿದ್ದರು. ದಲಿತರು ಹೆದರಿಕೊಂಡು ಬದುಕುತ್ತಿದ್ದಾರೆ. ಅಂಬೇಡ್ಕರ್ ಹಾಗೂ ಸಂವಿಧಾನದ ಬಗ್ಗೆ ಯಾರೇ ಮಾತನಾಡಿದರೂ ಧೈರ್ಯವಾಗಿ ವಿರೋಧಿಸಿ. ಯಾವುದೇ ಪಕ್ಷ ಆದರೂ ಸರಿಯೇ ವಿರೋಧಿಸಿ ಎಂದು ಮನವಿ ಮಾಡಿದರು.

ಡಿಕೆಶಿ ರಾಜಕೀಯ ನಿವೃತ್ತಿ ಪಡೆಯೋದನ್ನ ಮಾಡಿ ತೋರಿಸಬೇಕು. ತಿರುಚೋದಕ್ಕೆ ಅದೇನು ಡ್ಯಾಂ ನೀರಲ್ಲ. ನೀವು ಒಂದು ಮಾಧ್ಯಮದಲ್ಲಿ ಕೂತು ಮಾತನಾಡಿದ್ದೀರಿ. ಇಡೀ ದೇಶವೇ ನಿಮ್ಮ ಸಂದರ್ಶನ ನೋಡಿದೆ. ನಾವೇನು ನಿಮ್ಮ ನಾಲಿಗೆಗೆ ಹಗ್ಗಕಟ್ಟಿ ತಿರುಚಿದ್ದೇವಾ? ಡಿಕೆಶಿ ಮುಂದೆ ಸಿಎಂ ಆಗುವ ಅವಕಾಶ ಹೊಂದಿರುವವರು. ಆದರೆ ಇವರ ಮಾತುಗಳನ್ನ ಕೇಳಿದರೆ ಇವರು ಸಿಎಂ ಆಗಬಾರದು. ಅವರು ವಿಚಲಿತರಾಗಿ ಇಂತಹ ಮಾತುಗಳನ್ನ ಆಡುತ್ತಿದ್ದಾರೆ ಎಂದು ಹರಿಹಾಯ್ದರು.

# 'ಹನಿಟ್ರ್ಯಾಪ್' ಸದನದಲ್ಲಿ ಪ್ರಸ್ತಾಪ ಮಾಡಿದ್ದು ತಲೆತಗ್ಗಿಸುವ ವಿಚಾರ

**ಬೆಂಗಳೂರು:** ಹನಿಟ್ರ್ಯಾಪ್ ವಿಚಾರವನ್ನ ಸದನದಲ್ಲಿ ಪ್ರಸ್ತಾಪ ಮಾಡಿದ್ದರು. ಇದು ಸಾರ್ವಜನಿಕರ ಮುಂದೆ ತಲೆ ತಗ್ಗಿಸುವ ವಿಚಾರ ಎಂದು ಸಚಿವ ಪ್ರಿಯಾಂಕ್ ಖರ್ಗೆ ಬೇಸರ ವ್ಯಕ್ತಪಡಿಸಿದರು.

ಹನಿಟ್ರ್ಯಾಪ್ ಯತ್ನದ ಕೆಸರೆರಚಾಟದ ವಿಚಾರವಾಗಿ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಗೃಹ ಸಚಿವರಿಗೆ ರಾಜಣ್ಣ ಮನವಿ ಕೊಟ್ಟಿದ್ದಾರೆ. ಉನ್ನತ ಮಟ್ಟದ ತನಿಖೆ ಆಗಬೇಕು ಅಂದಿದ್ದಾರೆ. ಇದಕ್ಕೆ ಸರ್ಕಾರ ಕೂಡ ಸಿದ್ಧ ಇದೆ ಎಂದು ಹೇಳಿದರು.

ಹನಿಟ್ರ್ಯಾಪ್ ವಿಚಾರವನ್ನ ಸದನದಲ್ಲಿ ಪ್ರಸ್ತಾಪ ಮಾಡಿದ್ದರು. ಪರಮೇಶ್ವರ್ ಅವರು ದೂರು ಕೊಡಲಿ ಎಂದು ಹೇಳಿದ್ದರು. ಗುರುವಾರದವರೆಗೂ ಸಮಯ ಕೇಳಿದ್ದರು. ನೋಡೋಣ ಎಂದಿದ್ದರು. ಇದು ಸಾರ್ವಜನಿಕರ ಮುಂದೆ ತಲೆ ತಗ್ಗಿಸುವ ವಿಚಾರವಾಗಿದೆ. ಕೋಟಿ ಜನರಲ್ಲಿ 224 ಜನರಿಗೆ ರಾಜಕೀಯಕ್ಕೆ ಬರಲು ಅವಕಾಶ ಇದೆ. ಆದರೆ ನಮ್ಮ ಕ್ರೆಡಿಬಿಲಿಟಿಯನ್ನು ನಾವೇ ಕಳೆದುಕೊಳ್ಳುವುದು ದುರಂತದ ಸಂಗತಿ ಎಂದರು.

ಅನೇಕರದ್ದು ಸಿಡಿ ಇದೆ ಎಂದು ಹೇಳಿದ್ದಾರೆ.



ಅಂದರೆ ಸಿಎಂ, ಡಿಸಿಎಂ, ಸ್ಪೀಕರ್ ಅವರ ಸಿಡಿ ಇದೆ ಅಂತಾನಾ? ಇದು ನಿಜಕ್ಕೂ ತಲೆ ತಗ್ಗಿಸುವ ವಿಚಾರ. ನಾವು ಕುಟುಂಬಗಳಿಗೆ, ಸ್ನೇಹಿತರಿಗೆ ಹೇಗೆ ಮುಖ ತೋರಿಸುವುದು. ನಮಗೂ ನೈತಿಕತೆ ಇರಬೇಕಲ್ವಾ. ಮಾಡುವವರಿಗೆ ಮಾಡಿಸಿಕೊಂಡವರಿಗೂ ಇದೇ ಬೇಕು ಅಂದ್ರೆ ಏನು? ಯಾರು ಟ್ರಿಕ್ಸ್ ಮಾಡುತ್ತಿದ್ದಾರೆ ಎನ್ನುವುದು ನಮಗೇನು ಗೊತ್ತು. ಹೌದು, ಮುಜುಗರ ತಂದಿದೆ. ನಾವೇನಾದ್ರೂ ಉಳಿಸಿಕೊಂಡಿದ್ದೇವಾ ಎಂದು ಪ್ರಶ್ನಿಸಿದರು.

ಹನಿಟ್ರ್ಯಾಪ್ ವಿಚಾರದಲ್ಲಿ ಸ್ವಯಂಪ್ರೇರಿತ ದೂರನ್ನ ಹೇಗೆ ತೆಗೆದುಕೊಳ್ಳಲು ಆಗುತ್ತದೆ. ಸದನದಲ್ಲಿ ಚರ್ಚೆ ಆಗಿರುವುದರಿಂದ ಅವರೇ ದೂರು ಕೊಡಬೇಕು. ಯಾರೆಲ್ಲಾ ಹನಿಟ್ರ್ಯಾಪ್ ಮಾಡುತ್ತಿದ್ದಾರೆ ಎಂದು ದೂರು ಕೊಡಲಿ. ಯುವಕ ಯುವತಿಯವರು ಯಾರೂ ರಾಜಕಾರಣಿ ಆಗಬೇಕು ಎಂದು ಹೇಳುತ್ತಿಲ್ಲ. ಡಾಕ್ಟರ್, ಇಂಜಿನಿಯರ್ ಆಗಬೇಕು ಎಂದು ಹೇಳುತ್ತಾರೆ ಎಂದರು.

ಹಿಂದೆ ಇದೇ ಸದನದಲ್ಲಿ ಬಿಜೆಪಿಯವರು ಏಕಪತ್ನಿ ವ್ರತಸ್ಥರಲ್ಲ ಅಂದಿದ್ದರು. ಇವರು ಇರಬಹುದು ಆದರೆ ನಾವಲ್ಲ. ಜನ ಮತ ಹಾಕಿ ಇಲ್ಲಿಗೆ ಕಳುಹಿಸಿರುತ್ತಾರೆ. ಹೀಗೆ ಆದಾಗ ಮುಜುಗರ ಆಗೇ ಆಗುತ್ತದೆ. ಇತಿಹಾಸ ತೆಗೆದು ನೋಡಿ, ರಾಜಕಾರಣಿಯಿಂದ ಸಾಮ್ರಾಜ್ಯ ಬೆಳೆದದ್ದು ಇದೇ ಸಂಸ್ಕೃತಿಯಲ್ಲೇ. ಯಾರೋ ಬಂದು ನಮಗೆ ಏನೋ ಮಾಡುತ್ತಾರೆ ಅಂದರೆ ನಾವು ಅದಕ್ಕೆ ತಯಾರು ಇದ್ದೇವೆ ಅಂತಾನಾ? ಎಂದು ಕೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com